
ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 22, ಸಂಚಿಕೆ: 21, ಪುಟಗಳು: 8, ಬುಧವಾರ, 30 ಅಕ್ಟೋಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ಮಂಡ್ಯ। ಮೈಸೂರು। ಚಾಮರಾಜನಗರ ₹3


ಸುಭಾಷಿತ

ಹಿರಿಮೆಯ ಗುಣವೆಂದರೆ
ಅಹಂಕಾರವಿಲ್ಲದೆ ಬಾಳುವುದು.

। ತಿರುಗಳ್ಳುವರ್

## ಪಂಚಾಂಗ

(ಬುಧವಾರ 30, ಅಕ್ಟೋಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಆಶ್ವಯುಜ ಮಾಸ, ಕೃಷ್ಣ ಪಕ್ಷ,
- ತಿಥಿ : ತ್ರಯೋದಶಿ
- ನಕ್ಷತ್ರ : ಹಸ್ತ
- ರಾಹುಕಾಲ - 12.07 ರಿಂದ 1.35
- ಗುಳಿಕಕಾಲ - 10.39 ರಿಂದ 12.07
- ಯಮಗಂಡಕಾಲ - 7.43 ರಿಂದ 9.11




ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines


# ಮಂಡ್ಯದಲ್ಲೂ ವಕ್ಫ್ ಸಮಸ್ಯೆ!

## ವಿಜಯಪುರದ ಮತ್ತೊಂದು ಮಠಕ್ಕೆ ಬಂತು ನೋಟಿಸ್

**ಬೆಂಗಳೂರು:** ವಕ್ಫ್ ಮಂಡಳಿ ನೋಟಿಸ್ ನಿಂದ ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳ ರೈತರು ಕಂಗೆಟ್ಟಿರುವ ಮಧ್ಯೆಯೇ ಇದೀಗ ದಕ್ಷಿಣ ಕರ್ನಾಟಕಕ್ಕೂ ವಕ್ಫ್ ಆತಂಕ ಆವರಿಸಿದೆ. ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ಬೆಳ್ಳೂರಿನಲ್ಲಿ ತಮ್ಮ ಹೆಸರಿಗೆ ಪಹಣಿ ಮಾಡಿಕೊಡುವಂತೆ ಜಾಮೀಯ ಮಸೀದಿ ವಕ್ಫ್ ಕಮಿಟಿಗೆ ಬೆಳ್ಳೂರು ಮುಸ್ಲಿಮರು ಪತ್ರ ಬರೆದಿದ್ದಾರೆ.

ಬೆಳ್ಳೂರು ಗ್ರಾಮದ ಸರ್ವೆ ನಂ. 472ರಲ್ಲಿ 20 ಎಕರೆ ಜಾಮೀಯ ಮಸೀದಿಗೆ, 34 ಎಕರೆ 12ಗುಂಟೆ ಸೂಫಿ ಸಂತರಿಗೆ, ಸರ್ವೆ ನಂ 73ರಲ್ಲಿ 6 ಎಕರೆ 6 ಗುಂಟೆ ಖಬರಸ್ಥಾನ್‌ಗೆ ಪಹಣಿ ಮಾಡಲು ಪತ್ರದಲ್ಲಿ ಮನವಿ ಮಾಡಲಾಗಿದೆ. 1921, 1932 ಹಾಗೂ 1940 ರಲ್ಲಿ ಮೈಸೂರು ಸರ್ಕಾರ ಮಸೀದಿ, ಖಬರಸ್ಥಾನ್ ಮತ್ತು ಸೂಫಿ ಸಂತರಿಗೆ ಜಮೀನು ನೀಡಿ ಆದೇಶಿಸಿದೆ. ಆ ಜಮೀನುಗಳ ಸ್ಕೆಚ್ ಕೂಡ ಆಗಿದೆ ಎಂದು ಆದೇಶ ಸಂಖ್ಯೆಯನ್ನು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಆದರೆ, ಪತ್ರದಲ್ಲಿ ಉಲ್ಲೇಖಿಸಿರುವ ಸರ್ವೆ ನಂ. 472ರಲ್ಲಿ 14.24 ಗುಂಟೆ ಗೋಮಾಳ ಇದ್ದು, 5ಕ್ಕೂ ಹೆಚ್ಚು ರೈತರಿಗೆ ಸೇರಿದ 19.88 ಗುಂಟೆ ಜಮೀನು ಆಗಿದೆ. ಗೋಮಾಳ ಹಾಗೂ ರೈತರಿಗೆ ಜಮೀನುಗಳನ್ನು ತಮ್ಮ ಹೆಸರಿಗೆ ಪಹಣಿ ಮಾಡಲು ಕ್ರಮ ವಹಿಸುವಂತೆ ಮುಸ್ಲಿಮರು ಮನವಿ ಮಾಡಿದ್ದಾರೆ.




**ವಿಜಯಪುರದ ಮತ್ತೊಂದು ಮಠಕ್ಕೆ ವಕ್ಫ್ ನೋಟಿಸ್:** ವಿಜಯಪುರ ಜಿಲ್ಲೆಯ ಮತ್ತೊಂದು ಮಠದ ಆಸ್ತಿ ವಕ್ಫ್ ಪಾಲಾಗುವ ಭೀತಿ ಎದುರಾಗಿದೆ. ಸಿಂದಗಿ ತಾಲೂಕಿನ ಯರಗಲ್ ಬಿಕೆ ಗ್ರಾಮದ ಸಿದ್ದ ಶಂಕರಲಿಂಗ ಮಠದ ಆಸ್ತಿಗೆ ವಕ್ಫ್ ಮಂಡಳಿ ನೋಟಿಸ್ ಬಂದಿದೆ. ಮಠದ 8.16 ಏಕರೆ ಜಮೀನು ವಕ್ಫ್ ಪಾಲಾಗುವ ಆತಂಕ ಎದುರಾಗಿದೆ. 1952 ರಲ್ಲಿ ಸಿಂದಗಿಯ ಕುಲಕರ್ಣಿ ಮನೆತನದಿಂದ ಮಠಕ್ಕೆ ದಾನವಾಗಿ ನೀಡಿದ್ದ ಆಸ್ತಿ ಇದಾಗಿದೆ. 2018-19ರಲ್ಲಿ ಮಠದ ಜಮೀನಿನ ಪಹಣಿಯಲ್ಲಿ ವಕ್ಫ್ ಹೆಸರು ಸೇರ್ಪಡೆಯಾಗಿತ್ತು. ಶಂಕರಲಿಂಗ ಮಹಾಪುರುಷರ ಹೆಸರಿಲ್ಲಿರುವ 8 ಏಕರೆ 16 ಗುಂಟೆ ಜಮೀನಿನ ಪಹಣಿಯಲ್ಲಿ 2018ರಲ್ಲಿ ಯತಿಮ್ ಶಾ ವಾಲಿ ಜಾಮೀಯಾ ಮಸೀದ್ ಸುನ್ನಿ ವಕ್ಫ್ ಬೋರ್ಡ್ ಹೆಸರು ಸೇರ್ಪಡೆಯಾಗಿತ್ತು. ಈ ವಿಚಾರವಾಗಿ ಇದೀಗ ಮಠದ ಪೀಠಾಧಿಕಾರಿ ಸಿದ್ದರಾಜು ಸ್ವಾಮೀಜಿ ಆತಂಕ ವ್ಯಕ್ತಪಡಿಸಿದ್ದಾರೆ.

ಪುಟ 2

## ವಿಜಯಪುರ ರೈತರ ಧರಣಿಗೆ ಸಚಿವ ಪ್ರಲ್ಹಾದ್ ಜೋಶಿ ಸಾಥ್

**ಹುಬ್ಬಳ್ಳಿ:** ವಿಜಯಪುರದಲ್ಲಿ ರೈತರು ಸರ್ಕಾರದ ವಿರುದ್ಧ ಬಂಡೆದ್ದಿದ್ದಾರೆ. ವಕ್ಫ್ ಆಸ್ತಿ ವಿವಾದ ಕುರಿತಂತೆ ರೈತರು ಸರ್ಕಾರದ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ. ಹೀಗಾಗಿ ಇಂದು ಜಿಲ್ಲಾಧಿಕಾರಿ ಕಛೇರಿ ಮುಂದೆ ರೈತರು ನಡೆಸುತ್ತಿರುವ ಹೋರಾಟಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಾಥ್ ನೀಡಲಿದ್ದಾರೆ.



ವಿಜಯಪುರ ಜಿಲ್ಲೆಯ ರೈತರ ಸಾವಿರಾರು ಎಕರೆ ಜಮೀನು ವಕ್ಫ್ ಮಂಡಳಿ ಹೆಸರಿನಲ್ಲಿ ದಾಖಲಾಗಿರುವುದನ್ನು ಖಂಡಿಸಿ, ರೈತರು ವಿಜಯಪುರದ ಜಿಲ್ಲಾಧಿಕಾರಿ ಕಛೇರಿ ಮುಂದೆ ಧರಣಿ ಆರಂಭಿಸಿದ್ದು, ಇಂದು ಧರಣಿ ನಿರತ ರೈತರನ್ನು ಭೇಟಿ ಮಾಡಿ ಬಳಿಕ ಹೋರಾಟದಲ್ಲಿ ಭಾಗಿಯಾಗಲಿದ್ದಾರೆ.



ರೈತರ ಜಮೀನುಗಳನ್ನು ವಕ್ಫ್ ಆಸ್ತಿಯಾಗಿ ಕಬಳಿಸುವುದರ ಹಿಂದೆ ಕಾಂಗ್ರೆಸ್ ಮತ್ತು ಸಚಿವ ಜಮೀರ್ ಕುಮ್ಮಕ್ಕು ಕೆಲಸ ಮಾಡಿರುವುದು ಸ್ಪಷ್ಟ. ಇವರೆಲ್ಲರೂ ಸೇರಿ, ರೈತರನ್ನು ಭಯಭೀತರನ್ನಾಗಿ ಮಾಡಿ ಅವರ ಜಮೀನನ್ನು ಕಬಳಿಸುವ ಹುನ್ನಾರ ಮಾಡಿದ್ದಾರೆ ಎಂದು ಪ್ರಲ್ಹಾದ್ ಜೋಶಿ ಆರೋಪಿಸಿದ್ದಾರೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಮುಡಾ: ವಕ್ರತುಂಡ ಸೊಸೈಟಿ ಹೆಸರಿನಲ್ಲಿ ಅವ್ಯವಹಾರ ಆರೋಪ

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮುಡಾದ 50:50 ಹಗರಣ ಸಂಬಂಧ ಮೈಸೂರಿನ ವಿವಿಧೆಡೆ ದಾಳಿ ನಡೆಸಿದ್ದ ಜಾರಿ ನಿರ್ದೇಶನಾಲಯ ಅಧಿಕಾರಿಗಳು ಅನೇಕ ಮಹತ್ವದ ದಾಖಲೆಗಳನ್ನು ಕಲೆಹಾಕಿದ್ದರು. ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘದ ಕಚೇರಿ ಮೇಲೂ ದಾಳಿ ನಡೆಸಿದ್ದ ಇಡಿ ಅಧಿಕಾರಿಗಳು ಅನೇಕ ದಾಖಲೆಗಳನ್ನು ಪರಿಶೀಲನೆ ಮಾಡಿದ್ದರು. ಇದರಿಂದ, ವಕ್ರತುಂಡ ಸೊಸೈಟಿ ಹೆಸರಿನಲ್ಲಿಯೂ ಅವ್ಯವಹಾರ ನಡೆದಿತ್ತೇ ಎಂಬ ಅನುಮಾನ

ಪುಟ 2



### ದರ್ಶನ್‌ಗೆ ದೀಪಾವಳಿ ಉಡುಗೊರೆ

ವಿವರ ಪುಟ 8


"ಸಿರಿಗನ್ನಡಂ ಗೆಲ್ಗೆ - ಸಿರಿಗನ್ನಡಂ ಬಾಳ್ಗೆ"


ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು





ಶ್ರೀ ಡಿ ಕೆ ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು,
ಬೆಂಗಳೂರು ನಗರಾಭಿವೃದ್ಧಿ ಮತ್ತು
ಜಲಸಂಪನ್ಮೂಲ ಸಚಿವರು

ನಾಡಿನ ಸಮಸ್ತ ಜನತೆಗೆ
೬೯ನೇ ಕನ್ನಡ ರಾಜ್ಯೋತ್ಸವದ
ಶುಭಾಶಯಗಳು

ಕರುನಾಡಿನ ನೆಲ, ಜಲ, ಭಾಷೆ, ಕಲೆ, ಸಂಸ್ಕೃತಿ,
ಪರಂಪರೆಯ ಪ್ರತೀಕ. ನಮ್ಮ ಗೌರವ, ಸ್ವಾಭಿಮಾನದ ಸಂಕೇತ

೬೯ನೇ ಕನ್ನಡ ರಾಜ್ಯೋತ್ಸವದ ಈ ಶುಭ ಸಂದರ್ಭದಲ್ಲಿ ಎಲ್ಲೆಡೆ ನವೆಂಬರ್ ಒಂದರಂದು ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವುದು ಮತ್ತು ಯುವ ಪೀಳಿಗೆಗೆ ಕನ್ನಡ ನಾಡಿನ ಇತಿಹಾಸ, ಸಂಸ್ಕೃತಿ, ಕಲೆ, ಭಾಷೆ ಬಗ್ಗೆ ಅರಿವು ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ.

ಏಕೀಕೃತ ರಾಜ್ಯವಾಗಿ ನವೆಂಬರ್ ೧, ೧೯೭೩ ರಂದು ಕರ್ನಾಟಕ ರಾಜ್ಯವೆಂದು ಮರುನಾಮಕರಣಗೊಂಡು ೫೧ ವರ್ಷ ಪೂರ್ಣಗೊಂಡಿರುವ ಹಿನ್ನಲೆಯಲ್ಲಿ ಅಂಗಡಿ ಮುಂಗಟ್ಟುಗಳ, ಬಹು ರಾಷ್ಟ್ರೀಯ ಸಂಸ್ಥೆಗಳ ಹಾಗೂ ವ್ಯಾಪಾರ ಉದ್ದಿಮೆ ಕಟ್ಟಡಗಳಲ್ಲಿ ಕನ್ನಡ ಬಾವುಟವನ್ನು ಸೂಕ್ತ ರೀತಿಯಲ್ಲಿ ಪ್ರದರ್ಶಿಸುವುದರ ಜೊತೆಗೆ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸುವುದರ ಮೂಲಕ ಕನ್ನಡದ ಕಂಪನ್ನು ಎಲ್ಲೆಡೆ ಪಸರಿಸಲು ತಮ್ಮೆಲ್ಲರಲ್ಲೂ ಮನವಿ ಮಾಡುತ್ತೇವೆ.

: ಜೈ ಕರ್ನಾಟಕ :

## 3 ತಿಂಗಳ ಒಳಗೆ ಒಳಮೀಸಲಾತಿ ಜಾರಿಗೆ ಕ್ರಮ

**ಬೆಂಗಳೂರು:** ಒಳಮೀಸಲಾತಿ ನೀಡಲು ಕ್ಯಾಬಿನೆಟ್‌ನಲ್ಲಿ ಒಮ್ಮತದ ನಿರ್ಧಾರ ಮಾಡಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಒಳಮೀಸಲಾತಿ ಜಾರಿ ವಿಚಾರವಾಗಿ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಒಳಮೀಸಲಾತಿ ಬಗ್ಗೆ ಸೋಮವಾರ ಕ್ಯಾಬಿನೆಟ್‌ನಲ್ಲಿ ತರ್ಮಾನ ಆಗಿದೆ. ಸೋಮವಾರದ ಕ್ಯಾಬಿನೆಟ್‌ನಲ್ಲಿ ಒಳಮೀಸಲಾತಿ ಜಾರಿಗೆ ಒಪ್ಪಲಾಗಿದೆ. ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಏಕ ಸದಸ್ಯ ಆಯೋಗ ರಚನೆ ಮಾಡುತ್ತೇವೆ. ಆಯೋಗವೂ 3 ತಿಂಗಳ ಒಳಗೆ ವರದಿ ಕೊಡಲಿದೆ ಎಂದರು. ಮೀಸಲಾತಿ ನೀಡಲು ಅಂಕಿಅಂಶಗಳು ಇಲ್ಲ ಅನ್ನೋದು ಕೆಲವರ ಅಭಿಪ್ರಾಯ. ಈ ಕಾರಣಕ್ಕೆ ಅಂಕಿಅಂಶಗಳ ಸಂಗ್ರಹಕ್ಕೆ ಆಯೋಗ ರಚನೆ ಮಾಡ್ತಿದ್ದೇವೆ. ಕೂಡಲೇ ಆಯೋಗ ರಚನೆ ಮಾಡುತ್ತೇವೆ. ಅಲ್ಲಿವರೆಗೂ ಯಾವುದೇ ನೇಮಕಾತಿ ಪ್ರಕ್ರಿಯೆ ಮಾಡೋದಿಲ್ಲ. ಈಗ ಯಾವುದು ನೋಟೀಫಿಕೇಶನ್ ಆಗಿದೆಯೋ ಅದನ್ನು ಹೊರತುಪಡಿಸಿ ಹೊಸ ನೇಮಕಾತಿ ಪ್ರಕ್ರಿಯೆ ಪ್ರಾರಂಭ ಮಾಡಲ್ಲ. ಜಡ್ಜ್ ಯಾರು ಅಂತ ಇವತ್ತೇ ತರ್ಮಾನ ಮಾಡುತ್ತೇವೆ. 3 ತಿಂಗಳಲ್ಲಿ ವರದಿ ಬರಲಿದ್ದು, ಅಲ್ಲಿಯವರೆಗೂ ಹೊಸ ನೇಮಕಾತಿ ಪ್ರಕ್ರಿಯೆ ಶುರು ಮಾಡಲ್ಲ ಎಂದು ಸ್ಪಷ್ಟನೆ ನೀಡಿದರು.

## ಜಾತಿಗಣತಿಯನ್ನ ಈ ಸರ್ಕಾರ ಯಾಕೆ ಬಿಡುಗಡೆ ಮಾಡ್ತಿಲ್ಲ

**ಬೆಂಗಳೂರು:** ಜಾತಿಗಣತಿ ಎಂದು ಈ ಸರ್ಕಾರ ಯಾಕೆ ಇನ್ನೂ ಬಿಡುಗಡೆ ಮಾಡಿಲ್ಲ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಸೋಮವಾರದ ಕ್ಯಾಬಿನೆಟ್‌ನಲ್ಲಿ ಜಾತಿಗಣತಿ ವಿಷಯ ಚರ್ಚೆ ಆಗದ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕಾಂತರಾಜು ವರದಿ ಅಂತ ಇದೇ ಸಿದ್ದರಾಮಯ್ಯ ಭಜನೆ ಮಾಡಿದ್ದರು. ಕುಮಾರಸ್ವಾಮಿ ವರದಿ ಸ್ವೀಕಾರ ಮಾಡಿಲ್ಲ ಅಂತ ಸಿದ್ದರಾಮಯ್ಯ ಆರೋಪ ಮಾಡಿದ್ದರು. ಇವರು ಅಧಿಕಾರಕ್ಕೆ ಬಂದು ಎಷ್ಟು ವರ್ಷ ಆಯ್ತು? ಒಂದೂವರೆ ವರ್ಷದ ಮೇಲೆ ಆಯಿತು. ಕಾಂತರಾಜು ವರದಿ ಇಟ್ಟುಕೊಂಡು ಏನು ದಿನ ಬೆಳಗುತ್ತಿದ್ದಾರಾ ಗಂಧದ ಕಡ್ಡಿ ಇಟ್ಟುಕೊಂಡು? ಜಾತಿಗಣತಿ ಬಿಡುಗಡೆ ಮಾಡಲು ಯಾಕೆ



ಆಗುತ್ತಿಲ್ಲ ಎಂದು ಪ್ರಶ್ನಿಸಿದರು. ಕಾಂತರಾಜು ವರದಿ ಮತ್ತು ಜಯಪ್ರಕಾಶ್ ಹೆಗ್ಡೆ ವರದಿ ಎರಡು ಸ್ವೀಕಾರ ಮಾಡಿ ಎಷ್ಟು ದಿನ ಆಯಿತು. ಇನ್ನೂ ಅದನ್ನು ಇಟ್ಟುಕೊಂಡು ಏನು ಮಾಡುತ್ತಿದ್ದೀರಾ? ದೊಡ್ಡ ಮೇಧಾವಿಗಳು ಎರಡು ವರದಿ ಕೊಟ್ಟಿದ್ದಾರೆ. ಇನ್ನು ಯಾಕೆ ವರದಿ ಬಿಡುಗಡೆ ಮಾಡಿಲ್ಲ? ಸಿದ್ದರಾಮಯ್ಯ ನನ್ನ ಮೇಲೆ ಆಪಾದನೆ ಮಾಡುತ್ತಿದ್ದರು. ಸಿದ್ದರಾಮಯ್ಯ ಎರಡು ವರದಿ ಸ್ವೀಕಾರ ಮಾಡಿದ್ದಾರೆ. ಎರಡು ವರದಿ ಇದೆ. ಆದರೂ ನಾಳೆ ಇಡುತ್ತೇನೆ, ನಾಡಿದ್ದು ಕ್ಯಾಬಿನೆಟ್‌ನಲ್ಲಿ ಇಡುತ್ತೇನೆ ಎಂದು ಚರ್ಚೆ ನಡೆಯುತ್ತಿದೆ. ಉಪಸಮಿತಿ ಮಾಡುತ್ತೇನೆ ಎನ್ನುತ್ತಿದ್ದಾರೆ. ಇಂತಹ ಸಬೂಬು ಹೇಳಿ ಎಷ್ಟು ದಿನ ಹೋಗ್ತೀರಾ? ಚುನಾವಣೆ ಘೋಷಣೆ ಆಗಿದ್ದು ಈಗ. ಲೋಕಸಭೆ ಚುನಾವಣೆ ಮುಂಚೆ ವರದಿ ಸ್ವೀಕಾರ ಮಾಡಿದ್ದೀರಿ. ಯಾಕೆ ಬಿಡುಗಡೆ ಮಾಡಲಿಲ್ಲ ಎಂದು ಹರಿಹಾಯ್ದರು.

# ಜಮೀರ್ ನೇತೃತ್ವದಲ್ಲಿ ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ

**ಬೆಂಗಳೂರು:** ರಾಜ್ಯ ಸರ್ಕಾರ ಮಣ್ಣು ತಿನ್ನುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ, ಅವರು ಆಕ್ರೋಶ ಹೊರಹಾಕಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ತಲತಲಾಂತರದಿಂದ ಇದ್ದ ಪಿತ್ರಾರ್ಜಿತ ಆಸ್ತಿಯನ್ನು ರಾತ್ರೋರಾತ್ರಿ ವಕ್ಫ್ ಆಸ್ತಿ ಎಂದು ಘೋಷಿಸಿದರೆ ರೈತರು ಬೀದಿಗೆ ಬಂದು ಏನು ಮಾಡಬೇಕು ಎಂದು ಪ್ರಶ್ನಿಸಿದರು. ನಾವಿದರ ವಿರುದ್ಧ ಹೋರಾಟ ಮಾಡುತ್ತೇವೆ. ರೈತರಿಗೆ ಧ್ವನಿಗೂಡಿಸುತ್ತೇವೆ. ಅವರ ಬೆಂಬಲಕ್ಕೆ ನಿಲ್ಲುವುದಾಗಿ ಹೇಳಿದರೆ ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ ಎಂದು ನಮ್ಮ ಮೇಲೆ ಆರೋಪ ಮಾಡುತ್ತಾರೆ ಎಂದು ಟೀಕಿಸಿದರು.

ಈ ರೀತಿ ಅಲ್ಪಸಂಖ್ಯಾತರನ್ನು ಎತ್ತಿಕಟ್ಟುವ, ಈ ದೇಶವನ್ನು ಜಾತಿ, ಧರ್ಮದ ಆಧಾರದಲ್ಲಿ ವಿಭಜಿಸುವ ಕೆಲಸವನ್ನು ಕಾಂಗ್ರೆಸ್ ಪಕ್ಷ ಹಿಂದಿನಿಂದಲೂ ಮಾಡುತ್ತಾ ಬರುತ್ತಿದೆ. ಅದೇ ನಿಟ್ಟಿನಲ್ಲಿ ಜಮೀರ್ ಅಹ್ಮದ್ ನೇತೃತ್ವದಲ್ಲಿ ಇವತ್ತು ರಾಜ್ಯದಲ್ಲಿ ಬೆಂಕಿ ಹಚ್ಚುವ ಕೆಲಸ ನಡೆದಿದೆ ಎಂದು ಆರೋಪಿಸಿದರು.

ನಿನ್ನೆ ಸಚಿವರು 120 ಜನ ರೈತರಿಗೆ ನೋಟಿಸ್ ಕೊಟ್ಟಿದ್ದನ್ನು ಒಪ್ಪಿಕೊಂಡಿದ್ದಾರೆ. ಅದಕ್ಕೆ ಬಿಜೆಪಿ ಹೊಣೆಗಾರನೇ? ಅದಕ್ಕೆ



ಬಿಜೆಪಿ ಕಾರಣವೇ ಎಂದು ಕೇಳಿದರು. ಇದನ್ನು ಬಿಜೆಪಿ ಗಟ್ಟಿಯಾಗಿ ತೆಗೆದುಕೊಳ್ಳದೆ ಇದ್ದರೆ ರಾಜ್ಯ ಸರ್ಕಾರದ ಕ್ರಮದಿಂದ ನೂರಾರು ವರ್ಷಗಳಿಂದ ಉಳುಮೆ ಮಾಡುತ್ತಿದ್ದ ರೈತರು ಬೀದಿಗೆ ಬರಬೇಕಾಗುತ್ತಿತ್ತು ಎಂದು ವಿಜಯೇಂದ್ರ ವಿಶ್ಲೇಷಿಸಿದರು.

ಮಾಜಿ ಉಪ ಮುಖ್ಯಮಂತ್ರಿ ಮತ್ತು ಹಿರಿಯರಾದ ಗೋವಿಂದ ಕಾರಜೋಳ ಅವರ ನೇತೃತ್ವದಲ್ಲಿ ಬಿಜೆಪಿ ತಂಡ



ಈಗಾಗಲೇ ವಿಜಯಪುರ ತಲುಪಿದೆ. ವಿಜಯಪುರ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೆ ಭೇಟಿ ಕೊಟ್ಟು ರೈತರನ್ನು ಸಂಪರ್ಕಿಸಿ ಅವರಿಗೆ ಧೈರ್ಯ ತುಂಬುವ ಕಾರ್ಯ ಮಾಡಲಿದ್ದಾರೆ ಎಂದರು.

ಈ ವಿಚಾರದಲ್ಲಿ ಬಿಜೆಪಿ ನಿಲುವು ಸ್ಪಷ್ಟವಾಗಿದೆ. ರಾಜ್ಯ ಸರಕಾರ ರೈತರಿಗೆ ತೊಂದರೆ ಕೊಡುವ ಕೆಲಸ ಮಾಡುತ್ತಿದ್ದು, ಬಿಜೆಪಿ ರೈತರ ಪರ ಇದೆ. ನಾವು ಅವರ ಜೊತೆಯಲ್ಲಿದ್ದೇವೆ. ರೈತರ ಈ ಸಮಸ್ಯೆ ಪರಿಹಾರಕ್ಕೆ ನಾವು ಸಂಪೂರ್ಣ ಸಹಕಾರ ನೀಡುತ್ತೇವೆ. ಕಾನೂನಿನ ಸಹಾಯ ಸೇರಿ ಯಾವುದೇ ರೀತಿಯ ಸಹಕಾರವನ್ನು ಬಿಜೆಪಿ ಕೊಡಲಿದ್ದು, ಅವರ ಜೊತೆ ಗಟ್ಟಿಯಾಗಿ ನಿಲ್ಲಲಿದೆ ಎಂದು ತಿಳಿಸಿದರು.

ಚನ್ನಪಟ್ಟಣ ಉಪಚುನಾವಣೆಗೆ ಸಂಬಂಧಿಸಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ನಿಖಿಲ್ ಕುಮಾರಸ್ವಾಮಿಯವರು ಹಿರಿಯರಾದ ಮಾಜಿ ಪ್ರಧಾನಮಂತ್ರಿ ದೇವೇಗೌಡರ ಮೊಮ್ಮಗ ಇರಬಹುದು. ಆದರೆ ಅವರು ಇವತ್ತು ಎನ್‌ಡಿಎ ಅಭ್ಯರ್ಥಿ. ನಿಖಿಲ್ ಕುಮಾರಸ್ವಾಮಿಯವರನ್ನು ಗೆಲ್ಲಿಸುವ ಕರ್ತವ್ಯ ನಮ್ಮೆಲ್ಲರದೂ ಇದೆ. ಯಾವ ರೀತಿ ರಾಜಕಾರಣದಲ್ಲಿ ಹುಚ್ಚುಚ್ಚಾಗಿ ಆಡಿ ಪಕ್ಷ ಬಿಟ್ಟು ಹೋಗಿದ್ದಾರೆ. ಇವೆಲ್ಲವನ್ನೂ ಆ ಕ್ಷೇತ್ರದ ಜನರೂ ಗಮನಿಸುತ್ತಿದ್ದಾರೆ. ಈ ವಯಸ್ಸಿನಲ್ಲೂ ಮಾಜಿ ಪ್ರಧಾನಮಂತ್ರಿ ದೇವೇಗೌಡರ ಉತ್ಸಾಹವನ್ನು ಮೆಚ್ಚಿಕೊಳ್ಳಬೇಕು. ಯುವಕರಿಗೂ ದೇವೇಗೌಡರು ಪ್ರೇರಣೆ. ಅವರು ಬಂದು ಪ್ರಚಾರ ಮಾಡುತ್ತಾರೆಂದರೆ ಕಾಂಗ್ರೆಸ್ ಪಕ್ಷದವರಿಗೆ ಆತಂಕ ಶುರುವಾಗಿದೆ. ದೇವೇಗೌಡರು ಬಂದರೆ ಆ ಕ್ಷೇತ್ರವನ್ನು ಉಳಿಸಿಕೊಳ್ಳಲು ಸಾಧ್ಯವಿಲ್ಲ ಅನ್ನುವ ಸತ್ಯ ಅವರಿಗೆ ಅರ್ಥವಾಗಿದೆ. ಹಾಗಾಗಿ ಈ ರೀತಿ ಮನಬಂದಂತೆ ಮಾತನಾಡುತ್ತಿದ್ದಾರೆ ಎಂದು ವಿಜಯೇಂದ್ರ ಕಿಡಿಕಾರಿದರು.

## ಉಪಚುನಾವಣೆ ಸೋಲುವ ಭಯದಿಂದ ಬಿಜೆಪಿ-ಜೆಡಿಎಸ್ ವಕ್ಫ್ ವಿವಾದ ಮಾಡ್ತಿವೆ

**ಬೆಂಗಳೂರು:** ಉಪಚುನಾವಣೆ ಸೋಲುವ ಭಯದಿಂದ ಬಿಜೆಪಿ-ಜೆಡಿಎಸ್ ವಕ್ಫ್ ವಿವಾದವನ್ನ ಮಾಡ್ತಿದೆ ಅಂತಾ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಮತ್ತೆರಡು ಜಿಲ್ಲೆ ರೈತರ ಜಮೀನು ಮತ್ತು ಸಿಂದಗಿ ಮಠದ ಜಾಗ ವಕ್ಫ್ ಆಸ್ತಿ ಅಂತಾ ನಮೂದು ಆಗಿರೋ ವಿಚಾರಕ್ಕೆ ವಿಕಾಸಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಇದು ಬಿಜೆಪಿ-ಜೆಡಿಎಸ್ ಮಾಡ್ತಿರೋ ರಾಜಕೀಯ ಎಂದು ಕಿಡಿಕಾರಿದರು.

ಸಚಿವ ಎಂ.ಬಿ.ಪಾಟೀಲ್ ಅವರು ಎಲ್ಲಾ ವಿವರಣೆ ಕೊಟ್ಟಿದ್ದಾರೆ. ಯಾರು ಬೇಕಾದರೂ ಇದು ನಮ್ಮ ಆಸ್ತಿ ಕ್ಲೈಮ್ ಮಾಡಬಹುದು. ಆದರೆ ಅದಕ್ಕೆ ಬೇಕಾಗಿರೋದು ದಾಖಲಾತಿ. ದಾಖಲಾತಿ ಇದ್ದರೆ ಏನು ತೊಂದರೆ ಇಲ್ಲ ಅಂತಾ ನಿನ್ನೆ ಸಚಿವರು ಹೇಳಿದ್ದಾರೆ. ವಕ್ಫ್ ಅದಾಲತ್ ಆದಾಗ ನಮ್ಮ ಜಾಗ ಅಂತಾ ಕೆಲವರು ಹೇಳಿದ್ದಾರೆ. ಆದರೆ ಅದಕ್ಕೆ ಯಾರು ಆತಂಕ ಪಡೋ ಅಗತ್ಯ ಇಲ್ಲ. ಈಗಾಗಲೇ ಸರ್ಕಾರ ಇದರ ಬಗ್ಗೆ ಸ್ಪಷ್ಟನೆ ಕೊಟ್ಟಿದೆ. ರೈತರ ಜಾಗ ಸರ್ಕಾರ ವಾಪಸ್ ಪಡೆಯೊಲ್ಲ. ಯಾರೂ ಆತಂಕ ಪಡೋ ಅಗತ್ಯ ಇಲ್ಲ ಎಂದರು.

ಬಿಜೆಪಿ-ಜೆಡಿಎಸ್ ಅವರು ರಾಜಕೀಯ ಮಾಡೋಕೆ ಮಾಡ್ತಿದ್ದಾರೆ. ಯಾವುದು ದಾಖಲಾತಿ ಇರುತ್ತೋ ಆ ಆಸ್ತಿ ರೈತರಿಗೆ ಇರುತ್ತೆ. ಆದರು ಬಿಜೆಪಿ-ಜೆಡಿಎಸ್ ಅವರು ವಿವಾದ ಮಾಡ್ತಿದ್ದಾರೆ. ಉಪಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್‌ಗೆ ಸೋಲುವ ಭೀತಿ ಇದೆ. ಹೀಗಾಗಿ ವಿವಾದ ಮಾಡ್ತಿದ್ದಾರೆ. ಹಿಂದೂ-ಮುಸ್ಲಿಂ ಅಂತಾ ಮಾಡಿದ್ರೆ ಗೆಲ್ಲಬಹುದು ಅನ್ನೋದು ಇವರ ಪ್ಲ್ಯಾನ್ ಎಂದು ಬಿಜೆಪಿ-ಜೆಡಿಎಸ್ ವಿರುದ್ಧ ಪ್ರಿಯಾಂಕ್ ಖರ್ಗೆ ಕಿಡಿಕಾರಿದರು.

ರೈತರ ಜಮೀನಿಗೆ ವಕ್ಫ್ ಬೋರ್ಡ್ ನೋಟಿಸ್ ಒಂದು ಸಮುದಾಯ ಒಲೈಕೆ ಎಂಬ ಕೇಂದ್ರ, ಸಚಿವ



ಕುಮಾರಸ್ವಾಮಿ ಹೇಳಿಕೆಗೆ ತಿರುಗೇಟು ಕೊಟ್ಟ ಪ್ರಿಯಾಂಕ್ ಖರ್ಗೆ, ಅನುಕೂಲಕ್ಕೆ ತಕ್ಕಂತೆ ಕುಮಾರಸ್ವಾಮಿ ನಡೆದುಕೊಳ್ಳುತ್ತಿದ್ದಾರೆ. ರಾಜಕೀಯ ಲಾಭ ಮಾಡೋಕೆ ಇವರು ಹೀಗೆ ಹೇಳ್ತಿದ್ದಾರೆ. ಕೆಲವು ವರ್ಷಗಳ ಹಿಂದೆ ಮುಂದಿನ ಜನ್ಮದಲ್ಲಿ ನಾನು ಮುಸ್ಲಿಂ ಆಗಿ ಹುಟ್ಟಬೇಕು ಅಂತಾ ಹೇಳಿದ್ದು ಯಾರು? ದೇವೇಗೌಡರು ಹಾಗೆ ಹೇಳಿದ್ರು. ಅದನ್ನ ಕುಮಾರಸ್ವಾಮಿ ಮರೆತು ಹೋಗಿದ್ರಾ? ಓಲೈಕೆ ರಾಜಕೀಯ ಮಾಡ್ತಿರೋರು ಯಾರು ಅಂತಾ ಪ್ರಶ್ನೆ ಮಾಡಿದ್ರು. ಇದೇ ಕುಮಾರಸ್ವಾಮಿ ಆರ್‌ಎಸ್‌ಎಸ್ ಬಗ್ಗೆ ಏನ್ ಮಾತಾಡಿದ್ರು ಎಲ್ಲರಿಗೂ ಗೊತ್ತಿದೆ. ಲೇಖನ ಕೂಡಾ ಬರೆದಿದ್ದರು. ಅಧಿಕಾರ ಕೊಟ್ಟಾಗ ಎಲ್ಲವೂ ಉಲ್ಟಾ ಆಗುತ್ತಾ? ನಾನು ಅವತ್ತೇ ಆರ್‌ಎಸ್‌ಎಸ್ ವಿರೋಧ ಮಾಡಿದ್ದೆ, ಇವತ್ತು ವಿರೋಧ ಮಾಡ್ತಿದ್ದೇನೆ. ಕುಮಾರಸ್ವಾಮಿ ಅವರು ಅಂದು ವಿರೋಧ ಮಾಡಿ ಇಂದು ಅಧಿಕಾರಕ್ಕಾಗಿ ಹೀಗೆ ಮಾತಾಡೋದು ಸರಿಯಲ್ಲ ಎಂದು ಕುಮಾರಸ್ವಾಮಿ ವಿರುದ್ಧ ಕಿಡಿಕಾರಿದರು.

### ಬೆಂಗಳೂರಿನಲ್ಲಿ ಮತ್ತೆ ಚಿರತೆ ಪ್ರತ್ಯಕ್ಷ

## ಸ್ಥಳೀಯರಲ್ಲಿ ಹೆಚ್ಚಿದ ಆತಂಕ

**ಬೆಂಗಳೂರು:** ನಗರದ ಹೊರವಲಯದಲ್ಲಿ ಮತ್ತೆ ಚಿರತೆ ಆತಂಕ ಶುರುವಾಗಿದೆ. ರಾತ್ರಿ ಹೊತ್ತು ಆಗಾಗ್ಗೆ ಕಾಣಿಸಿಕೊಳ್ಳುತ್ತಿರುವ ಚಿರತೆ. ಯಲಹಂಕ ವಿಮಾನ ನಿಲ್ದಾಣದ ಸುತ್ತಾ ಮುತ್ತಾ ಇರುವ ಜನರಲ್ಲಿ ಭಯ ಹುಟ್ಟಿಸಿದೆ.



ಹೌದು. ಅದು ಅಕ್ಟೋಬರ್ 29ರ ಸಂಜೆ 7 ಗಂಟೆಯ ಸಮಯ.. ಯಲಹಂಕ ತಾಲೂಕಿನ ನೆಲ್ಲುಕುಂಟೆ ಗ್ರಾಮದಲ್ಲಿರೊ ಇದೇ ಗೋಡೆಯ ಮೇಲೆ ಚಿರತೆ ಹೆಜ್ಜೆ ಹಾಕಿತ್ತು. ಅದೇ ಚಿರತೆಯ ದೃಶ್ಯ ಪಕ್ಕದಲ್ಲೇ ನಿರ್ಮಾಣ ಆಗ್ತಿರೊ ಕಟ್ಟಡದಲ್ಲಿ ಕೆಲಸ ಮಾಡ್ತಿದ್ದ ಕಾರ್ಮಿಕರ ಮೊಬೈಲ್ ನಲ್ಲಿ ಸೆರೆ ಹಿಡಿಯಲಾಗಿದೆ. ಆ ದೃಶ್ಯ ವೈರಲ್ ಆಗುತ್ತಿದ್ದಂತೆ ಸ್ಥಳೀಯರಲ್ಲಿ ಆತಂಕ ಹುಟ್ಟು ಹಾಕಿದೆ. ಏರ್ಪೋರ್ಟ್ ರಸ್ತೆಯ ಹುಣಸೆಮಾರನಹಳ್ಳಿ, ನೆಲ್ಲುಕುಂಟೆ, ಗಂಡಿಗೆನಹಳ್ಳಿ ಜನರು ಘಟನೆಯಿಂದ ತಲ್ಲಣಗೊಂಡಿದ್ದಾರೆ.

ಇನ್ನೂ ಚಿರತೆ ಕಾಣಿಸಿಕೊಂಡಿರೋದು ಇದೇ ಮೊದಲೇನಲ್ಲ. ಕಳೆದ ಭಾನುವಾರ ಕೂಡ ಇದೇ ಜಾಗದಲ್ಲಿ ಚಿರತೆ ಕಾಣಿಸಿಕೊಂಡಿತ್ತಂತೆ. ಆದ್ರೆ ಅದರ ವೀಡಿಯೋ ಸಿಕ್ಕಿರಲಿಲ್ಲ. ಯಾವಾಗಾ ಮಂಗಳವಾರ (ಅ.29) ಚಿರತೆ ಕಾಣಿಸಿಕೊಳ್ತೊ.. ಅದರ ವೀಡಿಯೊ ಸೆರೆ ಹಿಡಿಯಲಾಗಿದೆ. ಇದು ಸ್ಥಳೀಯರಲ್ಲಿ ಭಯ ಹುಟ್ಟಿಸಿದೆ. ತಕ್ಷಣ ಅಲರ್ಟ್ ಆದ ಸ್ಥಳೀಯರು, ಯಲಹಂಕ ವಲಯ ಅರಣ್ಯಾಧಿಕಾರಿಗಳಿಗೆ ವಿಚಾರ ತಿಳಿಸಿದ್ದು, ಇಂದಿನಿಂದ ಚಿರತೆ ಸೆರೆಹಿಡಿಯೊ ಕಾರ್ಯಾಚರಣೆಯ ಭರವಸೆ ನೀಡಿದ್ದಾರೆ.

ಇನ್ನೂ ಬೆಂಗಳೂರಲ್ಲಿ ಪದೇ ಪದೇ ಚಿರತೆ ಕಾಣಿಸಿಕೊಳ್ಳುತ್ತಿದ್ದು, ಜನ ಭಯಭೀತರಾಗಿದ್ದಾರೆ. ಆದಷ್ಟು ಬೇಗ ಅರಣ್ಯ ಇಲಾಖೆ ಸಿಬ್ಬಂದಿ ಚಿರತೆ ಸೆರೆ ಹಿಡಿದು ಜನರಲ್ಲಿನ ಆತಂಕ ದೂರ ಮಾಡಬೇಕಿದೆ.

## ಈ ವರ್ಷದ 2 ಪಿಯುಸಿ ಪರೀಕ್ಷೆಯಲ್ಲೂ ವೆಬ್ ಕಾಸ್ಟಿಂಗ್

**ಬೆಂಗಳೂರು:** ಸಾಮೂಹಿಕ ನಕಲು ತಡೆಯುವ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ವೆಬ್ ಕಾಸ್ಟಿಂಗ್ ಮೊರೆ ಹೋಗಿತ್ತು. ಇದೀಗ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ (ಕೆಎಸ್ಇಎಬಿ) ಈ ವರ್ಷದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕೂಡ ವೆಬ್‌ಕಾಸ್ಟಿಂಗ್‌ಗೆ ಮುಂದಾಗಿದೆ.

ಸಾಮೂಹಿಕ ನಕಲು ತಡೆಯಲು ಮತ್ತು ಪಾರದರ್ಶಕತೆ ಮೂಲಕ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ನಿಟ್ಟನಲ್ಲಿ ಶಿಕ್ಷಣ ಇಲಾಖೆ ಕಳೆದ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ವೆಬ್ ಕಾಸ್ಟಿಂಗ್ ಪರಿಚಯಿಸಲಾಗಿತ್ತು. ಹಾಗಾಗಿ ಮಾರ್ಚ್-ಏಪ್ರಿಲ್ 2025 ರಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕೂಡ ಅದೇ ವ್ಯವಸ್ಥೆಯನ್ನು ಅನುಸರಿಸಲಾಗುತ್ತಿದೆ.

2024ರ ಸಾಲಿನ 2 ಮತ್ತು 3 ದ್ವಿತೀಯ ಪಿಯುಸಿ ಪರೀಕ್ಷೆಗಳಿಗೆ ನಾವು ಸಿಸಿಟಿವಿ ಕ್ಯಾಮೆರಾಗಳನ್ನು ಹೊಂದಿರುವ ಕಾಲೇಜುಗಳನ್ನು ಗುರುತಿಸಿದ್ದೇವೆ ಮತ್ತು ಈಗಾಗಲೇ ವೆಬ್ ಕಾಸ್ಟಿಂಗ್ ಪರೀಕ್ಷೆ ಯಶಸ್ವಿಯಾಗಿದೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿರುವುದಾಗಿ ವರದಿ ಆಗಿದೆ.

ಇನ್ನು 2025ರ ಸಾಲಿನ ಬೋರ್ಡ್ ಪರೀಕ್ಷೆಗಾಗಿ ಪರೀಕ್ಷಾ ಕೇಂದ್ರಗಳನ್ನು ಗುರುತಿಸಲಾದ ಕಾಲೇಜುಗಳಿಗೆ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ಪತ್ರ ಬರೆದಿದ್ದು, ಸಿಸಿಟಿವಿ ಕ್ಯಾಮೆರಾಗಳ ಐಪಿ ಸಂಖ್ಯೆಯನ್ನು ಆಯಾ ಜಿಲ್ಲೆಗಳ ಇಲಾಖೆಯ ಉಪ ನಿರ್ದೇಶಕರಿಗೆ ನೀಡುವಂತೆ ತಿಳಿಸಲಾಗಿದೆ.

# ರಾಜ್ಯವನ್ನು ಮಸೀದಿಗಳೇ ನಡೆಸುತ್ತಿರುವ ಹಾಗನ್ನಿಸುತ್ತಿದೆ: ಕೂಡಲೇ ವಕ್ಫ್ ಬೋರ್ಡ್ ರದ್ದುಪಡಿಸಲು ಪಟ್ಟು

**ಕಲಬುರಗಿ:** ರೈತರ ಜಮೀನು, ಹಿಂದೂ ದೇವಾಲಯ ಹಾಗೂ ಮಠಗಳು ವಕ್ಫ್ ಆಸ್ತಿ ಎಂದು ನೋಟಿಸ್ ನೀಡುತ್ತಿರುವುದನ್ನು ನೋಡಿದರೆ ಈ ರಾಜ್ಯವನ್ನು ಮಸೀದಿಗಳೇ ನಡೆಸುತ್ತಿರುವ ಹಾಗೆ ಅನಿಸುತ್ತಿದೆ. ಕೂಡಲೇ ವಕ್ಫ್ ಬೋರ್ಡ್ ರದ್ದುಪಡಿಸಬೇಕೆಂದು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಾಕೀತು ಮಾಡಿದರು.

ಕಲಬುರಗಿಯ ಐವಾನ್-ಇ-ಶಾಹಿ ಅತಿಥಿಗೃಹದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಬಿಜಾಪುರ, ಯಾದಗಿರಿ, ಕಲಬುರಗಿ, ತುಮಕೂರು, ಚಿತ್ರದುರ್ಗದಲ್ಲಿ ರೈತರ ಪಹಣಿಗಳಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಹಾಗಾಗಿ, ಮಸೀದಿಗಳು ಆ ಜಾಗ, ಈ ಜಾಗ ನಮಗೆ ಸೇರಿದ್ದು ಎಂದು ಸರ್ಕಾರಕ್ಕೆ ಪತ್ರ ಬರೆದಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹೀಗೆ ಮಸೀದಿಗಳು ಸರ್ಕಾರ ನಡೆಸುವಂತಹ ಪರಿಸ್ಥಿತಿ ಇವರು ತಂದುಕೊಂಡಿದ್ದಾರೆ. ಹಾಗಾಗಿ, ತಕ್ಷಣ ವಕ್ಫ್ ಬೋರ್ಡ್ ರದ್ದುಪಡಿಸಬೇಕು. ಎಲ್ಲೆಲ್ಲಿ ಎಷ್ಟೆಷ್ಟು ಆಸ್ತಿ ಇದೆ ಎಂಬುದನ್ನು ವಕ್ಫ್ ಬೋರ್ಡ್ ಮೊದಲು ಘೋಷಿಸಲಿ ಎಂದು ಸವಾಲು ಹಾಕಿದರಲ್ಲದೆ, ಈ ದೇಶ ಯಾರಪ್ಪನ ಆಸ್ತಿಯೂ ಅಲ್ಲ. ಇದು ಹಿಂದೂಸ್ತಾನ್ ಎಂಬುದನ್ನು ಮರೆಯಬಾರದು. ಇದೇ ರೀತಿ ಮುಂದುವರೆದರೆ ಈ ದೇಶಕ್ಕೆ ಗಂಡಾಂತರ ಒದಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಮುಡಾ ಪ್ರಕರಣ ಕುರಿತು ಪ್ರಸ್ತಾಪಿಸಿ, 14 ಸೈಟ್ ವಾಪಸ್ ಕೊಟ್ಟಾದ ಬಳಿಕ ಸಿದ್ಧಾರ್ಥ ಟ್ರಸ್ಟ್ ಪಡೆದಿದ್ದ 5 ಎಕರೆ ಜಮೀನು ಕೂಡ ಸರ್ಕಾರಕ್ಕೆ ವಾಪಸ್ ಕೊಟ್ಟಿದ್ದಾರೆ. ಇದನ್ನೆಲ್ಲಾ ನೋಡುತ್ತಿದ್ದರೆ ಈ ದೇಶದ ಕಾನೂನಿಗೆ ಇಲ್ಲಿ ಗೌರವ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ



ಖರ್ಗೆ ಹೆಸರು ಪ್ರಸ್ತಾಪಿಸದೆ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

ಈ ಮಂದಿ ಸಂವಿಧಾನ ಕೈಯಲ್ಲಿ ಹಿಡಿದು ಓಡಾಡುತ್ತಾರೆ. ಮತ್ತೊಂದೆಡೆ ಸಂವಿಧಾನ ವಿರೋಧಿ ನಡೆ ಅನುಸರಿಸುತ್ತಾರೆ. ನಮ್ಮದು ಶೇ.40 ಸರ್ಕಾರ ಎಂದು ಟೀಕಿಸಿದವರು ಈಗ ಶೇ.60 ಪಡೆಯುತ್ತಿದ್ದಾರೆ ಎಂದು ರಾಜ್ಯ ಸರ್ಕಾರದ ವಿರುದ್ಧ ಹರಿಹಾಯ್ದರಲ್ಲದೆ, ಹೀಗಾದರೆ ಅಭಿವೃದ್ಧಿ ಹೇಗಾಗುತ್ತದೆ ಎಂದು ಪ್ರಶ್ನಿಸಿದರು.

ಒಳಮೀಸಲಾತಿಗೆ ಕ್ಯಾಬಿನೆಟ್‌ನಲ್ಲಿ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳುವುದಾಗಿ ಹೇಳುತ್ತಿರುವುದು ಕೇವಲ ಕಾಲಹರಣದ ಸಂಚು. ಒಳಮೀಸಲಾತಿ ಕುರಿತಂತೆ ಸಂಪೂರ್ಣ ವರದಿ ಸಿದ್ಧವಿತ್ತು. ಆದರೂ ಇವರು ಕಾಲಹರಣ ಮಾಡುತ್ತಿದ್ದಾರೆ. ತಮ್ಮ ಸರ್ಕಾರ ಅಧಿಕಾರಕ್ಕೆ ಬಂದ 24 ಗಂಟೆಯಲ್ಲೇ ಒಳಮೀಸಲಾತಿ ಜಾರಿಗೆ ತರುವುದಾಗಿ ಪ್ರಣಾಳಿಕೆಯಲ್ಲೇ ಹೇಳಿದ್ದನ್ನು ಮರೆತಿದ್ದಾರೆ. ಈ ಸರ್ಕಾರ, ಮೋಸ ವಂಚನೆಗೆ ಹೆಸರಾಗಿದೆ. ಸಿಎಂ ಸಿದ್ದರಾಮಯ್ಯ ಕೂಡಲೇ ರಾಜೀನಾಮೆ ನೀಡಬೇಕು ಎಂದರು.

**ಕೆಕೆಆರ್ ಡಿಬಿ ಹಗರಣ ಸಿಬಿಐ ತನಿಖೆಗೆ ಆಗ್ರಹ:** ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ನಡೆದಿರುವ ಹಗರಣದ ಸಮಗ್ರ ತನಿಖೆಯನ್ನು ಸಿಬಿಐಗೆ ಒಪ್ಪಿಸಬೇಕು. ಕಲ್ಯಾಣ ಕರ್ನಾಟಕವನ್ನು ಸ್ಮಶಾನ ಕರ್ನಾಟಕ ಮಾಡಲು ಹೊರಟಿದ್ದಾರೆ ಎಂದು ಯಾರದ್ದೇ ಹೆಸರು ಪ್ರಸ್ತಾಪಿಸದೆ ಸ್ಥಳೀಯ ಕಾಂಗ್ರೆಸ್ ನಾಯಕರ ವಿರುದ್ಧ ಕಿಡಿಕಾರಿದರು. ಶಾಸಕ ಬಸವರಾಜ ಮತ್ತಿಮುಡ, ವಿಧಾನ ಪರಿಷತ್ ಸದಸ್ಯ ಬಿ.ಜಿ. ಪಾಟೀಲ್, ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಶಿವರಾಜ್ ಪಾಟೀಲ್ ರದ್ದೇವಾಡಗಿ, ರವಿಚಂದ್ರ, ಕಾಂತಿಕಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಇಡಿ ದಾಳಿ: ವಕ್ರತುಂಡ ಸೊಸೈಟಿ ಹೆಸರಿನಲ್ಲಿ ನಡೆದಿತ್ತಾ ಬಹುದೊಡ್ಡ ಭ್ರಷ್ಟಾಚಾರ?

**ಮೈಸೂರು:** ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ನಿನ್ನೆ ಮೈಸೂರಿನಲ್ಲಿ ಬಿಲ್ಡರ್ ಜಯರಾಮ್ ಮನೆ, ಕಚೇರಿ ಮೇಲೆ ಇಡಿ ತಂಡ ದಾಳಿ ಮಾಡಿತ್ತು. ಇದೀಗ ಅದರ ಬೆನ್ನಲ್ಲೇ ನಗರದ ಎಂಎಂಜಿ ಕಚೇರಿ ಕೆಳಗೆ ಇರುವ ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘದ ಮೇಲೆ ಇಡಿ ಅಧಿಕಾರಿಗಳು ದಾಳಿ ಮಾಡಿದ್ದು, ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ. ಆ ಮೂಲಕ ವಕ್ರತುಂಡ ಸೊಸೈಟಿ ಹೆಸರಿನಲ್ಲಿ ಬಹುದೊಡ್ಡ ಭ್ರಷ್ಟಾಚಾರ ನಡೆದಿತ್ತಾ ಎಂಬ ಅನುಮಾನಗಳು ಹುಟ್ಟಿಕೊಂಡಿವೆ.

ದಿನೇಶ್ ಕುಮಾರ್ ಆಯುಕ್ತರಾಗಿ ಮೈಸೂರಿಗೆ ಬಂದ ಬಳಿಕ ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘ ಆರಂಭವಾಗಿದೆ. ದಿನೇಶ್ ಕುಮಾರ್ ಕುಟುಂಬಸ್ಥರಿಬ್ಬರು ನಿರ್ದೇಶಕರಾಗಿದ್ದಾರೆ ಎನ್ನಲಾಗಿದೆ. ಹಾಗಾಗಿ 50-50 ಹಗರಣಕ್ಕಾಗಿಯೇ ವಕ್ರತುಂಡ ಸೊಸೈಟಿ ಸೃಷ್ಟಿಯಾಯಿತಾ? ಇಡೀ ಹಗರಣದ ಬೇನಾಮಿ ಕೇಂದ್ರವೇ ವಕ್ರತುಂಡ ಸೊಸೈಟಿನಾ ಎಂಬ ಸಾಕಷ್ಟು





ಅನುಮಾನಗಳು ಶುರುವಾಗಿವೆ.

ಮುಡಾ ಹಗರಣ ಕುರಿತ ತನಿಖೆಯನ್ನು ಇಡಿ ಅಧಿಕಾರಿಗಳ ತಂಡ ಚುರುಕುಗೊಳಿಸಿದ್ದು, ಮತ್ತಷ್ಟು ಜನರಿಗೆ ನಡುಕ ಶುರುವಾಗಿದೆ. ಜಾರಿ ನಿರ್ದೇಶನಾಲಯ ತಂಡ, ಉದ್ಯಮಿಗಳು, ಜನಪ್ರತಿನಿಧಿಗಳು ಸೇರಿದಂತೆ 20ಕ್ಕೂ ಹೆಚ್ಚು ಪ್ರಭಾವಿಗಳ ಹೆಸರುಗಳನ್ನು ಪಟ್ಟಿ ಮಾಡಿದೆ. ಅಲ್ಲದೇ, ಪ್ರತಿಯೊಬ್ಬರ ಚಲನವಲನಗಳ ಮೇಲೂ ಕಣ್ಣಿಟ್ಟಿದೆ.

**ಮೈಸೂರಿನ ಎಂಎಂಜಿ ಕನ್ಸ್‌ಟ್ರಕ್ಷನ್ ಕಚೇರಿ ಮೇಲೆ ಇಡಿ ದಾಳಿ:** ಮುಡಾ ಸೈಟ್ ಅಕ್ರಮ ಸಂಬಂಧ ಮೈಸೂರಿನ ಎಂಎಂಜಿ ಕನ್ಸ್‌ಟ್ರಕ್ಷನ್ ಕಚೇರಿ ಮೇಲೆ ಇಡಿ ದಾಳಿ ಮಾಡಿದ್ದಾರೆ. ಎಂಎಂಜಿ ಕನ್ಸ್‌ಟ್ರಕ್ಷನ್ ಕಚೇರಿಗೆ ಕೆನರಾ ಬ್ಯಾಂಕ್ ಡಿವಿಷನಲ್ ಮ್ಯಾನೇಜರ್ ಗೋಪಾಲ್, ಕುವೆಂಪುನಗರ ಕೆನರಾ ಬ್ಯಾಂಕ್ ಶಾಖೆ ಮ್ಯಾನೇಜರ್ ಆಗಮಿಸಿದ್ದಾರೆ. ಅಧಿಕಾರಿಗಳನ್ನು ಕರೆಸಿಕೊಂಡು ವಿಚಾರಣೆ ನಡೆಸುತ್ತಿದ್ದಾರೆ. ಕುವೆಂಪುನಗರ ಕ್ಯಾನರಾ ಬ್ಯಾಂಕ್ ವಹಿವಾಟು ಬಗ್ಗೆ ಇಡಿ ಮಾಹಿತಿ ಪಡೆಯುತ್ತಿದ್ದಾರೆ.

ಸಿಎಂ ಸಿದ್ದರಾಮಯ್ಯ ಆಪ್ತ ರಾಕೇಶ್ ಪಾಪಣ್ಣ ಮನೆಯಲ್ಲೂ ಇಡಿ ಶೋಧ ನಡೆಸಿದೆ. ನಿನ್ನೆ ಬೆಳಗ್ಗೆಯಿಂದ ತಡರಾತ್ರಿವರೆಗೂ ಶೋಧಿಸಿದ್ದ ಅಧಿಕಾರಿಗಳು, ಮತ್ತೆ ಇಂದು ಬೆಳಗ್ಗೆಯಿಂದ ಹುಡುಕಾಟ ಮುಂದುವರಿಸಿದ್ದಾರೆ. ಮುಡಾಗೆ ಸಂಬಂಧಿಸಿದ ದಾಖಲೆಗಳನ್ನು ಪರಿಶೀಲನೆ ಮಾಡಿದ್ದಾರೆ.

## ಬೆಂಗಳೂರು ಮನೆಯಲ್ಲಿ ಗೋವಾ ಮದ್ಯ 5 ಲಕ್ಷ ರೂ. ಮೌಲ್ಯದ 144 ಬಾಟಲಿ ಜಪ್ತಿ

ಬೆಂಗಳೂರು: ನಗರದ ದಕ್ಷಿಣ ವಿಭಾಗ ಅಬಕಾರಿ ಅಧಿಕಾರಿಗಳು ನಡೆಸಿದ ದಾಳಿಯಲ್ಲಿ 5 ಲಕ್ಷ ರೂ. ಮೌಲ್ಯದ 144 ಬಾಟಲಿ ಗೋವಾ (ಉಠಚಿ) ಲಿಕ್ಕರ್ ಪತ್ತೆಯಾಗಿದ್ದು, ವಶಕ್ಕೆ ಪಡೆದುಕೊಂಡಿದ್ದಾರೆ. ಬಂಧಿತ ಆರೋಪಿಯನ್ನು ಕತ್ರಿಗುಪ್ಪೆ (ಏಚಿಣಡಿರಣಃಿಠಿಜ) ನಿವಾಸಿ ಪುರುಷೋತ್ತಮ್ ಎಂದು ಗುರುತಿಸಲಾಗಿದೆ.

ಆರೋಪಿ ಗೋವಾದಿಂದ ಕಡಿಮೆ ಬೆಲೆಗೆ ಮದ್ಯ ತರಿಸಿಕೊಳ್ಳುತ್ತಿದ್ದ. ಗೋವಾದಲ್ಲಿರುವ ಅಂಗಡಿಯವರ ಸಂಪರ್ಕದ ಮೇರೆಗೆ ಬೆಂಗಳೂರಿಗೆ ಮದ್ಯ ತರಿಸಿಕೊಳ್ಳುತ್ತಿದ್ದ. ತನಗೆ ಬೇಕಾದಾಗಲೆಲ್ಲಾ ತಿಳಿಸಿ ಬಸ್‌ನಲ್ಲಿ ಮದ್ಯದ ಬಾಟಲ್ ಇಡುವಂತೆ ಹೇಳುತ್ತಿದ್ದ. ಬಳಿಕ ಇಲ್ಲಿಗೆ ಬರುತ್ತಿದ್ದಂತೆ ಇಳಿಸಿಕೊಳ್ಳುತ್ತಿದ್ದ. ನಂತರ ಮನೆಗೆ ತೆಗೆದುಕೊಂಡು ಹೋಗಿ ಸ್ಟಾಕ್ ಮಾಡುತ್ತಿದ್ದ.



ಇದನ್ನು ಕಡಿಮೆ ಬೆಲೆಗೆ ಗ್ರಾಹಕರಿಗೆ ಮಾರಾಟ ಮಾಡುತ್ತಿದ್ದ.ಅ.27 ರಂದು ಪುರುಷೋತ್ತಮ್ ದ್ವಿಚಕ್ರ ವಾಹನ ನಿಲ್ಲಿಸಿಕೊಂಡು ಬನಶಂಕರಿ ಎರಡನೇ ಹಂತದಲ್ಲಿ ನಿಂತಿದ್ದ. ಆತನ ಚಲನವಲನ ಅಬಕಾರಿ ಅಧಿಕಾರಿಗಳಿಗೆ ಅನುಮಾನ ಹುಟ್ಟಿಸಿತ್ತು. ಈ ವೇಳೆ ಬ್ಯಾಗ್ ತೆಗೆದು ಪರಿಶೀಲಿಸಿದಾಗ ಮದ್ಯದ ಬಾಟಲ್ ಪತ್ತೆಯಾಗಿದೆ. ಬಾಟಲ್ ಮೇಲೆ ಫಾರ್ ಸೇಲ್ ಇನ್ ಗೋವಾ ಓನ್ಲಿ ಎಂದು ನಮೂದಾಗಿದ್ದು ಕಂಡು ಅವುಗಳು ಗೋವಾದಲ್ಲಿ ತಯಾರಿಸಲಾಗಿದ್ದ ಮದ್ಯದ ಬಾಟಲ್ ಎಂದು ತಿಳಿದಿದೆ. ಬಳಿಕ ಆತನ ಮೊಬೈಲ್ ಪರಿಶೀಲಿಸಿದಾಗ ಗೋವಾ ರಾಜ್ಯದ ಮದ್ಯದ ಅಂಗಡಿ ಜೊತೆಗಿನ ನಂಟು ಬಯಲಾಗಿದೆ. ಜೊತೆಗೆ ಮದ್ಯ ತರಿಸಿದ್ದ ಬಿಲ್ಲುಗಳು ಕೂಡ ಪತ್ತೆಯಾಗಿದೆ. ನಂತರ ಕತ್ರಿಗುಪ್ಪೆ ಮನೆಗೆ ಕರೆದೊಯ್ದು ಶೋಧಿಸಿದಾಗ ಅಕ್ರಮ ಮದ್ಯದ ಬಾಟಲ್‌ಗಳು ಇರುವುದು ತಿಳಿದುಬಂದಿದೆ. ಮನೆಯಲ್ಲಿದ್ದ ಮದ್ಯದ ಬಾಟಲ್‌ಗಳನ್ನು ನೋಡಿ ಅಬಕಾರಿ ಅಧಿಕಾರಿಗಳೇ ಶಾಕ್ ಆಗಿದ್ದಾರೆ. ಸದ್ಯ ಅಬಕಾರಿ ಕಾಯ್ದೆ 1965ರ ಕಲಂ 11, 14, 15, 38(ಎ), 43(ಎ) ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಯನ್ನು ಬಂಧಿಸಿದ್ದಾರೆ

ಮೊದಲನೇ ಪುಟದಿಂದ...

## ಮಂಡ್ಯದಲ್ಲೂ ವಕ್ಫ್ ಸಮಸ್ಯೆ!

ನಮ್ಮ ಮಠದ ಆಸ್ತಿ ಮಠಕ್ಕೆ ಉಳಿಯಬೇಕು.ಇದು ಕುಲಕರ್ಣಿ ಮನೆತನ ಮಠಕ್ಕೆ ನೀಡಿದ ಆಸ್ತಿಯಾಗಿದೆ. ವಕ್ಫ್ ಬೋರ್ಡ್ ಎಂದು ನಮೂದಾಗಿದ್ದನ್ನು ರದ್ದು ಮಾಡಬೇಕೆಂದು ಸಿದ್ದರಾಜು ಸ್ವಾಮೀಜಿ ಆಗ್ರಹಿಸಿದ್ದಾರೆ.

**ವಿಜಯಪುರದಲ್ಲಿ ತೀವ್ರಗೊಂಡ ಪ್ರತಿಭಟನೆ:** ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಎಂದು ನಮೂದಾಗಿರುವುದನ್ನು ತೆರವು ಮಾಡುವಂತೆ ರೈತರ ಹೋರಾಟ ತೀವ್ರಗೊಂಡಿದೆ. ಮಂಗಳವಾರ ಸಾಯಂಕಾಲದಿಂದಲೇ ಡಿಸಿ ಕಚೇರಿ ಆವರಣದಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದೆ.

ಈ ಮಧ್ಯೆ, ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಕರಾಳ ದೀಪಾವಳಿ ಆಚರಣೆ ಮಾಡಿದ್ದಾರೆ. ಡಿಸಿ ಕಚೇರಿ ಆವರಣದಲ್ಲಿ ಸಿಎಂ ಸಿದ್ದರಾಮಯ್ಯ, ಸಚಿವ ಜಮೀರ್ ಭಾವಚಿತ್ರದ ಬಳಿ ದೀಪವಿಟ್ಟು ಪ್ರತಿಭಟಿಸಿದ್ದಾರೆ. ಅಲ್ಲೇ ಅಡುಗೆ ಮಾಡಿ ಊಟ ಮಾಡಿ ರಾತ್ರಿ ವಾಸ್ತವ್ಯ ಹೂಡಿದ್ದಾರೆ. ಪಹಣಿಯಲ್ಲಿರೋ ವಕ್ಫ್ ಬೋರ್ಡ್ ಹೆಸರು ತೆರವು ಮಾಡುವ ವರೆಗೂ ಹೋರಾಟ ಕೈಬಿಡುವುದಿಲ್ಲ ಎಂದು ರೈತರು ಪಟ್ಟುಹಿಡಿದಿದ್ದಾರೆ.

## ಪ್ರಲ್ಹಾದ್ ಜೋಶಿ ಸಾಥ್

**ಸಚಿವ ಪ್ರಲ್ಹಾದ್ ಜೋಶಿ ಟ್ವೀಟ್:** ವಿಜಯಪುರ ಜಿಲ್ಲೆಯ ರೈತರ ಸಾವಿರಾರು ಎಕರೆ ಜಮೀನು ವಕ್ಫ್ ಮಂಡಳಿ ಹೆಸರಿನಲ್ಲಿ ದಾಖಲಾಗಿರುವುದನ್ನು ಖಂಡಿಸಿ, ರೈತರು ವಿಜಯಪುರದ ಜಿಲ್ಲಾಧಿಕಾರಿಯ ಕಛೇರಿಯ ಮುಂದೆ ಧರಣಿ ಆರಂಭಿಸಿದ್ದು ನಾಳೆ ಆ ಧರಣಿ ನಿರತ ರೈತರನ್ನು ಭೇಟಿ ಮಾಡಲಿದ್ದೇನೆ. ರೈತರ ಜಮೀನುಗಳನ್ನ ವಕ್ಫ್ ಆಸ್ತಿ ಎಂದು ಕಬಳಿಸುವುದರ ಹಿಂದೆ ಕಾಂಗ್ರೆಸ್ ಮತ್ತು ಜಮೀರ್ ಕುಮ್ಮಕ್ಕು ಕೆಲಸ ಮಾಡಿದ್ದು ಈಗ ಸ್ಪಷ್ಟವಾಗಿದ್ದು. ಇವರೆಲ್ಲರೂ ಸೇರಿ, ರೈತರನ್ನು ಭಯಭೀತರನ್ನಾಗಿ ಮಾಡಿ ಅವರ ಜಮೀನನ್ನು ಕಬಳಿಸುವ ಹುನ್ನಾರ ಮಾಡಿದ್ದಾರೆ. ರೈತರ ಜಮೀನಿನ ಖಾತೆಯಿಂದ ವಕ್ಫ್ ಬೋರ್ಡ್‌ನ ಹೆಸರು ತೆಗೆಸುವವರೆಗೆ ನಮ್ಮ ಹೋರಾಟ ನಡೆಯಲಿದೆ. ವಕ್ಫ್ ಬೋರ್ಡ್ ವಂಚನೆಯಲ್ಲಿ ಸಿಕ್ಕ ರಾಜ್ಯದ ಪ್ರತಿ ರೈತರಿಗೆ ನ್ಯಾಯ ಸಿಗುವವರೆಗೆ ಹಾಗೂ ಈ ಸಮಸ್ಯೆಗೆ ತಾರ್ಕಿಕ ಅಂತ್ಯ ಸಿಗುವವರೆಗೆ ನಾವು ಈ ತುಷ್ಟೀಕರಣದ ಪರಾಕಾಷ್ಟೆಯಲ್ಲಿರುವ ಕಾಂಗ್ರೆಸ್ ವಿರುದ್ಧದ ಹೋರಾಟದಲ್ಲಿ ರೈತರಿಗೆ ಬೆಂಬಲವಾಗಿರುತ್ತೇವೆ.

ರೈತರ ಜಮೀನು ಖಾತೆಯಿಂದ ವಕ್ಫ್ ಬೋರ್ಡ್‌ನ ಹೆಸರು ತೆಗೆಸುವವರೆಗೆ ನಮ್ಮ ಹೋರಾಟ ನಡೆಯಲಿದೆ. ವಕ್ಫ್ ಬೋರ್ಡ್ ವಂಚನೆಯಲ್ಲಿ ಸಿಲುಕಿದ ರಾಜ್ಯದ ಪ್ರತಿ ರೈತರಿಗೆ ನ್ಯಾಯ ಸಿಗುವವರೆಗೆ ಹಾಗೂ ಈ ಸಮಸ್ಯೆಗೆ ತಾರ್ಕಿಕ ಅಂತ್ಯ ಸಿಗುವವರೆಗೆ ರೈತರ ಹೋರಾಟಕ್ಕೆ ಬೆಂಬಲ ನೀಡುತ್ತೇವೆ ಎಂದು ತಿಳಿಸಿದ್ದಾರೆ.

## ಆರೋಪ

ಬಲವಾಗಿತ್ತು. ಇದೀಗ, ವಕ್ರತುಂಡ ಗೃಹನಿರ್ಮಾಣ ಸಹಕಾರ ಸಂಘದ ಬಗ್ಗೆ ಸಾಕಷ್ಟು ಪ್ರಶ್ನೆಗಳನ್ನು ಇಡಿ ಅಧಿಕಾರಿಗಳು ಕೇಳಿದ್ದು ತಿಳಿದುಬಂದಿದೆ. ಇಡಿ ಅಧಿಕಾರಿಗಳ ಪ್ರಶ್ನೆಗಳು ಲಭ್ಯವಾಗಿದೆ. ಹಲವು ಪ್ರಶ್ನೆಗಳನ್ನ ಸಿದ್ದಪಡಿಸಿಕೊಂಡು ಬಂದಿದ್ದ ಇಡಿ ಅಧಿಕಾರಿಗಳು ಬ್ಯುಲ್ಡರ್ ಜಯರಾಮ್‌ಗೆ ಸೇರಿದ ಎಂಎಂಜಿ ಕನ್ಸಟ್ರಕ್ಷನ್ ಕಚೇರಿ ಹಾಗೂ ವಕ್ರತುಂಡ ಗೃಹನಿರ್ಮಾಣ ಸಹಕಾರ ಸಂಘದಲ್ಲೇ ಹೇಳಿಕೆ ದಾಖಲಿಸಿದ್ದಾರೆ. ಪ್ರತಿಯೊಂದು ಪ್ರಶ್ನೆ ಹಾಗೂ ಉತ್ತರವನ್ನ ಕಚೇರಿಯಲ್ಲೇ ಕುಳಿತು ಟೈಪ್ ಮಾಡಿಕೊಂಡಿದ್ದಾರೆ. ಸಿದ್ದಪಡಿಸಿದ ಪ್ರಶ್ನೆಗಳು ಜೊತೆಗೆ ದಾಖಲೆ ಪರಿಶೀಲನೆ ನಂತರ ಬಂದ ಅನುಮಾನದ ಮೇಲೆ ಪ್ರಶ್ನೆಗಳನ್ನು ಕೇಳಲಾಗಿದೆ. ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘದ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಇಡಿ ಅಧಿಕಾರಿಗಳು ಕೇಳಿದ್ದಾರೆ.

**ಇ.ಡಿ ಅಧಿಕಾರಿಗಳು ಕೇಳಿದ ಪ್ರಶ್ನೆಗಳಿವು**

- ವಕ್ರತುಂಡ ಗೃಹ ನಿರ್ಮಾಣ ಸಹಕಾರ ಸಂಘದಲ್ಲಿ ಎಷ್ಟು ಜನ ಸದಸ್ಯರಿದ್ದಾರೆ
- ಎಷ್ಟು ಬ್ಯಾಂಕ್ ಅಕೌಂಟ್ ಗಳನ್ನು ಹೊಂದಿದ್ದೀರಿ
- ಸಂಘದ ಸಾಮಾನ್ಯ ಸಭೆ ಯಾವಾಗ ನಡೆಸಿದ್ದೀರಿ
- ಸಭೆಯಲ್ಲಿ ಕೈಗೊಂಡ ನಿರ್ಣಯಗಳು ಯಾವುದು
- ಸಹಕಾರ ಸಂಘದ ನಿರ್ದೇಶಕರ ವಿವರ ವಿವರಿಸಿ
- ಇಲ್ಲಿಯವರೆಗೆ ಎಷ್ಟು ಲೇಔಟ್ ನಿರ್ಮಾಣ ಮಾಡಿದ್ದೀರಿ
- ಎಷ್ಟು ಜನರಿಂದ ಮುಂಗಡವಾಗಿ ಹಣ ಪಡೆದಿದ್ದೀರಿ
- ಇನ್ನೂ ಎಷ್ಟು ಜನರಿಗೆ ನಿವೇಶನ ಕೊಡಬೇಕು
- ಹಲವು ಬ್ಯಾಂಕ್ ಖಾತೆಗಳಿಗೆ ಇಥಿಥಿ ಲಿಂಕ್ ಆಗಿಲ್ಲ, ದಾಖಲೆಗಳು ಇಲ್ಲದಿದ್ದರು ಹೇಗೆ ವ್ಯವಹಾರ ಮಾಡುತ್ತಿದ್ದೀರಿ ● ಮುಡಾದಿಂದ ವಕ್ರತುಂಡ ಗೃಹನಿರ್ಮಾಣ ಸಹಕಾರ ಸಂಘಕ್ಕೆ 50:50 ಅನುಪಾತದಡಿ ಮುಡಾದಿಂದ ಎಷ್ಟು ನಿವೇಶನ ಬಂದಿದೆ ● ಕಚೇರಿಯಲ್ಲಿ ಪ್ರತಿಯೊಂದು ದಾಖಲೆಗಳನ್ನ ಪರಿಶೀಲನೆ ಮಾಡಿ ಇಡಿ ಅಧಿಕಾರಿಗಳು ಪ್ರಶ್ನೆಗಳನ್ನು ಕೇಳಿದ್ದಾರೆ.

## ಉಪಚುನಾವಣೆಗೆ ಬಿಜೆಪಿ ಸ್ಟಾರ್ ಪ್ರಚಾರಕರ ಪಟ್ಟಿ ಬಿಡುಗಡೆ? ಯತ್ನಾಳ್, ಪ್ರತಾಪ್ ಸಿಂಹ, ಯದುವೀರ್, ಸುಮಲತಾಗೆ ಕೊಕ್

**ಬೆಂಗಳೂರು:** ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿಯಿಂದ ಸ್ಟಾರ್ ಪ್ರಚಾರಕರ ಪಟ್ಟಿ ಪ್ರಕಟವಾಗಿದೆ.

ಸ್ಟಾರ್ ಕ್ಯಾಂಪೇನರ್ ಪಟ್ಟಿಯಲ್ಲಿ 40 ಬಿಜೆಪಿ ನಾಯಕರಿಗೆ ಸ್ಥಾನ ನೀಡಲಾಗಿದೆ. ಬಿಜೆಪಿ ಪಟ್ಟಿಯಲ್ಲಿ ಬಿಜೆಪಿ ಭಿನ್ನರ ಹೆಸರು ಇಲ್ಲ. ಬಸನಗೌಡ ಪಾಟೀಲ್ ಯತ್ನಾಳ್, ಪ್ರತಾಪ್ ಸಿಂಹ, ಕುಮಾರ್ ಬಂಗಾರಪ್ಪ, ರಮೇಶ್ ಜಾರಕಿಹೊಳಿಗೆ ಕೊಕ್ ನೀಡಲಾಗಿದೆ. ಅರವಿಂದ ಲಿಂಬಾವಳಿ, ಸಂಸದ ಜಿ.ಎಂ.ಸಿದ್ದೇಶ್ವರ ಹೆಸರಿಗೂ ಹೈಕಮಾಂಡ್ ಕೊಕ್ ಕೊಟ್ಟಿದೆ.

**ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿರೋ ಪ್ರಮುಖರು ಯಾರು?:** ಬಿ.ಎಸ್.ಯಡಿಯೂರಪ್ಪ, ರಾಧ ಮೋಹನ್ ದಾಸ್, ಬಿ.ವೈ.ವಿಜಯೇಂದ್ರ, ಆರ್. ಅಶೋಕ್, ಛಲವಾಧಿ ನಾರಾಯಣಸ್ವಾಮಿ, ಡಿ.ವಿ.ಸದಾನಂದಗೌಡ, ಬಸವರಾಜ್ ಬೊಮ್ಮಾಯಿ, ಪ್ರಹ್ಲಾದ್ ಜೋಶಿ, ನಳಿನ್



ಕುಮಾರ್ ಕಟೀಲ್, ವಿ.ಸೋಮಣ್ಣ, ಶೋಭಾ ಕರಂದ್ಲಾಜೆ, ಸಿ.ಎನ್.ಮಂಜುನಾಥ್, ಜಗ್ಗೇಶ್‌ಗೆ ಪಟ್ಟಿಯಲ್ಲಿದ್ದಾರೆ.

ಸ್ಟಾರ್ ಪ್ರಚಾರಕರ ಪಟ್ಟಿಯಲ್ಲಿ ಮೈಸೂರು ಸಂಸದ ಯದುವೀರ್ ಒಡೆಯರ್ ಹಾಗೂ ಮಾಜಿ ಸಂಸದೆ ಸುಮಲತಾ ಹೆಸರುಗಳನ್ನೂ ಹೈಕಮಾಂಡ್ ಕೈಬಿಟ್ಟಿದೆ. ಯದುವೀರ್ ಹೆಸರು ಕೈಬಿಡುವ ಮೂಲಕ ಅಚ್ಚರಿ ಮೂಡಿಸಿದೆ. ಈಗಾಗಲೇ ಕುಮಾರಸ್ವಾಮಿ ಮನವಿ ಮೇರೆಗೆ ಚನ್ನಪಟ್ಟಣದಲ್ಲಿ ಯದುವೀರ್ ಪ್ರಚಾರ ನಡೆಸಿದ್ದರು. ಸುಮಲತಾ ಅವರು ಪಕ್ಷದ ಚಟುವಟಿಕೆಗಳಿಂದ ದೂರ ಉಳಿದಿರುವ ಕಾರಣ ಪಟ್ಟಿಯಲ್ಲಿ ಹೆಸರು ಸೇರಿಸಿಲ್ಲ ಎನ್ನಲಾಗಿದೆ.

# ಹೊಲಿಗೆ ತರಬೇತಿ ಹಾಗೂ ವಿಡಿಯೋಗ್ರಫಿ ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

ಮೈಸೂರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಯುವಜನರನ್ನು ಸ್ವಾವಲಂಭಿಯಾಗಲು ಉತ್ತೇಜಿಸುವ ದೃಷ್ಟಿಯಿಂದ ಹೊಲಿಗೆ ತರಬೇತಿ ಹಾಗೂ ವಿಡಿಯೋಗ್ರಫಿ ತರಬೇತಿ ಶಿಬಿರಕ್ಕೆ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೊಲಿಗೆ ತರಬೇತಿ ಶಿಬಿರವು ನವೆಂಬರ್ 7 ರಿಂದ 26 ರರವರೆಗೆ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಎಸ್.ಎಸ್.ಎಲ್.ಸಿ ಪಾಸ್/ಫೇಲ್ ಆದ 18 ರಿಂದ 40 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದಾಗಿದೆ. ವಿಡೊಯೋಗ್ರಾಫಿ ತರಬೇತಿ ಶಿಬಿರವು ನವೆಂಬರ್ 15 ರಿಂದ 26 ರರವರೆಗೆ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿದ್ದು, ದ್ವಿತೀಯ ಪಿ.ಯು.ಸಿ ಪಾಸ್/ಫೇಲ್ ಆದ 18 ರಿಂದ 40 ವರ್ಷದೊಳಗಿನವರು ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತ ಪರಿಶಿಷ್ಟ ಜಾತಿಗೆ ಸೇರಿದ ಯುವಕ/ಯುವತಿಯರು ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಕಛೇರಿಯಲ್ಲಿ ಪಡೆದು, ಭರ್ತಿ ಮಾಡಿ ನವೆಂಬರ್ 4 ರೊಳಗೆ ಕಛೇರಿಗೆ ಸಲ್ಲಿಸಬೇಕು. ತರಬೇತಿಗೆ ಕರ್ನಾಟಕದ ಯುವಕ/ಯುವತಿಯರಿಗೆ ಮಾತ್ರ ನೀಡಲಾಗುವುದು. ಯುವಕ/ಯುವತಿಯರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ಅರ್ಜಿದಾರರು ಕಡ್ಡಾಯವಾಗಿ ಆರ್.ಡಿ. ಸಂಖ್ಯೆಯಿರುವ ಜಾತಿ ಪ್ರಮಾಣ ಪತ್ರ ಲಗತ್ತಿಸಿರಬೇಕು. ಅರ್ಜಿದಾರರ ಹೆಸರು ಹಾಗೂ ಭಾವಚಿತ್ರವುಳ್ಳ ಆಧಾರ್ ಪತ್ರವನ್ನು ಲಗತ್ತಿಸುವುದು. ಶಿಬಿರದಲ್ಲಿ ಭಾಗವಹಿಸುವ ಶಿಬಿರಾರ್ಥಿಗಳು ಶಿಸ್ತು ಹಾಗೂ ಸಂಯಮದಿಂದ ಇರಬೇಕು. ಅನುಚಿತವಾಗಿ ವರ್ತಿಸಿದಲ್ಲಿ ಇಲಾಖೆಯ ನಿಯಾಮಾನುಸಾರಕ್ಕೆ ಕ್ರಮ ಕೈಗೊಳ್ಳಲಾಗುವುದು. ಅರ್ಜಿದಾರರ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಉಪ/ಸಹಾಯಕ ನಿರ್ದೇಶಕರಿಂದ ದೃಢೀಕರಿಸಿ ಸಲ್ಲಿಸಬೇಕು. ತರಬೇತಿ ಶಿಬಿರದಲ್ಲಿ ಭಾಗವಹಿಸುವ ಯುವಕ/ಯುವತಿಯರಿಗೆ ಲಘು ಉಪಹಾರ ಒದಗಿಸಲಾಗುವುದು. ಹೊರ ಜಿಲ್ಲೆಗಳಿಂದ ಆಗಮಿಸುವ ಶಿಬಿರಾರ್ಥಿಗಳಿಗೆ ಸಮಾನ್ಯ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು. ಅರ್ಜಿದಾರರು ದೈಹಿಕವಾಗಿ ಸದೃಢರಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿಯ ನೋಟೀಸ್ ಬೋರ್ಡ್ ಅಥವಾ ದೂ.ಸಂ: 0821-2564179 ಅನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಭಾಸ್ಕರ್ ನಾಯಕ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸತೀಶ್ ನಾಮಪತ್ರ ಸಲ್ಲಿಕೆ

**ರಾಮನಗರ:** 2024-29ನೇ ಸಾಲಿನ ಕರ್ನಾಟಕರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಚುನಾವಣೆ ನಿಗಧಿಯಾಗಿದೆ. ಇದಕ್ಕೆನಾಮಪತ್ರ ಸಲ್ಲಿಕೆಆರಂಭಗೊಂಡಿದ್ದು, ರಾಜ್ಯ ಸರ್ಕಾರಿ ನೌಕರರ ಸಂಘದತಾಲ್ಲೂಕುಕಾರ್ಯಕಾರಿ ಸಮಿತಿಯಚುನಾವಣೆಗೆಸರ್ಕಾರಿ ನೌಕರರ ಸಂಘದ ಹಾಲಿ ಜಿಲ್ಲಾಧ್ಯಕ್ಷ ಕೆ.ಸತೀಶ್ಅವರು ಅ. 28 ರಂದು ನಾಮಪತ್ರ ಸಲ್ಲಿಸಿದರು.

# ಪ್ರತಿಭಾ ಪುರಸ್ಕಾರ ಸಮಾರಂಭ

**ಬೆಂಗಳೂರು :** ಪಂಡಿತರತ್ನ ಎ ಶಾಂತಿರಾಜ ಶಾಸ್ತ್ರಿ ಟ್ರಸ್ಟ್ ವತಿಯಿಂದ ಟ್ರಸ್ಟಿನ 36ನೇ ವಾರ್ಷಿಕೋತ್ಸವದ ಅಂಗವಾಗಿ ಆದರ್ಶ ಜೈನ ಮಹಿಳಾ ರತ್ನ ಪ್ರಶಸ್ತಿ ಪ್ರಧಾನ ಮತ್ತು ಪ್ರತಿಭಾ ಪುರಸ್ಕಾರ ಸಮಾರಂಭವನ್ನು ನಗರದ ಕೆಆರ್ ರಸ್ತೆಯ, ಶಂಕರಾಪುರಂನಲ್ಲಿರುವ, ಕರ್ನಾಟಕ ಜೈನ ಭವನದ, ಡಾ ಡಿ ವೀರೇಂದ್ರ ಹೆಗ್ಗಡೆ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಪರಮಪೂಜ್ಯ ಜಗದ್ಗುರು ಸ್ವಸ್ತಿಶ್ರೀ ಡಾ. ದೇವೇಂದ್ರಕೀರ್ತಿ ಭಟ್ಟಾರಕ ಮಹಾಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ, ಪಂಡಿತರತ್ನ ಎ ಶಾಂತಿರಾಜ ಶಾಸ್ತ್ರಿ ಟ್ರಸ್ಟ್‌ನ ಅಧ್ಯಕ್ಷರಾದ ಎಸ್. ಜಿತೇಂದ್ರ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಇತರ ಗಣ್ಯರು ಉದ್ಘಾಟಿಸಿದರು. ಎರಡನೇ ಪಿಯುಸಿ ವ್ಯಾಸಂಗದಲ್ಲಿ ವಿಜ್ಞಾನದಲ್ಲಿ ಉತ್ತಮ ಸಾಧನೆ ಮಾಡಿರುವ ನಿಪ್ಪಾಣಿಯ ಸಮೇದ್ ರಾಜು ಟಿಕ್ಕೆ ರವರು ಸೇರಿದಂತೆ ಹಲವು ವಿಷಯಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು ಹಾಗೂ ಸಮಾಜಮುಖಿ ಕಾರ್ಯ ಮಾಡಿರುವ ಹಲವು ಮಹಿಳಾ ಗಣ್ಯರಿಗೆ ಆದರ್ಶ ಜೈನ ಮಹಿಳಾ ರತ್ನ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು. ಈ ವೇಳೆ ಟ್ರಸ್ಟಿನ ವ್ಯವಸ್ಥಾಪಕ ಧರ್ಮದರ್ಶಿ ನೇಮಚಂದ್ರ, ಡಿ, ಧರ್ಮದರ್ಶಿಗಳಾದ ಡಿ ವಿ ಪ್ರವೀಣ್ ಕುಮಾರ್, ಕೆ ಸುರೇಶ್ ಕುಮಾರ್, ಎಂ ಜೆ ಇಂದ್ರ ಕುಮಾರ್, ಡಾ. ಪಿ.ವೈ ರಾಜೇಂದ್ರ ಕುಮಾರ್, ಎಸಿ ವಿದ್ಯಾಧರ್ ಮಹಾವೀರ್ ಜೈನ್, ಡಾ. ಪದ್ಮರಾಜ ದಂಡಾವತಿ ಸೇರಿದಂತೆ ಇತರರು ಉಪಸ್ಥಿತರಿದ್ದರು.




# ಮೂಲ ಸೌಲಭ್ಯಕ್ಕಾಗಿ ಪ್ರತಿಭಟನೆ



**ಮಂಡ್ಯ:** ಬೀದಿ ದೀಪ, ಒಳ ಚರಂಡಿ ವ್ಯವಸ್ಥೆ ಸೇರಿದಂತೆ ಮೂಲ ಸೌಲಭ್ಯ ನೀಡಬೇಕು ಎಂದು ಆಗ್ರಹಿಸಿದ ನಗರದ ವಿವಿಧ ಬಡಾವಣೆಯ ನಿವಾಸಿಗಳು ತಾಲ್ಲೂಕಿನ ಬೇಲೂರು ಗ್ರಾಮ ಪಂಚಾಯಿತಿ ಎದುರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಕುಡಿಯುವ ನೀರು ಸೇರಿದಂತೆ ಮೂಲ ಸೌಲಭ್ಯವಾದ ಚರಂಡಿ ವ್ಯವಸ್ಥೆ ಸಮರ್ಪಕವಾಗಿಲ್ಲ, ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ ಮನವಿ ನೀಡಿ ನಮ್ಮ ಕಷ್ಟಗಳನ್ನು ಹೇಳಿಕೊಂಡಿದ್ದರೂ ಇನ್ನೂ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದರು.

ಸ್ಥಳೀಯ ಶಾಸಕರು ನಗರ ನಿವಾಸಿಗಳು ಎಂದು ನಿರ್ಲಕ್ಷ್ಯ ತೋರದೇ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವಾಸಿಗಳಿಗೆ ಅಗತ್ಯ ಮೂಲ ಸೌಲಭ್ಯ ಕಲ್ಪಿಸಿಕೊಡಬೇಕು. ಇಲ್ಲವಾದರೆ ನಿರಂತರವಾಗಿ ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮುಖಂಡ ಹಾಗೂ ನಿವಾಸಿ ಎಚ್. ಆರ್.ಅಶೋಕ್ ಕುಮಾರ್ ಅವರು ಮಾತನಾಡಿ, ಬೀದಿ ದೀಪ, ಕುಡಿಯುವ ನೀರು, ಸ್ವಚ್ಚತೆ, ರಸ್ತೆ, ಚರಂಡಿ ಸೇರಿದಂತೆ ಹಲವು ಮೂಲಭೂತ ಸೌಲಭ್ಯ ಕೊಡುವಲ್ಲಿ ಬೇಲೂರು ಗ್ರಾಮ ಪಂಚಾಯಿತಿ ವಿಫಲವಾಗಿದೆ. ಈಗಲಾದರೂ ತಕ್ಷಣ ಮೂಲ ಸೌಕರ್ಯ ನೀಡುವ ಮೂಲಕ ನಿವಾಸಿಗಳ ನೆರವಾಗಿ ಬರಬೇಕು. ಗ್ರಾಮ ಪಂಚಾಯಿತಿಯಲ್ಲಿ ಸರಿಯಾಗಿ ಸ್ಪಂದನೆ ಸಿಗದಿದ್ದರೆ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಧರಣಿ ನಡೆಸುತ್ತೇವೆ ಎಂದು ತಿಳಿಸಿದರು.

ಕಾವೇರಿ ನಗರ ಹಿತರಕ್ಷಣಾ ಸಮಿತಿಯ ದೇವೇಗೌಡ, ನಾರಾಯಣಸ್ವಾಮಿ, ದೇವರಾಜು, ಮನೋಜ್, ಭಾಗ್ಯಮ್ಮ, ಚಂದ್ರಶೇಖರ್, ಅನಿಲ್‌ಕುಮಾರ್ ಸೇರಿದಂತೆ ನಿವಾಸಿಗಳು ಭಾಗವಹಿಸಿದ್ದರು.

# ವೃದ್ಧಾಶ್ರಮದಲ್ಲಿ ಆರೋಗ್ಯ ತಪಾಸಣೆ ಶಿಬಿರ



**ಚಾಮರಾಜನಗರ :** ಹಿರಿಯ ನಾಗರಿಕರು ಆರೋಗ್ಯ ಬಗ್ಗೆ ಹೆಚ್ಚಿನ ಗಮನವಹಿಸಬೇಕು ಎಂದು ಜೆಎಸ್ಎಸ್ ಮಹಿಳಾ ಕಾಲೇಜಿನ ಪ್ರಾಂಶುಪಾಲ ಪ್ರೊ ಎನ್ ಮಹಾದೇವಸ್ವಾಮಿ ತಿಳಿಸಿದರು

ಮೂಡಲಧ್ವನಿ ವೃದ್ಧಾಶ್ರಮ ದಲ್ಲಿ ಜೆಎಸ್ಎಸ್ ಮಹಿಳಾ ಕಾಲೇಜು ಹಿರಿಯ ವಿದ್ಯಾರ್ಥಿನಿಯರ ಸಂಘ, ಜೆಎಸ್ಎಸ್ ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಹಿರಿಯ ನಾಗರಿಕರ ದಿನಾಚರಣೆ ಪ್ರಯುಕ್ತ ಉಚಿತ ಆರೋಗ್ಯ ತಪಾಸಣೆ ಶಿಬಿರ ಅಧ್ಯಕ್ಷತೆ ವಹಿಸಿ ಮಾತನಾಡಿದವರು ಮಕ್ಕಳು ವಿದ್ಯಾಭ್ಯಾಸ ಕಲಿತ ನಂತರ ತಂದೆ ತಾಯಿಗಳನ್ನು ಚೆನ್ನಾಗಿ ನೋಡಿಕೊಳ್ಳಬೇಕು ಅವರ ಆರೋಗ್ಯ ಬಗ್ಗೆ ಹೆಚ್ಚಿನ ಗಮನ ವಹಿಸಬೇಕು ಎಂದು ಸಲಹೆ ನೀಡಿದರು

ಜೆಎಸ್ಎಸ್ ಮಹಿಳಾ ಕಾಲೇಜು ಹಿರಿಯ ವಿದ್ಯಾರ್ಥಿನಿಯರ ಸಂಘ ಅಧ್ಯಕ್ಷೆ ಹಾಗೂ ಉಪನ್ಯಾಸಕಿ ಕೆ ಎಸ್ ಸುಮಾ ಮಾತನಾಡಿ ನಮ್ಮ ಸಂಘದಿಂದ ಹಲವಾರು ಜನಪರ ಸಮಾಜ ಸೇವೆ ಕಾರ್ಯಕ್ರಮಗಳನ್ನು ಮಾಡಿಕೊಂಡು ಬರುತ್ತಿದ್ದೇವೆ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ ಎಲ್ಲರಿಗೂ ಉಚಿತ ಔಷಧಿ ಸಾಮಗ್ರಿಗಳು ವಿತರಣೆ ಮಾಡಲಾಗುತ್ತದೆ ಎಂದು ತಿಳಿಸಿದರು. ಜೆಎಸ್ಎಸ್ ಆಸ್ಪತ್ರೆ ಡಾಕ್ಟರ್ ಮೋನಿಕಾ, ಮುಖ್ಯಸ್ಥ ರವಿ, ಜೆಎಸ್ಎಸ್ ಮಹಿಳಾ ಕಾಲೇಜು ಉಪನ್ಯಾಸಕಿ ಕೆ ಎಸ್ ಅರುಣಾ ಶ್ರೀ, ಎಸ್ ಮಮತಾ , ಎಮ್ ಸೌಮ್ಯ, ಮೂಡಲ ಧ್ವನಿವೃದ್ಧಾಶ್ರಮ ಪ್ರಜ್ವಲ್, ಸೇರಿದಂತೆ ನರ್ಸಿಂಗ್ ವಿದ್ಯಾರ್ಥಿಗಳು ಹಾಜರಿದ್ದರು

# ಸಮ್ಮೇಳನಕ್ಕೆ ಪೂರಕವಾಗಿ ಕನ್ನಡ ಪದ್ಯಗಳು ಮಾರ್ದನಿಸಲಿ



**ಮಂಡ್ಯ:** ಕನ್ನಡ ಪದ್ಯಗಳ ಹಾಡಿನ ಸೌಂದರ್ಯ ಶ್ರೀಮಂತವಾಗಿದೆ. ಹಾಡುಗಳು ಛಂದೋಗತಿಯನ್ನು ಹೊಂದಿವೆ. ಕನ್ನಡ ಸಾಹಿತಿಗಳು ರಚಿಸಿರುವ ಇಂತಹ ಸಾವಿರಾರು ಹಾಡುಗಳಿವೆ. ಅವುಗಳಲ್ಲಿ 100 ಹಾಡುಗಳನ್ನು ಆಯ್ಕೆ ಮಾಡಿ ಪ್ರಾಥಮಿಕ, ಮಾಧ್ಯಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳ ಮೂಲಕ ಹಾಡಿಸುವುದರಿಂದ ಸಮ್ಮೇಳನದ ನೆನಪಿನಲ್ಲಿ ಕನ್ನಡ ಹಾಡುಗಳು ಮಾರ್ದನಿಸಲಿ ಎಂದು ಖ್ಯಾತ ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಸಲಹೆ ನೀಡಿದರು. ನಗರದ ಎಸ್.ಬಿ.ಸಮುದಾಯ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಕನ್ನಡ ಭಾಷಾ ಶಿಕ್ಷಕರು ಮತ್ತು ಉಪನ್ಯಾಸಕರಿಗೆ 87 ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಮಹತ್ವದ ಅರಿವು-ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದರು.

ತೆಲುಗಿನಂತೆ ಕನ್ನಡವೂ ಸಹ ಒಂದು ಸಂಗೀತದ ಭಾಷೆಯಾಗಿದೆ ಈ ಭಾಷೆಯಲ್ಲಿ ಒಂದು ಲಯವಿದೆ. ಕನ್ನಡದಲ್ಲಿ ಕನಿಷ್ಠ 5-6 ಸಾವಿರ ಲಯ ವಿನ್ಯಾಸಗಳಿವೆ. ಕನ್ನಡ ಅಧ್ಯಾಪಕರು ಉತ್ತಮ ಹಾಡುಗಳನ್ನು ಅಭ್ಯಾಸ ಮಾಡಿ ಮಕ್ಕಳಿಗೆ ಚಂದವಾಗಿ ಓದುವುದನ್ನು ಕಲಿಸಿ ನಂತರ ಸ್ಪರ್ಧೆ ನಡೆಸಿ ಆಯ್ಕೆ ಮಾಡಿ ಎಂದು ಸೂಚಿಸಿದರಲ್ಲದೆ, ಕನ್ನಡ ಕವಿಗಳ ಹಲವಾರು ಪದ್ಯಗಳನ್ನು ಓದುವುದರ ಮೂಲಕ ಅಧ್ಯಾಪಕರಿಗೆ ಮಾರ್ಗದರ್ಶನ ನೀಡಿದರು.

ಹೋಬಳಿ,ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕನ್ನಡ ಪದ್ಯ ಓದುವ ಸ್ಪರ್ಧೆಗಳನ್ನು ಏರ್ಪಡಿಸ ಬೇಕು. ಇದರಿಂದ ಸಮ್ಮೇಳನಕ್ಕೆ ಪೂರಕವಾಗಿ ಕನ್ನಡ ವಾತಾವರಣ ನಿರ್ಮಾಣವಾಗುತ್ತದೆ. ವಿಜೇತರಾದವರಿಗೆ ಸಮ್ಮೇಳನದಲ್ಲಿ ಉತ್ತಮ ಬಹುಮಾನ ನೀಡಬೇಕು ಎಂದರು.

ಕಸಪಾ ಜಿಲ್ಲಾ ಸಂಚಾಲಕರಾದ ಮೀರಾ ಶಿವಲಿಂಗಯ್ಯ ಮಾತನಾಡಿ, ಸಾಹಿತ್ಯ ಸಮ್ಮೇಳನವು ಸುವರ್ಣ ಕರ್ನಾಟಕದಲ್ಲಿ ಮಂಡ್ಯಕ್ಕೆ ಬಂದಿರುವುದು ಸಂತಸ ತಂದಿದೆ. ಇದು ನಮ್ಮ ಕನ್ನಡಿಗರ ಹಬ್ಬವೂ ಹೌದು, ಸಾಹಿತ್ಯ ಸಮ್ಮೇಳನವು ವಿಶ್ವವೇ ತಿರುಗಿ ನೋಡುವಂತೆ ಮಾಡುವ ಜವಾಬ್ದಾರಿ ಪ್ರತಿಯೊಬ್ಬ ಕನ್ನಡಿಗರ ಮೇಲಿದೆ. ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡೋಣ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಸಾಪ ಜಿಲ್ಲಾ ಕಾರ್ಯದರ್ಶಿ ಹುಸ್ಕೂರು ಕೃಷ್ಣೇಗೌಡ, ಸಹಕಾರ್ಯದರ್ಶಿ ಬಸವೇಗೌಡ ಖರಡ್ಯ, ತಾಲೂಕು ಕಸಾಪ ಅಧ್ಯಕ್ಷ ಚಂದ್ರುಲಿಂಗು, ಪದವಿ ಪೂರ್ವ ಕಾಲೇಜು ಕನ್ನಡ ಉಪನ್ಯಾಸಕರ ವೇದಿಕೆ ಅಧ್ಯಕ್ಷ ಲೋಕೇಶ್ ಬೆಕ್ಕಳಲೆ, ಕವಿ, ಉಪನ್ಯಾಸಕ ಕೆ.ಪಿ.ಮೃತ್ಯುಂಜಯ, ಜಿಲ್ಲಾ ಪ್ರೌಢಶಾಲಾ ಶಿಕ್ಷಕರ ಸಂಘದ ಮಾಜಿ ಕಾರ್ಯದರ್ಶಿ ಜಯರಾಮು, ಮಾಂಡವ್ಯ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಚಂದ್ರಶೇಖರ್, ಉಪನ್ಯಾಸಕ ಸುಂಡಹಳ್ಳಿ ಮಹೇಶ್, ಕನ್ನಡ ಉಪನ್ಯಾಸಕರು, ಪ್ರೌಢಶಾಲಾ ಶಿಕ್ಷಕರುಗಳು ಹಾಜರಿದ್ದರು.

# ಪುನೀತ್ ದಾರಿ ದೀಪ



**ಚಾಮರಾಜನಗರ:** ಚಲುವ ಚಾಮರಾಜನಗರ ಜಿಲ್ಲೆಯ ರಾಯಭಾರಿಯಾಗಿದ್ದ ಕರ್ನಾಟಕ ರತ್ನ ಡಾ|| ಪುನೀತ್ ರಾಜ್‌ಕುಮಾರ್ ಅವರನ್ನು ಕಳೆದುಕೊಂಡು ಪ್ರವಾಸೋಧ್ಯಮ ಚಟುವಟಿಕೆ ನಷ್ಟವನ್ನು ಹೊಂದಿದ್ದು ಮತ್ತು ಅಭಿಮಾನಿಗಳು ಅಪಾರ ದುಖಃವನ್ನು ಅನುಭವಿಸುವಂತಾಯಿತು.

ಎಂದು ಮುಖ್ಯ ಮಂತ್ರಿ ಪದಕ ಪುರಸ್ಕೃತ ಮತ್ತು ವಾಣಿಜ್ಯ ತೆರಿಗೆ ಉಪ ಆಯುಕ್ತರಾದ ಹಸಿಬುಲ್ಲ ಬೇಗ್ ತಿಳಿಸಿದರು.

ಚಾಮರಾಜನಗರ ಸಮೀಪದ ದೊಡ್ಡಗಾಜನೂರಿನ ಡಾ|| ರಾಜಕುಮಾರ್ ಅವರ ಹಳೆಯ ಮನೆಯ ಮುಂಭಾಗದಲ್ಲಿ ಚಾಮರಾಜನಗರ ಈಶ್ವರಿ ಸೋಷಿಯಲ್ ಟ್ರಸ್ಟ್ ವತಿಯಿಂದ ಕರ್ನಾಟಕ ರತ್ನ ಡಾ|| ಪುನೀತ್ ರಾಜ್‌ಕುಮಾರ್ ರವರ 3ನೇ ವರ್ಷದ ಪುಣ್ಯ ಸ್ಮರಣೆ ಹಾಗೂ ನುಡಿ ನಮನ, ಗೀತಗಾಯನ ಕಾರ್ಯಕ್ರಮದಲ್ಲಿ ಪುನೀತ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು. ಪುನೀತ್ ಬದುಕಿದ್ದರೆ ಜಿಲ್ಲೆ ಪ್ರವಾಸೋಧ್ಯಮ ಉನ್ನತ ಮಟ್ಟಕ್ಕೆ ಕೊಂಡೊಯುತ್ತಿದ್ದರು ಮತ್ತು ಇದರಿಂದ ಯುವಕರಿಗೆ ಉದ್ಯೋಗ ಸೃಷ್ಠಿಯಾಗುತಿತ್ತು ಎಂದು ಅಭಿಪ್ರಾಯಪಟ್ಟರು. ಅತಿ ಹೆಚ್ಚು ಅಭಿಮಾನಿಗಳನ್ನು ಹೊಂದಿರುವ ಪುನೀತ್ ಬಡವರಿಗೂ ಹಾಗೂ ವಿದ್ಯಾವಂತರಿಗೂ ದಾರಿ ದೀಪವಾಗಿದ್ದರು. ಅವರು ಯಾರಿಗೂ ತಿಳಿಯಂತೆ ಅನಾಥ ಮಕ್ಕಳಿಗೆ ಸಹಾಯವನ್ನು ಮಾಡುತ್ತಿದ್ದರು. ಅವರೊಬ್ಬ ಒಳ್ಳೆಯ ಹೃದಯವಂತ ವ್ಯಕ್ತಿಯಾಗಿದ್ದರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ|| ರಾಜ್ ಕುಟುಂಬದ ಸದಸ್ಯರಾದ ಗಾಜನೂರಿನ ಗೋಪಾಲ್ ಮಾತನಾಡಿ ನಮ್ಮ ಕಣ್ಣುಮುಂದೆ ಬೆಳೆದು ಜನರಿಂದ ಮೆಚ್ಚುಗೆಗೆ ಪಾತ್ರನಾಗಿ ಅಲ್ಪವದಿಯಲ್ಲಿ ನಮ್ಮನ್ನು ಅಗಲಿದ ಪುನೀತ್ ರಾಜ್‌ಕುಮಾರ್, ನಮ್ಮ ಕುಟುಂಬದ ಪ್ರೀತಿಯ ಮಗನಾಗಿದ್ದ ಪುನೀತ್ ನಮ್ಮ ಕುಟುಂಬದ ಕಿರಿಯ ಸದಸ್ಯನೂ ಆಗಿದ್ದ ಎಂದರು.

ಈಶ್ವರಿ ಸೋಷಿಯಲ್ ಟ್ರಸ್ಟ್‌ನ ಸಿ.ಎಂ. ವೆಂಕಟೇಶ್ ಮಾತನಾಡಿ ಪುನೀತ್ ರವರು ಬದುಕಿದ್ದಾಗ ಸಮಾಜಕ್ಕೆ ಸಹಕಾರಿಯಾಗಿದ್ದಲ್ಲದೆ, ಸತ್ತಮೇಲು ತಮ್ಮ ಎರಡು ಕಣ್ಣುಗಳನ್ನು ದಾನಮಾಡಿ ಇತರರ ಬಾಳಿಗೆ ಬೆಳಕಾದರು. ನೇತ್ರದಾನ ಮಹಾದಾನ ಎಂದು ಜಗತ್ತಿಗೆ ಸಾರಿದರು. ರೈತರಿಗೆ ಅನುಕೂಲವಾಗಲೆಂದು ನಂದಿನಿ ಹಾಲು ಮತ್ತು ಹಾಲಿನ ಉತ್ಪನ್ನಗಳಿಗೆ ಹಣ ಕಾಸು ಪಡೆಯದೆ ಉಚಿತವಾಗಿ ಪ್ರಚಾರ ಮಾಡಿದರು. ಡಾ|| ರಾಜಕುಮಾರ್ ರವರು ಅಭಿಮಾನಿಗಳನ್ನು ದೇವರೆಂದು ಕರೆದರು ಆದರೆ ಅಭಿಮಾನಿಗಳು ಪುನೀತ್ ರಾಜ್ ಕುಮಾರ್ ಅವರನ್ನು ದೇವರು ಎಂದು ಕರೆದರು ಎಂದು ತಿಳಿಸಿದರು. ಗೀತಗಾಯನವನ್ನು ಡಾ|| ಸುಗಂದರಾಜ್, ಆರ್.ಮಹೇಂದ್ರ, ವಿ.ಮಯೂರ, ರವಿಸಂತು, ಮುಡಿಗುಂಡಮೂರ್ತಿ, ಉಮ್ಮತ್ತೂರು ಚಂದ್ರು, ಪ್ರೀತಿ, ಆದರ್ಶ, ದೊರೆ, ನಾಗೇಂದ್ರ, ಸಿ.ಎಂ.ನರಸಿಂಹಮೂರ್ತಿ ಇನ್ನು ಮುಂತಾದವರು ನಡೆಸಿಕೊಟ್ಟರು. ಈಶ್ವರಿ ಸೋಷಿಯಲ್ ಟ್ರಸ್ಟ್ ವತಿಯಿಂದ ಕರ್ನಾಟಕ ರತ್ನ ಡಾ|| ಪುನೀತ್ ರಾಜ್ ಕುಮಾರ್ ರವರ 3ನೇ ವರ್ಷದ ಪುಣ್ಯ ಸ್ಮರಣೆ ಅಂಗವಾಗಿ ಅನ್ನಸಂತರ್ಪಣೆ ಮಾಡಲಾಯಿತು.

# ಪತ್ರಕರ್ತರಿಗೆ ಮೀಡಿಯಾ ಕಿಟ್ ಅರ್ಜಿ ಆಹ್ವಾನ

**ಬೆಂಗಳೂರು:** ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ ''ಮೀಡಿಯಾ ಕಿಟ್'' ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು, ಇಲಾಖೆಯ ಮಾನ್ಯತಾ ಕಾರ್ಡು (ಅಕ್ರಿಡಿಟೇಶನ್ ಕಾರ್ಡ್), ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸಬಯಸುವವರು ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2024-25ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡು ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್ಟಗಳನ್ನು ಪಡೆದಿರುವುದಿಲ್ಲ ಎಂದು ರೂ. 100 ರ ಬಾಂಡ್ ನಲ್ಲಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬೇಕು.

ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 10-11-2024 ರ ಸಂಜೆ 5:00 ಗಂಟೆಯೊಳಗೆ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು. ಲಕೋಟೆಯ ಮೇಲ್ಭಾಗದಲ್ಲಿ ''ಪ.ಜಾ ಹಾಗೂ ಪ.ಪಂ. ಮಾಧ್ಯಮ ಮಾನ್ಯತೆ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಾಗಿ ಅರ್ಜಿ ಎಂದು ನಮೂದಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗತ್ವ ಅಲ್ಪಸಂಖ್ಯಾತರ ಬೇಸ್‌ಲೈನ್ ಸರ್ವೆ

**ಬೆಂಗಳೂರು:** 2020-21 ರ ಆಯವ್ಯಯದಲ್ಲಿ ಕರ್ನಾಟಕ ರಾಜ್ಯ ಲಿಂಗತ್ವ ಅಲ್ಪ ಸಂಖ್ಯಾತರು (ಟ್ರಾನ್ಸ್ ಜೆಂಡರ್) ನೀತಿ 2012ಕ್ಕೆ ಪೂರಕವಾಗಿ ರಾಜ್ಯಾದ್ಯಂತ ಮೊದಲ ಹಂತದ ಸಮೀಕ್ಷೆಯನ್ನು ರೂ 70 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ಉದ್ದೇಶಿಸಲಾಗಿದೆ ಎಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಅಯುಕ್ತರು ಮತ್ತು ರಾಜ್ಯಮಟ್ಟದ ಸಮನ್ವಯ ಸಮಿತಿ ಲಿಂಗತ್ವ ಅಲ್ಪ ಸಂಖ್ಯಾತರ ಅಧ್ಯಕ್ಷರಾದ ಶ್ರೀಮತಿ ಉಮಾ ಮಹದೇವನ್ ತಿಳಿಸಿದರು.

ವಿಧಾನಸೌಧದಲ್ಲಿ ಇಂದು 29 ಜಿಲ್ಲೆಗಳ ಲಿಂಗತ್ವ ಅಲ್ಪಸಂಖ್ಯಾತರ ಬೇಸ್‌ಲೈನ್ ಸರ್ವೆ ಕೈಗೊಳ್ಳಲು ಪೂರ್ವಸಿದ್ದತೆ ಕುರಿತು ಹಮ್ಮಿಕೊಳ್ಳಲಾದ ಸಭೆಯಲ್ಲಿ ಈ ವಿಷಯ ತಿಳಿಸಿದರು. ಲಿಂಗತ್ವ ಅಲ್ಪಸಂಖ್ಯಾತರನ್ನು ಮುಖ್ಯವಾಹಿನಿಗೆ ತರುವ ಸಲುವಾಗಿ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಇವರಿಗೆ ಉದ್ಯೋಗ ಶಿಕ್ಷಣ ಮೀಸಲಾತಿ ಒದಗಿಸಿ, ಸಾಮಾಜಿಕ ಹಾಗೂ ಆರ್ಥಿಕವಾಗಿ ಅಭಿವೃದ್ಧಿಪಡಿಸಬೇಕು ಎಂದರು. ಮೈಸೂರು ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಮುದಾಯ ಆಧಾರಿತ ಸಂಸ್ಥೆಗಳಿಂದ ಮಾಸ್ಟರ್ ಟ್ರೈನರ್ಸ್ ಸಮೀಕ್ಷೆದಾರರಿಂದ ಲಿಂಗತ್ವ ಅಲ್ಪಸಂಖ್ಯಾತರ ಪ್ರಾಯೋಗಿಕ ಸಮೀಕ್ಷೆಯನ್ನು ನಡೆಸಲಾಗಿತ್ತು. ಈ ಸಮೀಕ್ಷೆಯನ್ನು ಮಾರ್ಚ್ 2023ರಿಂದ 45 ದಿನಗಳ ಕಾಲ ನಡೆಸಲಾಯಿತು. ಮೈಸೂರಿನ ಒಟ್ಟು 245 ಹಾಗೂ ವಿಜಯಪುರದಲ್ಲಿ 1014 ಜನರನ್ನು ಸಮೀಕ್ಷೆಗೆ ಒಳಪಡಿಸಲಾಯಿತು ಎಂದರು. ಈ ಬಾರಿ ಎಲ್ಲಾ ಜಿಲ್ಲೆಗಳಲ್ಲೂ ಸಮೀಕ್ಷೆ ಕೈಗೊಳ್ಳಲು ಕ್ರಮವಹಿಸಲಾಗಿದ್ದು, ಎನುಮರೇಟರ್‌ಗಳಿಗೆ ಪ್ರತಿದಿನ 400 ರೂ. ಗಳಂತೆ ಪ್ರತಿಯೊಬ್ಬರ ಸಮೀಕ್ಷೆಗೆ ರೂ. 75/- ನ್ನು ನಿಗದಿಪಡಿಸಲಾಗಿದೆ. ಈ ಸಮೀಕ್ಷೆಯನ್ನು 45 ದಿನಗಳ ಒಳಗಾಗಿ ಪೂರ್ಣಗೊಳಿಸಲು ಅವಧಿ ನೀಡಲಾಗಿರುತ್ತದೆ ಎಂದರು.

ಲಿಂಗತ್ವ ಅಲ್ಪಸಂಖ್ಯಾತರನ್ನು ಯಾವುದೇ ಭಯ, ಅವಮಾನ, ಲಿಂಗ ತಾರತಮ್ಯತೆ ಮುಂತಾದ ಸಮಸ್ಯೆಗಳಿಂದ ಹೊರತಂದು ಅವರಿಗೆ ಮೂಲಭೂತ ಸೌಕರ್ಯಗಳಾದ ಆರೋಗ್ಯ, ಶಿಕ್ಷಣ, ವಸತಿ ಮತ್ತು ಜೀವನೋಪಾಯ ಸೌಲಭ್ಯಗಳನ್ನು ಒದಗಿಸಲು ಕರ್ನಾಟಕ ಟ್ರಾನ್ಸ್‌ಜೆಂಡರ್ಸ್ ನೀತಿ - 2012ನ್ನು ಜಾರಿಗೊಳಿಸಲಾಗಿದೆ ಎಂದರು.

ಜಿಲ್ಲಾ, ತಾಲ್ಲೂಕು ಹಾಗೂ ರಾಜ್ಯ ಮಟ್ಟದಲ್ಲಿ ಟ್ರಾನ್ಸ್‌ಜೆಂಡರ್ಸ್ ಕೋಶವನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿ ಈವರೆಗೆ 43 ಸಾವಿರ ಲಿಂಗತ್ವ ಅಲ್ಪಸಂಖ್ಯಾತರಿದ್ದು, ಇದುವರೆಗೆ 3092 ಜನ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಅಧಿಕೃತ ಟ್ರಾನ್ಸ್‌ಜೆಂಡರ್ ಗುರುತಿನ ಚೀಟಿ ಪಡೆದಿದ್ದಾರೆ. ಈ ಗುರುತಿಸುವಿಕೆ ಹಾಗೂ ಗುರುತಿನ ಚೀಟಿ ಪ್ರಕ್ರಿಯೆ ಸರಳಗೊಳಿಸಲು ಜಿಲ್ಲಾ ಮಟ್ಟದಲ್ಲಿ ಆದ್ಯತಾ ಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ.

ಮುಂಬರುವ ದಿನಗಳಲ್ಲಿ ಇವರಿಗೆ ಟ್ರೋಲ್ ಫ್ರೀ ಸಹಾಯವಾಣಿಯನ್ನು ಸಹ ತೆರೆಯಲಾಗುವುದು. ವಸತಿ ಮತ್ತು ಯೋಜನೆಗಳನ್ನು ಸಹ ಜಾರಿಗೊಳಿಸಲಾಗುವುದು. ಮೈತ್ರಿ ಯೋಜನೆಯಡಿ ರೂ 800/- ಮಾಸಾಶನವನ್ನು 2143 ಲಿಂಗತ್ವ ಅಲ್ಪಸಂಖ್ಯಾತರಿಗೆ ಒದಗಿಸಲಾಗಿದೆ. ಗೃಹ ಲಕ್ಷ್ಮಿ ಯೋಜನೆಯಲ್ಲೂ ಇವರಿಗೆ ಸೌಲಭ್ಯ ನೀಡಲು ಅನುಮೋದಿಸಲಾಗಿದೆ. ಶಕ್ತಿ ಯೋಜನೆಯಡಿ ಪ್ರಯಾಣ ಸೌಕರ್ಯ, ಕಾರ್ಯಾಗಾರ ಮತ್ತು ಉದ್ಯೋಗ, ಶಿಕ್ಷಣ ನೀಡಲಾಗುತ್ತದೆ. ಅಲ್ಲದೆ ಆರೋಗ್ಯ ವಿಮೆ, ಆರೋಗ್ಯ ಕಾರ್ಡು, ಹೆಚ್.ಐ.ವಿ ಸರ್ವೈಲೆನ್ಸ್ ಕೇಂದ್ರ ಸ್ಥಾಪನೆ ಮುಂತಾದ ಸೌಕರ್ಯ ಒದಗಿಸಲಾಗುವುದು. ಬಿ.ಪಿ.ಎಲ್ / ಪಡಿತರ ಆಹಾರ ಕಾರ್ಡು, ಮಾಸಿಕ ಪಿಂಚಣಿ ಮುಂತಾದುವುಗಳನ್ನು ಸಂಬಂಧಪಟ್ಟವರಿಗೆ ನೀಡಲು ಕ್ರಮ ಕೈಗೊಳ್ಳುವಂತೆ ತಿಳಿಸಲಾಗುವುದು ಎಂದು ತಿಳಿಸಿದರು.

# ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಏಕೈಕ ಪಕ್ಷ ಬಿಜೆಪಿ



**ವಿಜಯಪುರ:** ಸಕ್ರಿಯ ಸದಸ್ಯತ್ವ ಬಲಪಡಿಸುವ ಮೂಲಕ ತಳಮಟ್ಟದಲ್ಲಿ ನಮ್ಮ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಮತ್ತು ರಾಷ್ಟ್ರೀಯ ಪ್ರಗತಿಗೆ ನಮ್ಮ ಪಕ್ಷದ ಕಾರ್ಯಕರ್ತರ ಕೊಡುಗೆ ಖಚಿತಪಡಿಸುವ ಆಂದೋಲನವಾಗಿದೆ ಎಂದು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಚ್.ಎಂ. ರವಿಕುಮಾರ್ ತಿಳಿಸಿದರು.

ಇಲ್ಲಿನ ಅಂಕತಟ್ಟಿ ನಂಜುಂಡಪ್ಪ ವೃತ್ತದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಬಿಜೆಪಿ ಸಾಮಾಜಿಕ ಜಾಲತಾಣ ಪ್ರಕೋಷ್ಠವತಿಯಿಂದ ಬಿಜೆಪಿ ಸದಸ್ಯತಾ ಅಭಿಯಾನ 2024ಕ್ಕೆ ಚಾಲನೆ ನೀಡಿ ಮಾತನಾಡಿದರು.

ದೇಶದಲ್ಲಿ 10 ಕೋಟಿ ಸದಸ್ಯರುಗಳನ್ನು ನೋಂದಣಿ ಮಾಡಿಸಿ, ಕರ್ನಾಟಕ ರಾಜ್ಯದಲ್ಲಿ ಕೇವಲ 45 ದಿನಗಳಲ್ಲಿ 65 ಲಕ್ಷ ಸದಸ್ಯರನ್ನು ನೋಂದಣಿ ಮಾಡಿಸಿಕೊಂಡು ಅತಿ ವೇಗವಾಗಿ ಬೆಳೆಯುತ್ತಿರುವ ಏಕೈಕ ಪಕ್ಷ ಬಿಜೆಪಿ ಪಕ್ಷವಾಗಿದೆ ಎಂದು ತಿಳಿಸಿದರು

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎರಡುವರೆ ಲಕ್ಷ ಸದಸ್ಯರ ನೋಂದಣಿಗೆ ನಮಗೆ ಗುರಿ ನೀಡಲಾಗಿದ್ದು ಈಗಾಗಲೇ ಜಿಲ್ಲೆಯಲ್ಲಿ ದೊಡ್ಡಬಳ್ಳಾಪುರ ತಾಲೂಕಿನಿಂದ 40,000 ದೇವನಹಳ್ಳಿ ತಾಲೂಕಿನಲ್ಲಿ 14,000 ನೆಲಮಂಗಲದಲ್ಲಿ 14,000 ಹೊಸಕೋಟೆಯಲ್ಲಿ 8000 ಸದಸ್ಯರುಗಳ ನೋಂದಣಿ ಮಾಡುವ ಮೂಲಕ 25ರಷ್ಟು ಗುರಿ ಸಾಧಿಸಲಾಗಿದ್ದು ನವಂಬರ್ ಐದರ ಒಳಗಾಗಿ ಪೂರ್ಣಗುರಿ ಸಾಧಿಸಲಾಗುವುದೆಂದು ತಿಳಿಸಿದರು.

ರಾಜ್ಯದಲ್ಲಿ ನಡೆಯುತ್ತಿರುವ ಶಿಗ್ಗಾವಿ, ಸಂಡೂರು, ಚನ್ನಪಟ್ಟಣ ಉಪಚುನಾವಣೆಗಳಲ್ಲಿ ಎನ್ ಡಿ ಎ ಅಭ್ಯರ್ಥಿಗಳು ಅತಿ ಹೆಚ್ಚಿನ ಮತಗಳನ್ನು ಪಡೆದು ಗೆಲುವು ಸಾಧಿಸುವುದು ಶತ ಸಿದ್ದವೆಂದು ತಿಳಿಸಿದರು

ದೇವನಹಳ್ಳಿ ತಾಲೂಕು ಬಿಜೆಪಿ ಪ್ರಧಾನ ಕಾರ್ಯದರ್ಶಿ ಡಿ.ಎಸ್.ರವಿಕುಮಾರ್ ಮಾತನಾಡಿ ನರೇಂದ್ರ ಮೋದಿ ಸಕ್ರಿಯ ಸದಸ್ಯತಾ ಅಭಿಯಾನವನ್ನು ಪ್ರಾರಂಭಿಸುವ ಮೂಲಕ ಬಿಜೆಪಿಯ ಮೊದಲ ಸಕ್ರಿಯ ಸದಸ್ಯರಾಗಿ ತಮ್ಮ ಸದಸ್ಯತ್ವವನ್ನು ಮರು ನೋಂದಣಿ ಮಾಡಿಕೊಂಡಿದ್ದಾರೆ. ಪಕ್ಷವನ್ನು ತಳಮಟ್ಟದಲ್ಲಿ ಮತ್ತಷ್ಟು ಬಲಪಡಿಸಲು ಹಾಗೂ ಪ್ರಧಾನಿ ನರೇಂದ್ರ ಮೋದಿಯ ವಿಕಸಿತ ಭಾರತದ ಪರಿಕಲ್ಪನೆಗೆ ವೇಗ ನೀಡುವ ನಿಟ್ಟಿನಲ್ಲಿ ಈ ಅಭಿಯಾನ ಬಹಳ ಪ್ರಾಮುಖ್ಯತೆಯನ್ನು ಪಡೆದುಕೊಂಡಿದೆ ಎಂದರು.

ಸದಸ್ಯತ್ವ ನೋಂದಣಿಯಲ್ಲಿ ಈ ಬಾರಿ ಬದಲಾವಣೆ ಮಾಡಲಾಗಿದ್ದು ಸದಸ್ಯತ್ವ ಪಡೆದುಕೊಳ್ಳುವವರು ಮೊಬೈಲ್ ನಂಬರ್ ಗೆ ಓಟಿಪಿ ಹಾಗೂ ಅವರುಗಳ ಜನ್ಮ ದಿನಾಂಕವನ್ನು ನೋಂದಾಯಿಸಿಕೊಳ್ಳುವ ಮೂಲಕ ಸದಸ್ಯತ್ವವನ್ನು ಮಾಡಲಾಗುತ್ತಿದೆ ಎಂದು ತಿಳಿಸಿದರು. ಸಹ ಸಂಚಾಲಕರಾದ ಶಾಮಣ್ಣ ರವರು ಮಾತನಾಡಿ ಪಕ್ಷದಿಂದ ಪಕ್ಷಕ್ಕೆ ಬದಲಾವಣೆ ಆಗುತ್ತಿರುವ ಯೋಗೇಶ್ವರ್ ರವರನ್ನು ಈ ಬಾರಿ ಚೆನ್ನಪಟ್ಟಣ ಜನತೆ ಪರಾಭವಗೊಳಿಸಲಿದ್ದು, ಯುವಕರಾದ ಕಳೆದ ಎರಡು ಚುನಾವಣೆಯಲ್ಲಿ ಸೋಲು ಅನುಭವಿಸಿರುವ ನಿಖಿಲ್ ಕುಮಾರಸ್ವಾಮಿ ರವರಿಗೆ ಅನುಕಂಪದ ಅಲೆ ಇದ್ದು ಈ ಬಾರಿ ಚನಪಟ್ಟಣದಿಂದ ಅವರ ಗೆಲುವು ಖಚಿತವೆಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸಾಮಾಜಿಕ ಜಾಲತಾಣ ಸಂಚಾಲಕರಾದ ಸಾಗರ್, ಸಹ ಸಂಚಾಲಕರಾದ ವಾಣಿ ನಂದಕುಮಾರ್, ತಾಲ್ಲೂಕು ಮಹಿಳಾ ಪ್ರದಾನ ಕಾರ್ಯದರ್ಶಿ ವೀಣಾ, ಮುಖಂಡರಾದ ಭಗವಾನ್, ಶಾಮಣ್ಣ, ಕನಕರಾಜು, ಪ್ರೇಮ, ಮುನೀಂದ್ರ, ಸುಬ್ರಮಣಿ ಇತರರು ಹಾಜರಿದ್ದರು.

# ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿಗೆ ಆಯ್ಕೆ

**ವಿಜಯಪುರ:** ಹೋಬಳಿಯ ಗೊಡ್ಲುಮುದ್ದೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ/ಉಪಾಧ್ಯಕ್ಷ ಸ್ಥಾನಗಳಿಗೆ ಮಂಗಳವಾರದಂದು ಜಿಲ್ಲಾಧಿಕಾರಿಗಳ ಆದೇಶದ ಮೇರೆಗೆ ಚುನಾವಣೆ ನಡೆಸಲಾಗಿದ್ದು, 21 ಸದಸ್ಯರುಗಳ ಗೊಡ್ಲು ಮುದ್ದೇನ ಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 12 ಮತಗಳನ್ನು ಪಡೆದ ನಾರಾಯಣಪುರದ ಎಂ ಮುರಳಿಧರ್, ಅಧ್ಯಕ್ಷರಾಗಿ 12 ಮತಗಳನ್ನು ಪಡೆದ ರತ್ನಮ್ಮ ಮುನಿತಮ್ಮಣ್ಣ, ಉಪಾಧ್ಯಕ್ಷರಾಗಿ ಆಯ್ಕೆಯಾಗುವ ಮೂಲಕ ಎರಡು ಸ್ಥಾನಗಳು ಎನ್ ಡಿ ಎ ಅಭ್ಯರ್ಥಿಗಳ ಪಾಲಾಯಿತು. ಪಂಚಾಯಿತಿಯ 21 ಸದಸ್ಯರುಗಳ ಪೈಕಿ ಮುನಿಆಂಜನಪ್ಪ ಗೈರು ಹಾಜರಾಗಿದ್ದು, ಹಾಜರಿದ್ದ 20 ಸದಸ್ಯರುಗಳ ಪೈಕಿ ಒಬ್ಬರ ಮತ ಅಧ್ಯಕ್ಷ/ಉಪಾಧ್ಯಕ್ಷರುಗಳ ಮತ ಎಣಿಕೆಯಲ್ಲಿ ಅಮಾನ್ಯವಾಗಿದ್ದು, ಉಳಿದ 19 ಸದಸ್ಯರ ಪೈಕಿ 12 ಮಂದಿ ಎನ್.ಡಿ.ಎ ಬೆಂಬಲಿತ ಅಭ್ಯರ್ಥಿಗೆ ಮತ ನೀಡಿದ್ದು, ಏಳು ಮಂದಿ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳಿಗೆ ಮತ ನೀಡಿದರು. ಪಂಚಾಯಿತಿಯಲ್ಲಿ ಜೆಡಿಎಸ್ ಬೆಂಬಲಿತ 9 ಮಂದಿ, ಬಿಜೆಪಿ ಬೆಂಬಲಿತ ಆರು ಮಂದಿ, ಕಾಂಗ್ರೆಸ್ ಬೆಂಬಲಿತ ಐದು ಮಂದಿ ಸದಸ್ಯರುಗಳಿದ್ದಾಗಿಯೂ ಸಹ ಎನ್ ಡಿ ಎ ಬೆಂಬಲಿತ ಈರ್ವರು ಅಭ್ಯರ್ಥಿಗಳು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿದ್ದು ಕಂಡುಬಂದಿತು.

ಗೊಡ್ಲು ಮುದ್ದೇನಹಳ್ಳಿ ಗ್ರಾಮ ಪಂಚಾಯಿತಿಯ ನಾಲ್ಕಾರು ದಶಕಗಳ ಇತಿಹಾಸದಲ್ಲಿ ಮೊದಲ ಬಾರಿಗೆ ನಾರಾಯಣಪುರ ಕ್ಷೇತ್ರದಿಂದ ಆಯ್ಕೆಯಾಗಿದ್ದ ಸದಸ್ಯ ಅಧ್ಯಕ್ಷರಾಗಿ ಆಯ್ಕೆ ಆಗಿರುವುದು ವಿಶೇಷವಾಗಿತ್ತು. ನೂತನ ಅಧ್ಯಕ್ಷ ಎಂ.ಮುರುಳಿಧರ್ ಮಾತನಾಡಿ, ಅಧ್ಯಕ್ಷರಾಗಿ ಆಯ್ಕೆಯಾಗಲು ಸಹಕರಿಸಿದ ಬಿಜೆಪಿ ಮುಖಂಡರಾದ ಚೇತನ್ ಗೌಡ ಹಾಗೂ ಜೆಡಿಎಸ್ ಮುಖಂಡರುಗಳಿಗೆ ಕೃತಜ್ಞತೆ ತಿಳಿಸಿ, ಮುಂದಿನ ದಿನಗಳಲ್ಲಿ ಪಕ್ಷಾತೀತವಾಗಿ ಎಲ್ಲರನ್ನೂ ವಿಶ್ವಾಸಕ್ಕೆ ಪಡೆದು ಪಂಚಾಯ್ತಿಯ ಮೂಲ ಸೌಕರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುವುದರೊಂದಿಗೆ ಕೆಲಸ ನಿರ್ವಹಿಸುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಚೇತನ್, ಮರಿ ತಮ್ಮಣ್ಣ, ಅಮರನಾಥ್, ಜೆಡಿಎಸ್ ವಿಜಯಪುರ ಹೋಬಳಿ ಅಧ್ಯಕ್ಷ ಪುರ ಕೃಷ್ಣಪ್ಪ, ಕಾರ್ಯದರ್ಶಿ ಕಲ್ಯಾಣ್ ಕುಮಾರ್ ಬಾಬು, ಎ.ಪಿ.ಎಂ.ಸಿ ಮಾಜಿ ಉಪಾಧ್ಯಕ್ಷ ಸುಧಾಕರ್, ಬಮೂಲ್‌ನ ಮಾಜಿ ನಿರ್ದೇಶಕರಾದ ದಂಡಿಗಾನಹಳ್ಳಿ ನಾರಾಯಣಸ್ವಾಮಿ, ಜೆಡಿಎಸ್ ಜಿಲ್ಲಾ ರೈತ ವಿಭಾಗದ ಅಧ್ಯಕ್ಷ ಚಿಕ್ಕನಹಳ್ಳಿ ಸುಬ್ಬಣ್ಣ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಕೋರಮಂಗಲ ವೀರಪ್ಪ, ವಕೀಲ ವೆಂಕಟೇಶ್, ಪುರ ಪ್ರಕಾಶ್, ಮಂಡಿಬೆಲೆ ವಿ ಎಸ್ ಎಸ್ ನ ಚನ್ನೇಗೌಡ, ಪಂಚಾಯಿತಿಯ ಮಾಜಿ ಅಧ್ಯಕ್ಷರುಗಳಾದ ಜಗದೀಶ್, ಆನಂದಮ್ಮ, ನಾರಾಯಣಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು. ಚುನಾವಣಾ ಅಧಿಕಾರಿಗಳಾಗಿ ಮೀನುಗಾರಿಕಾ ಇಲಾಖೆಯ ಸಹ ನಿರ್ದೇಶಕರಾದ ಡಾ. ನಾಗೇಂದ್ರ ಕಾರ್ಯ ನಿರ್ವಹಿಸಿದರು. ಸಹಾಯಕರಾಗಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ಮಂಜುನಾಥ್ ಕಾರ್ಯನಿರ್ವಹಿಸಿದರು.



# ಮಕ್ಕಳಿಗೆ ಶಾಲೆಗಳು ಅಕ್ಷರದ ಜೊತೆ ಸಂಸ್ಕಾರ ನೀಡುವಂತಾಗಬೇಕು



**ಮೈಸೂರು:** 'ಇಂದಿನ ವಿದ್ಯಾರ್ಥಿಗಳಿಗೆ 'ಮಾರ್ಕ್ಸ್‌ಗಿಂತ ರಿಮಾರ್ಕ್ಸ್' ಇಲ್ಲದ ಜೀವನ ಬಹು ಮುಖ್ಯವಾದುದೆಂದೂ, ಅಕ್ಷರಕ್ಕಿಂತ ಮುಖ್ಯವಾದದ್ದು ಸಂಸ್ಕಾರವೆಂದೂ ಹೇಳಬೇಕಾದ ತುರ್ತು ಪರಿಸ್ಥಿತಿ ಹಿಂದೆಂದಿಗಿಂತ ಇಂದು ಹೆಚ್ಚಾಗಿದ್ದು, ಇದನ್ನು ಶಾಲೆಗಳು ಪ್ರಾಮಾಣಿಕವಾಗಿ ಮಾಡಬೇಕಾಗಿದೆ. ಇಲ್ಲದೇ ಶಾಲೆಗಳಲ್ಲಿ ಹೃದಯವಂತ ಮಕ್ಕಳು ನಿರ್ಮಾಣವಾಗದೇ ಉಸಿರಾಡುವ ಕಂಪ್ಯೂಟರ್‌ಗಳು ನಿರ್ಮಾಣವಾಗುತ್ತವೆ. ಹೃದಯಹೀನವಾದ ಅವುಗಳಿಂದ ಮಾನವೀಯವಾದ ಭಾರತವನ್ನು ಕಟ್ಟಲಾಗದು' ಎಂದು ಖ್ಯಾತ ಕವಿ ಡಾ.ಜಯಪ್ಪ ಹೊನ್ನಾಳಿ ಅಭಿಪ್ರಾಯಿಸಿದರು.

ಮೈಸೂರಿನ ವಿಜಯನಗರದ ಡಿಎಸ್‌ಎಂ ವಿದ್ಯಾಸಂಸ್ಥೆಯ ಶ್ರೀ ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಆಯೋಜಿಸಿದ್ದ 'ಮಕ್ಕಳ ಸಾಂಸ್ಕೃತಿಕ ಸಂಭ್ರಮ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, 'ಇಂದಿನ ಸಮಾಜದಲ್ಲಿ ಹಣ ಮಾಲೀಕನಾಗಿ, ಗುಣ ಗುಲಾಮನಾಗಿರುವ ದುಃಸ್ಥಿತಿ ಬಂದಿದೆ. ಇದೇ ಸ್ಥಿತಿ ಮುಂದುವರೆದು, ಅಮಾನವೀಯವಾದ ಚಟುವಟಿಕೆಗಳು ಸಮುದಾಯದಲ್ಲಿ ಹೆಚ್ಚಾಗಬಾರದೆಂದರೆ, ನಮ್ಮ ಮಕ್ಕಳು ಫೇಸ್ ಬುಕ್, ಪಾಸ್ ಬುಕ್, ಚೆಕ್ ಬುಕ್‌ಗಳ ಅಸಹ್ಯ ಸಹವಾಸದಿಂದ ದೂರವಾಗಿ, ನಮ್ಮ ಸುಸಂಸ್ಕೃತಿ ಕಲಿಸುವ ಶಾಲಾ ಬುಕ್‌ಗಳಿಗೆ ಹತ್ತಿರವಾಗಬೇಕಿದೆ. ಅಕ್ಷರಗಳೊಂದಿಗೆ ಶಾಲೆಗಳು ಮಕ್ಕಳಿಗೆ ಮಾನವೀಯ ಮೌಲ್ಯಗಳನ್ನು ತಿಳಿಸಿ, ಮನುಷ್ಯತ್ವದ ಸಂಸ್ಕಾರವನ್ನೂ ಮಕ್ಕಳಿಗೆ ನೀಡಬೇಕಿದೆ. ಅವರು ಮುಂದೆ ಏನಾದರಾಗಲೀ, ಅದಕ್ಕೂ ಮೊದಲು ಅವರನ್ನು ಮಾನವರ ಮಾಡಬೇಕಿದೆ' ಎಂದು ತಿಳಿಸಿದರು.

ಕೃಷಿಯನ್ನೇ ನಂಬಿ ಬದುಕುತ್ತಿರುವ ಈ ನೆಲದ ಕೃಷಿಕನ ಮಗನೀಗ 'ಹುಯ್ಯೋ ಹುಯ್ಯೋ ಮಳೆರಾಯ, ಅಕ್ಕನ ತೋಟಕ್ಕೆ ನೀರಿಲ್ಲಾ' ಹಾಡುವ ಬದಲು, 'ರೇನ್ ರೇನ್ ಗೋ ಅವೇ' ಹಾಡುತ್ತಿರುವುದು ದೌರ್ಭಾಗ್ಯದ ವಿಚಾರ. 'ಆಚಾರಕ್ಕರಸಾಗು ನೀತಿಗೆ ಪ್ರಭುವಾಗು ಮಾತಿನಲಿ ಚೂಡಾಮಣಿಯಾಗು ನನಕಂದ ಜ್ಯೋತಿಯೇ ಆಗು ಜಗಕ್ಕೆಲ್ಲ' ಎನ್ನುತ್ತಿದ್ದ ಒಕ್ಕಲುಗಿತ್ತಿಯೀಗ ಆಂಗ್ಲದ ಆ ಹಾಡು ಕೇಳಿ ಅರ್ಥವಾಗದಿದ್ದರೂ ಆನಂದಿಸುತ್ತಿರುವುದು ವಿಷಾದನೀಯವಾದ ವಿಚಾರ. ನಾವು ಸಾಂಸ್ಕೃತಿಕವಾಗಿ ದಿವಾಳಿಯಾಗುತ್ತಿರುವುದರ ಮುನ್ಸೂಚನೆಯಿದು. ಕನ್ನಡಿಗರಾದ ನಾವು ಈಗಲೂ ಎಚ್ಚೆತ್ತುಕೊಳ್ಳದಿದ್ದರೆ ಮುಂದೆ ನಮ್ಮನ್ನು ಅಧೋಗತಿಗೊಯ್ಯಲಿರುವ ದುರ್ದಿನಗಳನ್ನು ಅಸಹಾಯಕತೆಯಿಂದ ಎದುರಿಸಬೇಕಾಗುತ್ತದೆ ಎಂದರು.

ಸಾಧಕರಾದ ನಂಜನಗೂಡು ತಾಲ್ಲೂಕಿನ ಅಕ್ಷರ ದಾಸೋಹ ಯೋಜನೆಯ ಸಹಾಯಕ ನಿರ್ದೇಶಕ ಬಿ.ಸೋಮಶೇಖರ್ ಹಾಗೂ ಡಿ.ಎಂ.ಪಾಳ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಶ್ರೀಮತಿ ಹೆಚ್.ಸಿ.ಸುಬ್ಬಲಕ್ಷ್ಮಿ ಅವರನ್ನು ಅಭಿನಂದಿಸಿ ಸನ್ಮಾನಿಸಲಾಯಿತು. ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಟ್ಟರು. ಸಂಘಟನೆಯ ಅಧ್ಯಕ್ಷ ಡಾ.ಎಂ.ಶಿವಸ್ವಾಮಿ ಪ್ರಾಸ್ತಾವಿಕ ನುಡಿಗಳನ್ನಾಡಿ ಸರ್ವರನ್ನೂ ಸ್ವಾಗತಿಸಿದರು. ಕಾರ್ಯದರ್ಶಿ ಹಾಗೂ ಯುವ ಕವಿ ಬಿಡಿಎಂ ಕುಮಾರ ನಿರೂಪಿಸಿದರೆ, ಶಿಕ್ಷಕ ಹರೀಶ್ ವಂದಿಸಿದರು. ಪದಾಧಿಕಾರಿಗಳಾದ ಪಾರ್ವತಮ್ಮ, ಮಹದೇವಮ್ಮ, ರಾಣಿ ಮಾದಪ್ಪ, ಮಣಿಕಂಠ, ಲೀಲಾವತಿ ಯಾಲಕಯ್ಯ, ಕವಯತ್ರಿ ಶಾಂತಕುಮಾರಿ, ಉಮೇಶ್, ರಂಗಸ್ವಾಮಿ, ರತ್ನಮ್ಮ, ಚಂದ್ರಶೇಖರಯ್ಯ, ಅಲುಮೇಲಮ್ಮ, ಸಾಂಬಾಮೂರ್ತಿ, ಕೃಷ್ಣಶೆಟ್ಟಿ, ಚಿಕ್ಕಲಿಂಗಸ್ವಾಮಿ, ಕಮಲ ಕೆ., ಅನಿಲ್ ರಾಜ್, ಭಾಗೀರತಿ, ಚಿಕ್ಕಣ್ಣ, ಮಂಜುಳಾದೇವಿ, ವೆಂಕಟಮ್ಮ, ನಾಗರತ್ನಮ್ಮ, ಶಿಕ್ಷಕಿ ತನುಜ, ಶಿಕ್ಷಕರಾದ ಶಿವಮೂರ್ತಿ, ಮಹದೇವಸ್ವಾಮಿ, ಜಯರಾಜ್, ನಾಗಪ್ಪ ಹಾಗೂ ಬಿ.ಎಡ್. ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ಡಾ.ಪ್ರಣಬ್ ಮೊಹಂತಿ ಅಭಿಮತ

# ಕೌಶಲ್ಯವೃದ್ಧಿಗೆ ಆದ್ಯತೆ




**ತುಮಕೂರು:** ಉದ್ಯಮದ ಅಗತ್ಯಕ್ಕೆ ಅನುಗುಣವಾಗಿ ಯುವ ಸಮೂಹ ಎಲ್ಲಾ ವಲಯದಲ್ಲಿ ಕೌಶಲ್ಯವೃದ್ಧಿಸಿಕೊಳ್ಳಬೇಕೆಂದು ಸಿ.ಐ.ಡಿ. ವಿಭಾಗದ ಡಿಜಿಪಿ ಡಾ.ಪ್ರಣಬ್ ಮೊಹಂತಿ ಅಭಿಪ್ರಾಯಪಟ್ಟಿದ್ದಾರೆ. ಶ್ರೀದೇವಿ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ ಮತ್ತು ಶ್ರೀಟೆಕ್ ಇನ್ನೋವೇಷನ್ ಜಂಟಿ ಸಹಯೋಗದಲ್ಲಿ ನಿರಂತರ 24 ಗಂಟೆಗಳ ಪ್ರತಿಭಾನ್ವೇಷಣೆ ಮತ್ತು ರಾಷ್ಟ್ರಮಟ್ಟದ ಹ್ಯಾಕಥಾನ್ ಕಾರ್ಯಕ್ರಮವನ್ನು ಮಂಗಳವಾರ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಅಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಡಾ.ಪ್ರಣಬ್ ಮೊಹಂತಿರವರು ಮಾತನಾಡುತ್ತಾ ಅವರು ವೈದ್ಯಕೀಯ ಕ್ಷೇತ್ರ, ಪರಿಸರ ಮತ್ತು ಕೃಷಿ ವಲಯದಲ್ಲಿ ಸಂಶೋಧನೆಗೆ ಹೆಚ್ಚಿನ ಅವಕಾಶಗಳಿವೆ. ಆಳವಾದ ಕಲಿಕೆ, ಜ್ಞಾನ ಸಂಪಾದನೆ ಕ್ರಾಂತಿಕಾರಕ ಬದಲಾವಣೆಗೆ ನಾಂದಿ ಹಾಡಲಿದೆ. ಮುಂದಿನ ದಿನಗಳಲ್ಲಿ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಕ್ಷೇತ್ರ ಬಲಗೊಂಡು ಜನ ಜೀವನ ಬದಲಾವಣೆಯಲ್ಲಿ ಮಹತ್ತರ ಪಾತ್ರ ನಿರ್ವಹಿಸಲಿದೆ. ಸರ್ಕಾರದ ಹೊಸ ಶಿಕ್ಷಣ ನೀತಿ ವಿದ್ಯಾರ್ಥಿಗಳ ಬುದ್ಧಿಶಕ್ತಿ ವಿಕಸನಕ್ಕೆ ದಾರಿಮಾಡಿಕೊಟ್ಟಿದೆ. ಹೀಗಾಗಿ ತಂತ್ರಜ್ಞಾನದ ಲಾಭ ಪ್ರತಿಯೊಬ್ಬರಿಗೂ ತಲುಪುವಂತೆ ನೋಡಿಕೊಳ್ಳುವುದು ಸಮಾಜದ ಜವಾಬ್ದಾರಿ ಎಂದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಡಾ.ಎಂ.ಆರ್.ಹುಲಿನಾಯ್ಕರ್‌ರವರು ಮಾತನಾಡುತ್ತಾ ಮುಂಬರುವ ದಿನಗಳಲ್ಲಿ ಮನೆಯಿಂದಲೇ ಕೆಲಸ ಮಾಡುವ ಅವಕಾಶಗಳು ಹೆಚ್ಚಾಗಲಿರುವುದರಿಂದ ಯುವಕರು ಬೇಡಿಕೆಗೆ ತಕ್ಕಂತೆ ಕೌಶಲ್ಯ ರೂಢಿಸಿಕೊಳ್ಳಬೇಕು. ಪ್ರತಿವರ್ಷ ದೇಶದಲ್ಲಿ ಸುಮಾರು 15 ಲಕ್ಷಕ್ಕೂ ಹೆಚ್ಚು ಇಂಜಿನಿಯರುಗಳು ಪದವಿ ಮುಗಿಸಿ ಹೊರಬರುತ್ತಿದ್ದರೂ ಇವರ ಪೈಕಿ ಬಹಳಷ್ಟು ಜನರಿಗೆ ಉದ್ಯೋಗ ದೊರೆಯದೇ ಇರುವುದಕ್ಕೆ ಕೌಶಲ್ಯದ ಕೊರತೆಯೇ ಕಾರಣ ಎಂಬುದನ್ನು ಮನಗಾಣಬೇಕು. ಯುವ ಸಮೂಹ ದೇಶದ ದೊಡ್ಡ ಆಸ್ತಿ, ಎಂಜಿನಿಯರಿಂಗ್ ವೃತ್ತಿಪರರು ಸಮಾಜದ ಸಮಸ್ಯೆಗಳಿಗೆ ಪರಿಹಾರದ ಭಾಗವಾಗಬೇಕು. ದೇಶ ವಿದೇಶಗಳಲ್ಲಿ ಉದ್ಯೋಗದ ಅವಕಾಶಗಳು ಹೆಚ್ಚಾಗುತ್ತಿವೆ. ಅದಕ್ಕೆ ತಕ್ಕಂತೆ ವಿದ್ಯಾರ್ಥಿಗಳು ಪರಿಣಿತಿ ಹೊಂದಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತುಮಕೂರು ವಿಶ್ವವಿದ್ಯಾನಿಲಯದ ಕುಲಪತಿರವರು ಡಾ.ವೆಂಕಟೇಶ್ವರಲು ಮಾತನಾಡುತ್ತಾ ಜಗತ್ತು ಭಾರತದ ಕಡೆ ನೋಡುತ್ತಿದೆ, ಮುಂದಿನ 20-25 ವರ್ಷಗಳಲ್ಲಿ ದೇಶದ ಜನಸಂಖ್ಯೆಯಲ್ಲಿ ಶೇ.50% ಕ್ಕೂ ಹೆಚ್ಚು ಭಾಗ ಯುವಕರೇ ಇರುವುದರಿಂದ ಯುವ ಸಂಪನ್ಮೂಲ ದೇಶಕ್ಕೆ ದೊಡ್ಡ ಆರ್ಥಿಕ ಶಕ್ತಿಯಾಗಲಿದೆ ಎಂದು ಅಭಿಪ್ರಾಯಪಟ್ಟರು. ಹ್ಯಾಕಥಾನ್‌ನಲ್ಲಿ 181 ತಂಡಗಳು ಭಾಗವಹಿಸುತ್ತಿದ್ದು 79 ವೈದ್ಯಕೀಯ ಕ್ಷೇತ್ರದಲ್ಲಿ 37 ಪರಿಸರ ಕ್ಷೇತ್ರದಲ್ಲಿ ಹಾಗೂ 65 ತಂಡಗಳು ಕೃಷಿ ಕ್ಷೇತ್ರದಲ್ಲಿ ಅವಿಷ್ಕಾರ ಪ್ರದರ್ಶನ ಮಾಡಲಿವೆ. ವಿದ್ಯಾರ್ಥಿಗಳ ಪ್ರತಿಭಾನ್ವೇಷಣೆಗೆ ದೊಡ್ಡ ವೇದಿಕೆಯಾಗಿದೆ. ಈ ಹ್ಯಾಕಥಾನ್ ನಲ್ಲಿ ತೆಲಂಗಾಣ, ಆಂಧ್ರಪ್ರದೇಶ ತಮಿಳುನಾಡು ಹಾಗೂ ಕರ್ನಾಟಕ ಸೇರಿದಂತೆ 800 ಕ್ಕೂ ವಿದ್ಯಾರ್ಥಿಗಳು ಪ್ರತಿಷ್ಠಿತ ಕೈಗಾರಿಕಾ ಕಂಪನಿಗಳ ಪ್ರತಿನಿಧಿಗಳ ಮುಂದೆ ತಮ್ಮ ಪ್ರತಿಭೆ ಅನಾವರಣ ಮಾಡಲಿದ್ದಾರೆ.

ಸಮಾರಂಭದಲ್ಲಿ ಟೆಟ್ರಿಸ್ ಇನೋವೇಷನ್ ಮತ್ತು ಅಡ್ವಾನ್ಸ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಜಿತೇಶ್ ಬಜಾಜ್, ತುಮಕೂರಿನ ಮುಖ್ಯ ತಾಂತ್ರಿಕ ಅಧಿಕಾರಿ ರಾಜೇಂದ್ರ ಸಾರಂಗಿ, ಶ್ರೀದೇವಿ ವೈದ್ಯಕೀಯ ನಿರ್ದೇಶಕ ಡಾ.ರಮಣ್ ಎಂ ಹುಲಿನಾಯ್ಕರ್, ಶ್ರೀದೇವಿ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕ ಎಂ.ಎಸ್ .ಪಾಟೀಲ್, ಶ್ರೀದೇವಿ ಆಸ್ಪತ್ರೆಯ ನೇತ್ರತಜ್ಞೆ ಡಾ.ಲಾವಣ್ಯ, ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿಯಾದ ಅಂಬಿಕಾ ಎಂ ಹುಲಿನಾಯ್ಕರ್, ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾದ ಡಾ.ನರೇಂದ್ರವಿಶ್ವನಾಥ್, ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯದ ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಅಂಡ್ ಡೇಟಾ ಸೈನ್ಸ್ ವಿಭಾಗದ ಮುಖ್ಯಸ್ಥ ಡಾ.ಎಲ್.ಗಿರೀಶ್, ಡೀನ್ ಅಕಾಟಮಿಕ್ಸ್ ಡಾ.ಎನ್.ಚಂದ್ರಶೇಖರ್ ಹಾಗೂ ಬೋಧಕ- ಬೋಧಕೇತರ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

# ಮತಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ

## ಕರಡು ಮತದಾರರ ಪಟ್ಟಿ ಪ್ರಕಟ – ಹೆಚ್ಚುವರಿ ಡಿಸಿ ಗೀತಾ ಹುಡೇದ

**ಚಾಮರಾಜನಗರ:** ಜನವರಿ 01. 2025ಕ್ಕೆ ಅರ್ಹತಾ ದಿನಾಂಕ ನಿಗಧಿಪಡಿಸಿ, ಭಾವಚಿತ್ರವಿರುವ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ನಡೆಸಲಾಗುತ್ತಿದ್ದು, ಈ ಸಂಬಂಧ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಪ್ರಚುರಪಡಿಸುವ ಸಂಬಂಧ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಜನವರಿ 01. 2025ಕ್ಕೆ ಅರ್ಹತಾ ದಿನಾಂಕ ನಿಗಧಿಪಡಿಸಿ, ಭಾವಚಿತ್ರವಿರುವ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂಬಂಧ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ಜಿಲ್ಲಾಧಿಕಾರಿಗಳ ಕಚೇರಿ, ಉಪವಿಭಾಗಾಧಿಕಾರಿಗಳ ಕಚೇರಿ, ಆಯಾ ತಾಲೂಕು ಕಚೇರಿ ಹಾಗೂ ಜಿಲ್ಲೆಯ 983 ಮತಗಟ್ಟೆಗಳಲ್ಲಿ ಪ್ರಕಟಿಸಲಾಗಿದೆ ಎಂದರು.

ಕರಡು ಮತದಾರರ ಪಟ್ಟಿ ಸಂಬಂಧ ಹಕ್ಕು ಮತ್ತು ಆಕ್ಷೇಪಣೆಗಳನ್ನು 2024ರ ನವೆಂಬರ್ 28ರವರೆಗೆ ದಿನಾಂಕ ಆಯಾ ತಾಲ್ಲೂಕಿನ ಮತಗಟ್ಟೆಗಳಲ್ಲಿ ಬಿ.ಎಲ್.ಓ. ಮೂಲಕ ಹಾಗೂ ಆಯಾ ತಾಲ್ಲೂಕು ಕಛೇರಿಯಲ್ಲಿ ಸ್ವೀಕರಿಸಲಾಗುತ್ತದೆ. ಡಿಸೆಂಬರ್ 24ರೊಳಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿ ಅಂತಿಮ ಮತದಾರರ ಪಟ್ಟಿಯನ್ನು 2025ರ ಜನವರಿ 6ರಂದು ಪ್ರಕಟಿಸಲಾಗುವುದು. ಅಲ್ಲದೇ ಸಾರ್ವಜನಿಕರಲ್ಲಿ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಬಗ್ಗೆ ಅರಿವು ಮೂಡಿಸಲು ವಿಶೇಷ ಅಭಿಯಾನವನ್ನು ನವೆಂಬರ್ 9, 10, 23 ಮತ್ತು 24ರಂದು ಹಮ್ಮಿಕೊಳ್ಳಲಾಗುವುದು ಎಂದು ಹೆಚ್ಚುವರಿ ಜಿಲ್ಲಾಧಿಕಾರಿಯವರು ತಿಳಿಸಿದರು.

ಹನೂರು ವಿಧಾನಸಭಾ ಕ್ಷೇತ್ರದ 254 ಮತಗಟ್ಟೆಗಳ ವ್ಯಾಪ್ತಿಯಲ್ಲಿ 112613 ಪುರುಷರು, 112038 ಮಹಿಳೆಯರು, ಇತರೆ 9 ಸೇರಿದಂತೆ ಒಟ್ಟು 224660 ಮತದಾರರಿದ್ದಾರೆ. ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ 241 ಮತಗಟ್ಟೆ ವ್ಯಾಪ್ತಿಯಲ್ಲಿ 107933 ಪುರುಷರು, 112225 ಮಹಿಳೆಯರು, ಇತರೆ 19 ಸೇರಿದಂತೆ ಒಟ್ಟು 220177 ಮತದಾರರು ಇದ್ದಾರೆ. ಚಾಮರಾಜನಗರ ವಿಧಾನಸಭಾ ಕ್ಷೇತ್ರದ 239 ಮತಗಟ್ಟೆ ವ್ಯಾಪ್ತಿಯಲ್ಲಿ 105555 ಪುರುಷರು, 111431 ಮಹಿಳೆಯರು, ಇತರೆ 15 ಸೇರಿದಂತೆ ಒಟ್ಟು 217001 ಮತದಾರರು ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ 249 ಮತಗಟ್ಟೆ ವ್ಯಾಪ್ತಿಯಲ್ಲಿ 105994 ಪುರುಷರು, 111049 ಮಹಿಳೆಯರು, ಇತರೆ 14 ಸೇರಿದಂತೆ ಒಟ್ಟು 217057 ಮತದಾರರು ಇದ್ದಾರೆ. ಒಟ್ಟಾರೆ ಜಿಲ್ಲೆಯ 983 ಮತಗಟ್ಟೆಗಳ ವ್ಯಾಪ್ತಿಯಲ್ಲಿ 432095 ಪುರುಷರು, 446743 ಮಹಿಳೆಯರು, ಇತರೆ 57 ಸೇರಿದಂತೆ ಒಟ್ಟು 878895 ಮತದಾರರಿದ್ದಾರೆ ಎಂದರು.

ಅದೇ ರೀತಿ ಹನೂರು ವಿಧಾನಸಭಾ ಕ್ಷೇತ್ರದಲ್ಲಿ 73 ಪುರುಷರು, 0 ಮಹಿಳೆಯರು, ಸೇರಿದಂತೆ ಒಟ್ಟು 73, ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದಲ್ಲಿ 43 ಪುರುಷರು, 1 ಮಹಿಳೆ ಸೇರಿದಂತೆ ಒಟ್ಟು 44, ಚಾಮರಾಜನಗರ ವಿಧಾನಸಭಾ ಕ್ಷೇತ್ರದಲ್ಲಿ 26 ಪುರುಷರು, 0 ಮಹಿಳೆ ಸೇರಿದಂತೆ ಒಟ್ಟು 26 ಹಾಗೂ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದಲ್ಲಿ 52 ಪುರುಷರು, 1 ಮಹಿಳೆ ಸೇರಿದಂತೆ ಒಟ್ಟು 53 ಸೇವಾ ಮತದಾರರಿದ್ದು, ಜಿಲ್ಲೆಯಲ್ಲಿ ಒಟ್ಟಾರೆ 194 ಪುರುಷರು ಹಾಗೂ ಇಬ್ಬರು ಮಹಿಳೆಯರು ಸೇರಿದಂತೆ ಒಟ್ಟು 196 ಸೇವಾ ಮತದಾರರಿದ್ದಾರೆ ಎಂದು ತಿಳಿಸಿದರು.

ಭಾರತ ಚುನಾವಣಾ ಆಯೋಗವು ಹಿಂದಿನ ಸಾಲುಗಳಲ್ಲಿ 1ನೇ ಜನವರಿಯನ್ನು ಅರ್ಹತಾ ದಿನಾಂಕವೆಂದು ಪರಿಗಣಿಸಿ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯ ಕೈಗೊಳ್ಳುತ್ತಿತ್ತು. ಪ್ರಸ್ತುತ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಲು ತ್ರೈಮಾಸಿಕವಾಗಿ ಅಂದರೆ ವರ್ಷಕ್ಕೆ 04 ಅವಕಾಶಗಳನ್ನು ನೀಡಿ ಅರ್ಹತಾ ದಿನಾಂಕವೆಂದು ಪರಿಗಣಿಸಲಾಗಿದೆ. ಜನವರಿ 1, ಏಪ್ರಿಲ್ 1, ಜುಲೈ 1 ಹಾಗೂ ಅಕ್ಟೋಬರ್ 1 ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ಅರ್ಹತಾ ದಿನಾಂಕವಾಗಿದೆ. ಈ ಯಾವುದೇ ದಿನಾಂಕದಂದು ಅಥವಾ ಅದಕ್ಕೂ ಮೊದಲು 18 ವರ್ಷ ಪೂರೈಸಿದ್ದರೆ ಹಾಗೂ 17 ವರ್ಷ ತುಂಬಿರುವ ಯುವ ಮತದಾರರನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಸಂಬಂದಪಟ್ಟ ಬಿ.ಎಲ್.ಒ.ಗಳ ಮೂಲಕ ಅರ್ಜಿ ಅಥವಾ ಗಿಊಂ ಆಪ್ ಮೂಲಕ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಹೇಳಿದರು.

ಕರಡು ಮತದಾರರ ಪಟ್ಟಿ ಸಂಬಂಧ 2024ರ ನವೆಂಬರ್ 28ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸುವ ಅವಧಿಯಲ್ಲಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ಬಿಡತಕ್ಕವು, ತಿದ್ದುಪಡಿ ಮತ್ತು ಸ್ಥಳಾಂತರ ಇವುಗಳಿಗೆ ಸಂಬಂಧಿಸಿದಂತೆ, ಸಾರ್ವಜನಿಕರು ಸಂಬಂಧಿಸಿದ ಮತಗಟ್ಟೆ ಮಟ್ಟದ ಅಧಿಕಾರಿಗಳ ಮುಖಾಂತರ ಅಥವಾ ಸಂಬಂಧಿಸಿದ ಉಪ ವಿಭಾಗಾಧಿಕಾರಿಗಳ ಕಛೇರಿ, ತಹಶೀಲ್ದಾರ್ ಕಛೇರಿಗಳಲ್ಲಿ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿರುತ್ತದೆ. ಮತದಾರರ ಪಟ್ಟಿಗೆ ಹೆಸರು ಸೇರ್ಪಡೆಗೊಳಿಸಲು ವಿಶೇಷ ಆಂದೋಲನ ನಡೆಸುವ ದಿನಗಳಂದು ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಮತಗಟ್ಟೆಗಳಲ್ಲಿ ಬೆಳಿಗ್ಗೆ 9 ರಿಂದ ಸಂಜೆ 5 ಗಂಟೆಯವರೆಗೆ ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಜರಿದ್ದು, ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ, ಬಿಡತಕ್ಕವು, ತಿದ್ದುಪಡಿ ಮತ್ತು ಸ್ಥಳಾಂತರ ಇವುಗಳಿಗೆ ಸಂಬಂಧಿಸಿದಂತೆ ಆಯಾ ಮತಗಟ್ಟೆಗಳಲ್ಲಿ ಸಾರ್ವಜನಿಕರು ಅರ್ಜಿ ಸಲ್ಲಿಸಬಹುದಾಗಿರುತ್ತದೆ ಎಂದರು.

ಜಿಲ್ಲೆಯಲ್ಲಿ ಸಾಮಾಜಿಕವಾಗಿ ಹಿಂದುಳಿದ ಬುಡಕಟ್ಟು ಜನಾಂಗದವರು, ಕಾಡಂಚಿನ ಗ್ರಾಮಗಳು ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿ ವಾಸವಾಗಿರುವವರು, ಅನಿವಾಸಿ ಭಾರತೀಯರು, ಸೇವಾ ಮತದಾರರು, ವಿಶೇಷಚೇತನರು, ತೃತೀಯ ಲಿಂಗಿಗಳು ಮತ್ತು ಲೈಂಗಿಕ ಕಾರ್ಯಕರ್ತೆಯರುಗಳ ಮಾಹಿತಿ ನೀಡಿ, ಸದರಿಯವರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗದೇ ಇದ್ದಲ್ಲಿ, ಅಂತಹವರ ಮಾಹಿತಿಯನ್ನು ಆಯಾ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಅಥವಾ ತಾಲ್ಲೂಕು ತಹಶೀಲ್ದಾರ್‌ರವರಿಗೆ ನೀಡಿ ಅವರುಗಳ ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲು ರಾಜಕೀಯ ಪಕ್ಷಗಳು ಸಹಕಾರ ನೀಡಬೇಕು. ಅಲ್ಲದೇ ಶೇ. 100 ರಷ್ಟು ದೋಷರಹಿತ ಮತದಾರರ ಪಟ್ಟಿ ತಯಾರಿಸಲು ರಾಜಕೀಯ ಪಕ್ಷಗಳು ಮತದಾರರ ಪಟ್ಟಿ ತಯಾರಿಕೆಗೆ ಸಂಪೂರ್ಣ ಸಹಕಾರ ನೀಡಿ, ಭಾರತ ಚುನಾವಣಾ ಆಯೋಗದ ಮಹತ್ತರವಾದ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯವನ್ನು ಯಶಸ್ವಿಗೊಳಿಸುವಂತೆ ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು. ಇದೇ ವೇಳೆ ಭಾವಚಿತ್ರವಿರುವ ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಸಂಬಂಧ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಕರಡು ಮತದಾರರ ಪಟ್ಟಿಯನ್ನು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಹೆಚ್ಚುವರಿ ಜಿಲ್ಲಾಧಿಕಾರಿಯವರು ವಿತರಿಸಿದರು. ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಎ.ಎಚ್. ನಸ್ರುಲ್ಲಾ ಖಾನ್, ಎನ್. ನಾಗಯ್ಯ, ಇತರರು ಸಭೆಯಲ್ಲಿ ಉಪಸ್ಥಿತರಿದ್ದರು.

# ಜಾಗತಿಕ ಶಾಂತಿಗೆ ಅಹಿಂಸಾ ತತ್ವ ಅನುಸರಿಸಬೇಕು

**ಬೆಂಗಳೂರು:** ಜಾಗತಿಕ ಶಾಂತಿಗೆ ಮಹಾತ್ಮ ಗಾಂಧೀಜಿ ಅವರ ಅಹಿಂಸಾ ತತ್ವವನ್ನು ಅನುಸರಿಸಬೇಕು ಎಂದು ನಿವೃತ್ತ ಐ.ಎ.ಎಸ್. ಅಧಿಕಾರಿ ಡಾ.ಬಿ.ಆರ್.ಮಮತ ತಿಳಿಸಿದರು.

ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಬೆಂಗಳೂರು, ರಾಷ್ಟ್ರೀಯ ಸೇವಾ ಯೋಜನೆ, ಯುವ ಸಬಲೀಕರಣ ಮತ್ತು ಕ್ರೀಡೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಟಿ.ದಾಸರಹಳ್ಳಿ, ರಾಷ್ಟ್ರೀಯ ಸೇವಾ ಯೋಜನೆ ಘಟಕ, ಗಾಂಧಿ ಅಧ್ಯಯನ ಕೇಂದ್ರ, ಮತ್ತು ದೈಹಿಕ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ಗಾಂಧಿ ಸ್ಮಾರಕ ನಿಧಿ, ಗಾಂಧಿ ಭವನದಲ್ಲಿ ಹಮ್ಮಿಕೊಂಡಿದ್ದ ''ಸತ್ಯ ಅಹಿಂಸೆ : ಜಾಗತಿಕ ಶಾಂತಿಗೆ ಗಾಂಧಿಯ ಹಾದಿ'' ಕುರಿತ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಗಿಡಕ್ಕೆ ನೀರುಣಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಸತ್ಯವನ್ನು ಪಡೆಯಬೇಕಾದರೆ ಅಹಿಂಸಾ ಮಾರ್ಗವನ್ನು ಅನುಸರಿಸಬೇಕು. ಗಾಂಧಿಯವರ ತತ್ವದಂತೆ ಸತ್ಯವನ್ನು ಪಡೆಯಲು ಯಾರನ್ನೂ ದ್ವೇಷಿಸುವ ಅವಶ್ಯಕತೆ ಇಲ್ಲ. ಸತ್ಯಾಗ್ರಹದ ಮೂಲಕ ಸತ್ಯಕ್ಕೆ ಆಗ್ರಹ. ಉಪವಾಸ ಕೂರುವುದು ಸತ್ಯಾಗ್ರಹ ಅಲ್ಲ ಎಂದರು.

ಸತ್ಯ ಮತ್ತು ಅಹಿಂಸೆ ನಾಣ್ಯದ ಎರಡು ಮುಖಗಳಿದ್ದಂತೆ, ಒಂದನ್ನು ಹುಡುಕಿಕೊಂಡು ಹೋದರೆ ಇನ್ನೊಂದು ಸಿಗುತ್ತದೆ. ಮಹಾತ್ಮ ಗಾಂಧಿ ಅವರ ಪ್ರಕಾರ ಸತ್ಯವು ಅಂತಿಮ ಪ್ರಪಂಚವಾಗಿತ್ತು. ಅವರು ಹೇಳಿದಂತೆ ಒಂದು ಕೆನ್ನೆಗೆ ಹೊಡೆದರೆ ಇನ್ನೊಂದು ಕೆನ್ನೆ ತೋರಿಸು ಅಹಿಂಸೆ ಅಂದರೆ ಮಹಾತ್ಮರು ಹೇಳಿದ ಸತ್ಯ ವಿಶೇಷವಾದದ್ದು, ಪ್ರತಿಯೊಬ್ಬರು ಯೋಚಿಸಬೇಕು. ಮಹಾತ್ಮ ಗಾಂಧೀಜಿಯವರ ಚಿಂತನೆಯ ಕ್ರಿಯೆಯು ಭಾಷಣದ ಪ್ರತಿ ಆಲೋಚನೆಯು ಸಮನ್ವಯವಾಗಿರಬೇಕು ಮತ್ತು ಸತ್ಯದೊಂದಿಗೆ ಇರಬೇಕು. ಸತ್ಯವು ಅವರಿಗೆ ದೇವರಾಗಿತ್ತು. ಸತ್ಯವನ್ನು ಪಡೆಯಬೇಕೆಂದರೆ ಅದು ಅಹಿಂಸೆಯ ಮಾರ್ಗವಾಗಬೇಕು. ಯುವಜನತೆ ಮಹಾತ್ಮ ಗಾಂಧೀಜಿಯವರ ತತ್ವವನ್ನು ಅಳವಡಿಸಿಕೊಳ್ಳಬೇಕೆಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಜ್ಞಾನ ಸ್ಮಾರಕ ನಿಧಿ ಅಧ್ಯಕ್ಷರಾದ ನಾಡೋಜ ಡಾ.ವೂಡೆ ಪಿ.ಕೃಷ್ಣ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ನಿರ್ದೇಶಕರಾದ ಪ್ರೊ.ಜಿ.ಬಿ.ಶಿವರಾಜು, ದಾಸರಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಚಾರ್ಯರಾದ ಶ್ರೀಮತಿ ಜಿ.ಅಮೃತಾಕ್ಷಿ, ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕರ್ನಾಟಕ ರಾಜ್ಯೋತ್ಸವ

**ಬೆಂಗಳೂರು:** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವತಿಯಿಂದ ನವೆಂಬರ್ 01 ರಂದು ಬೆಳಿಗ್ಗೆ 9 ಗಂಟೆಗೆ ಶ್ರೀ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ''2024-24ನೇ ಸಾಲಿನ ರಾಜ್ಯ ಮಟ್ಟದ 69ನೇ ಕರ್ನಾಟಕ ರಾಜ್ಯೋತ್ಸವ'' ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಸನ್ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಾರಂಭದ ಧ್ವಜಾರೋಹಣವನ್ನು ನೆರವೇರಿಸಿ ನಂತರ ನಾಡಿನ ಜನತೆಗೆ ರಾಜ್ಯೋತ್ಸವ ಸಂದೇಶವನ್ನು ನೀಡಲಿರುವರು. ಸಮಾರಂಭದಲ್ಲಿ ಮಾನ್ಯ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವರಾದ ನಿರ್ಮಲಾ ಸೀತಾರಾಮನ್ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದು, ಮಾನ್ಯ ಕೇಂದ್ರ ಅತಿಸಣ್ಣ, ಸಣ್ಣ ಹಾಗೂ ಮಧ್ಯಮ ಕೈಗಾರಿಕೆ ಮತ್ತು ಕಾರ್ಮಿಕ ಹಾಗೂ ಉದ್ಯೋಗ ರಾಜ್ಯ ಸಚಿವರಾದ ಕು. ಶೋಭಾ ಕರಂದ್ಲಾಜೆ, ಮಾನ್ಯ ಉಪ ಮುಖ್ಯಮಂತ್ರ ಡಿ.ಕೆ. ಶಿವಕುಮಾರ್ ಅವರು ಘನ ಉಪಸ್ಥಿತರಿರುವರು. ಗೌರವಾನ್ವಿತ ಅತಿಥಿಗಳಾಗಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ ಹಾಗೂ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ಯು.ಟಿ. ಖಾದರ್ ಭಾಗವಹಿಸಲಿದ್ದು, ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಚಿವರಾದ ಎಸ್. ಮಧು ಬಂಗಾರಪ್ಪ ಅವರು ಪ್ರಾಸ್ತಾವಿಕ ನುಡಿಗಳನ್ನಾಡಲಿರುವರು. ಸಮಾಂಭದ ಅಧ್ಯಕ್ಷತೆಯನ್ನು ಶಿವಾಜಿನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ರಿಜ್ವಾನ್ ಅರ್ಷದ್ ಅವರು ವಹಿಸಲಿದ್ದು, ಸಚಿವರು, ಶಾಸಕರು ಸೇರಿದಂತೆ ಗಣ್ಯರು ಹಾಗೂ ಅಧಿಕಾರಿಗಳು ಉಪಸ್ಥಿರಿರುವರು. ವಿವಿಧ ಶಾಲೆಗಳಿಂದ ಸುಮಾರು 14000 ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಶಾಲೆಯ ಶಿಕ್ಷಕರ ಸಮ್ಮುಖದೊಂದಿಗೆ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ವಿಶೇಷ 'ಸ್ವಾತಿ' ಪೂಜೆ

**ಮೈಸೂರು:** ನಗರದ ಕಾಳಿದಾಸ ರಸ್ತೆಯಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಯದುಗಿರಿ ಯತಿರಾಜ ಮಠ, ಮೈಸೂರು ಶಾಖೆಯ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ದೇವಸ್ಥಾನದಲ್ಲಿ ನ.1ರಂದು ಶುಕ್ರವಾರ 'ಸ್ವಾತಿ' ನಕ್ಷತ್ರದ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿದೆ. ಅಂದು ಬೆಳಿಗ್ಗೆ 8ಕ್ಕೆ ಸಂಕಲ್ಪ, 9ಕ್ಕೆ ಅಭಿಷೇಕ, 10.30ಕ್ಕೆ ಅಲಂಕಾರ, 11.30ಕ್ಕೆ ಮಹಾಮಂಗಳಾರತಿ, ಮಧ್ಯಾಹ್ನ 12.30ಕ್ಕೆ ಶಾತ್ತುಮೊರೈ, 1 ಗಂಟೆಗೆ ತೀರ್ಥ ಪ್ರಸಾದ ವಿನಿಯೋಗವನ್ನು ಏರ್ಪಡಿಸಲಾಗಿದೆ. ಸಂಜೆ 7.30ಕ್ಕೆ ಪ್ರಾಕಾರೋತ್ಸವ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಮುಖ್ಯಸ್ಥ ವಿದ್ವಾನ್ ಕೆ.ಆರ್.ಯೋಗಾನರಸಿಂಹನ್ (ಮುರುಳಿ ಅಯ್ಯಂಗಾರ್) ತಿಳಿಸಿದ್ದಾರೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಕೋರಿದ್ದಾರೆ. ಮಾಹಿತಿಗೆ ಮೊಬೈಲ್ 9342188323, 7598832271 ಸಂಪರ್ಕಿಸಬಹುದು.

## ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಪುಸ್ತಕಗಳು ಶೇ 50% ರಿಯಾಯಿತಿ ದರದಲ್ಲಿ ಮಾರಾಟ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನವೆಂಬರ್ 1 ರಿಂದ 30 ರವರೆಗೆ ಶೇಕಡ 50% ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಮಾಡಲಾಗುತ್ತದೆ. ಪುಸ್ತಕಗಳು ಆನ್‌ಲೈನ್ ಮೂಲಕವೂ ಶೇ. 50% ರಿಯಾಯಿತಿ ದರದಲ್ಲಿ ಖರೀದಿಸಬಹುದಾಗಿದ್ದು, ಓದುಗರು www. kuvempubhashabharathi.karnataka.gov.in ಇದರ ಸದುಪಯೋಗಪಡೆದುಕೊಳ್ಳುವಂತೆ ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಾರ್ಶ್ವವಾಯು ದಿನಾಚರಣೆ

**ಕೋಲಾರ:** ಪಾರ್ಶ್ವವಾಯು ಪ್ರಪಂಚದಾದ್ಯಂತ ವ್ಯಾಪಕವಾದ ಕಾಯಿಲೆಯಾಗಿದೆ ಮತ್ತು ಮುಂದುವರಿಯುತ್ತಿದೆ ಇದನ್ನು ತಡೆಗಟ್ಟಲು ಎಲ್ಲರು ಕ್ರಮವಹಿಸಬೇಕು ಎಂದು ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ ಡಾ. ಎನ್.ಸಿ. ನಾರಾಯಣಸ್ವಾಮಿ ಅವರು ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಮಾನಸಿಕ ಆರೋಗ್ಯ ಘಟಕ, ಕರ್ನಾಟಕ ಬ್ರೈನ್ ಹೆಲ್ತ್ ಕಾರ್ಯಕ್ರಮ ಇವರ ಸಂಯುಕ್ತಾಶ್ರಯದಲ್ಲಿ ಎಸ್.ಎನ್.ಆರ್ ಜಿಲ್ಲಾ ಆಸ್ಪತ್ರೆಯಲ್ಲಿ ಅವರು ಮಾತನಾಡುತ್ತಾ ಪಾರ್ಶ್ವವಾಯು ಮೆದುಳಿನ ಜೀವಕೋಶಗಳಿಗೆ ಹಾನಿ ಉಂಟಾದಾಗ ಉದ್ಭವಿಸುವ ದೈಹಿಕ ತೊಂದರೆಯಾಗಿದೆ. ಈ ಲಕ್ಷಣಗಳು ಮೆದುಳಿನ ಹಾನಿಯಾದ ಭಾಗ ಮತ್ತು ಪ್ರಮಾಣದ ಮೇಲೆ ಅವಲಂಬಿತವಾಗಿರುವರಿಂದ ಎಲ್ಲಾ ಪೀಡಿತರಲ್ಲಿ ಒಂದೇ ಬಗೆಯ ಲಕ್ಷಣಗಳು ಕಂಡುಬರುತ್ತದೆ. ಅನಿಯಂತ್ರಿತವಾದ ರಕ್ತದೊತ್ತಡ ಮತ್ತು ಸಕ್ಕರೆ ಖಾಯಿಲೆಗಳು ಪಾರ್ಶ್ವವಾಯು ಉಂಟಾಗಲು ಪ್ರಮುಖಕಾರಣ ತಲೆಗೆ ಬಿದ್ದ ಪೆಟ್ಟಿನಿಂದಲೂ ಇದು ಬರುವ ಸಾಧ್ಯತೆ ಇರುತ್ತದೆ ಪಾರ್ಶ್ವವಾಯುವಿನ ಲಕ್ಷಣಗಳು ಶುರುವಾದ ಸಮಯದಿಂದ 4 ರಿಂದ 6 ಗಂಟೆಯ ಸಮಯದೊಳಗೆ ಪೀಡಿತರಿಗೆ ಸೂಕ್ತ ಚಿಕಿತ್ಸೆ ಸಿಕ್ಕಲ್ಲಿ ಸಂಪೂರ್ಣ ಗುಣ ಹೊಂದುವ ಸಾಧ್ಯತೆ ಇದೆ ಆದ್ದರಿಂದ ಪಾರ್ಶ್ವವಾಯು ಪೀಡಿತರನ್ನು ಆದ?ಟ್ಟು ಬೇಗ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಎಂದರು. ಒಟ್ಟು ನಮ್ಮ ಕೋಲಾರ ಜಿಲ್ಲೆಯಲ್ಲಿ 480 ಪಾರ್ಶ್ವವಾಯು ಹೊಂದಿರುವ ಪ್ರಕರಣಗಳನ್ನು ದಾಖಲಿಸಲಾಗಿದೆ. ಇದೇ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಮಮತಾ ಅವರು ಮಾತನಾಡಿ ಪ್ರತಿದಿನ ವ್ಯಾಯಾಮ ಮಾಡಿ ಹೊರಗಿನ ಊಟವನ್ನು ತ್ಯಜಿಸಿ ಮನೆಯ ಊಟವನ್ನು ಸೇವಿಸಿ ತುಂಬಾ ಒತ್ತಡವನ್ನು ತೆಗೆದುಕೊಳ್ಳಬೇಡಿ ಸರಿಯಾಗಿ ನಿದ್ದೆ ಮಾಡಿ ಇವುಗಳನ್ನು ಪ್ರತಿನಿತ್ಯ ಮಾಡುವುದರಿಂದ ಯಾವುದೇ ರೀತಿಯಲ್ಲಿ ಆರೋಗ್ಯ ತೊಂದರೆಗಳು ಉಂಟಾಗುವುದಿಲ್ಲ ಎಂದರು. ಕಾರ್ಯಕ್ರಮದಲ್ಲಿ ವೈದ್ಯಧಿಕಾರಿಗಳಾದ ಡಾ. ಶಿಲ್ಪಶ್ರೀ, ಮೌನಿಕಾ ಹಾಗೂ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಮತಿತ್ತರರು ಉಪಸ್ಥಿತರಿದ್ದರು.

# ಅಪ್ಪು ಮಾನವೀಯ ಮೌಲ್ಯಗಳ ಮಹಾನ್ ರತ್ನ




**ಚಾಮರಾಜನಗರ:** ಪುನೀತ್ ರಾಜಕುಮಾರ್ ಮಾನವೀಯ ಮೌಲ್ಯಗಳ ಮಹಾನ್ ರತ್ನ. ನಗುಮುಖದ ದೇವ ಮಾನವ. ವಿಶ್ವಕ್ಕೆ ಆದರ್ಶವಾದ ಜೀವನ ನಡೆಸಿ, ಮಾನವ ಹೇಗೆ ಬದುಕಬೇಕು ಎಂಬುದನ್ನು ಚಿಕ್ಕವಯಸ್ಸಿನಲ್ಲಿ ತೋರಿಸಿದ ಶ್ರೇಷ್ಠ ವ್ಯಕ್ತಿ ಎಂದು ಸಂಸ್ಕೃತಿ ಚಿಂತಕ ರಾಷ್ಟ್ರ ಯುವ ಪ್ರಶಸ್ತಿ ಪುರಸ್ಕೃತ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಋಗ್ವೇದಿ ಯೂತ್ ಕ್ಲಬ್,ಜೈ ಹಿಂದ್ ಪ್ರತಿಷ್ಠಾನ ವತಿಯಿಂದ ಜೈ ಹಿಂದ್ ಕಟ್ಟೆಯಲ್ಲಿ ನಡೆದ ಪುನೀತ್ ರಾಜಕುಮಾರ್ ಸ್ಮರಣೆ ಹಾಗೂ ಅಪ್ಪು ಮತ್ತು ಮಾನವೀಯ ಮೌಲ್ಯಗಳ ಕುರಿತು ಮಾತನಾಡುತ್ತಾ ಮಾನವನ ಹುಟ್ಟು ಆಕಸ್ಮಿಕವಾದದ್ದು. ಮಾನವನ ಜನ್ಮದಲ್ಲಿ ಪ್ರತಿಕ್ಷಣವೂ ಸಮಾಜಕ್ಕೆ ಮಾನವ ಕಲ್ಯಾಣಕೆ ಅರ್ಪಿಸಿದ ಮಹಾನ್ ವ್ಯಕ್ತಿ ಪುನೀತ್ ರಾಜಕುಮಾರ್. ಪುನೀತ್ ರವರ ಕಾರ್ಯಯೋಜನೆಗಳು ,ದೂರ ದೃಷ್ಟಿ, ಸಮಾಜ ಸೇವೆ ,ದಾನ ,ಧರ್ಮ ನಮ್ಮ ಸಂಸ್ಕೃತಿ ಪರಂಪರೆಯ ರೂಪವಾಗಿದೆ. ಮರಣದ ನಂತರವೂ ಕೋಟಿ ಕೋಟಿ ಜನರ ಹೃದಯದಲ್ಲಿ ಸದಾಕಾಲ ಅಮರತ್ವ ಸ್ಥಾನ ಪಡೆದು ಸದಾ ಜೀವಂತಿಕೆಯ ರೂಪದಲ್ಲಿ ಬದುಕುತ್ತಿರುವ ಕೆಲವೇ ಕೆಲವು ವ್ಯಕ್ತಿಗಳಲ್ಲಿ ಅಗ್ರಗಣ್ಯರು. ಪುನೀತ್ ರಾಜಕುಮಾರ್ ಚಾಮರಾಜನಗರ ಮೂಲದವರು ಎಂಬುದು ಮತ್ತೊಂದು ನಮಗೆ ಹೆಮ್ಮೆ. ಅವರ ಚಿತ್ರರಂಗ, ನಟನೆ ಪ್ರಕೃತಿ, ಪ್ರೇಮ, ಹಸನ್ಮುಖಿ ಜೀವಂತಿಕೆ ,ಸಾರ್ವಜನಿಕ ಬದುಕು, ಸಮಾಜ ಸೇವೆ ,ದಾನ ಧರ್ಮಗಳು ಸರ್ವರಿಗೂ ಒಳಿತನ್ನು ಬಯಸಿ ಬದುಕಿ ಬಾಳಿದ ಪುನೀತ್ ರವರ ಜೀವನ ಕೋಟಿ ಕೋಟಿ ಯುವಕರಿಗೆ ಮಾರ್ಗದರ್ಶಕವಾಗಿದೆ. ಅವರ ಅಭಿಮಾನಿಗಳು ನಿರಂತರವಾಗಿ ಸಮಾಜಮುಖಿ ಕಾರ್ಯವನ್ನು ನೆರವೇರಿಸುತ್ತಾ ಸಾಗುತ್ತಿರುವುದು ಕಾಣಬಹುದಾಗಿದೆ. ಮಾನವೀಯ ಮೌಲ್ಯಗಳು ಭಗವಂತನ ರೂಪದಲ್ಲಿ ಕಾಣಿಸಿಕೊಂಡಿದೆ. ಪ್ರೀತಿ ವಿಶ್ವಾಸ ,ಅಭಿಮಾನ, ಸರಳತೆ ಸಹನೆ, ಸಹಕಾರ, ದೃಷ್ಟಿ ,ಚಿಂತನೆ ಸರ್ವವು ನಮಗೆ ದಾರಿದೀಪವಾಗಿದೆ . ಮಾನವೀಯ ಮೌಲ್ಯಗಳ ಹರಿಕಾರರು ಪುನೀತ್ ರಾಜಕುಮಾರ್ ಎಂದರು.

ಪುನೀತ್ ರವರ ಚಿತ್ರಗಳ ಮೂಲಕ ಅಭಿಮಾನ ಹೊಂದಿದ್ದ ನಮಗೆ ಅವರ ಚಿತ್ರಗಳು ಹಾಗೂ ಅವರ ಜೀವನದ ಬಹುದೊಡ್ಡ ಕೊಡುಗೆಗಳ ಬಗ್ಗೆ ತಿಳಿದ ನಂತರ ವಿಸ್ಮಯವಾಗಿದೆ. ಅವರ ಅಂತ್ಯ ಸಂಸ್ಕಾರದಲ್ಲಿ ಕಂಡು ಕೇಳದ , ನೋಡದ ಜನಸಾಗರ ಬಂದದ್ದು ಇತಿಹಾಸ. ಮರಣದ ನಂತರ ಬದುಕಿರುವ ಮಹಾನ್ ಜೀವ ಪುನೀತ್ ಎಂದು ಋಗ್ವೇದಿ ಅಭಿಪ್ರಾಯ ಪಟ್ಟರು.

ಪುನೀತ್ ಅಭಿಮಾನಿ ಲೋಕೇಶ್ ಮಾತನಾಡಿ ಪುನೀತ್ ರಾಜಕುಮಾರ್ ಅವರ ಪುಣ್ಯ ಸ್ಮರಣೀಯ ದಿನ ಅವರ ಮಾನವೀಯ ಮೌಲ್ಯಗಳ ಕುರಿತು ಹೇಳುವುದು ಬಹು ದೊಡ್ಡ ಕಷ್ಟದ ವಿಷಯ. ಯಾರಿಗೂ ತಿಳಿಯದ ಹಾಗೆ ಸಾವಿರಾರು ಸಮಾಜದ ಕಾರ್ಯವನ್ನು ನಿರ್ವಹಿಸಿದ ಪುನೀತ್ ಇಂದು ಕೋಟಿ ಕೋಟಿ ಜನರಿಗೆ ಆದರ್ಶ ಎಂದರು.

ಮುರುಗೇಶ್ ,ಮಾದಪ್ಪ, ಮನು, ರವಿ, ಕುಮಾರ ,ರಂಗ ನಾಯಕ ,ಶ್ರೀನಿವಾಸ್, ಮುಂತಾದವರು ಉಪಸ್ಥಿತರಿದ್ದರು.

# ಅಂಬೇಡ್ಕರ್ ಅವರಿಂದ ದೇಶದ ಅಭಿವೃದ್ಧಿಗೆ ಸುಭದ್ರ

**ಚಾಮರಾಜನಗರ:** ಅಂಬೇಡ್ಕರ್ ಅವರು ಇಡೀ ವಿಶ್ವಕ್ಕೆ ಮಾದರಿಯಾಗುವ ಸಂವಿಧಾನ ರಚನೆ ಮಾಡಿದ್ದು, ಅದರ ಮೂಲಆಶಯಗಳನ್ನು ಪಾಲನೆ ಮಾಡಬೇಕು ಎಂದು ಜಿಪಂ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಹೇಳಿದರು.

ತಾಲ್ಲೂಕಿನ ಭೋಗಾಪುರ ಸರ್ಕಾರಿ ವಸತಿಯುಕ್ತ ಪ್ರಥಮದರ್ಜೆ ಕಾಲೇಜಿನಲ್ಲಿ ಜನಹಿತಾಶಕ್ತಿ ಹೋರಾಟವೇದಿಕೆ, ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಬುಧವಾರ ನಡೆದ' ಸಂವಿಧಾನಅರಿವು ಕಾರ್ಯಕ್ರಮವನ್ನು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಮಾತನಾಡಿದರು.

ಅಂಬೇಡ್ಕರ್ ಅವರು ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ, ದೇಶದ ಅಭಿವೃದ್ಧಿಗೆ ಪೂರಕವಾದ ಸುಭದ್ರ ಸಂವಿಧಾನ ರಚನೆಮಾಡಿ, ದೇಶಕ್ಕೆ ಅರ್ಪಣೆ ಮಾಡಿದ್ದಾರೆ. ಶಾಲಾಕಾಲೇಜಿನ ವಿದ್ಯಾರ್ಥಿಗಳು ವಿದ್ಯಾರ್ಥಿದೆಸೆಯಲ್ಲೇ ಅಂಬೇಡ್ಕರ್ ರಚಿಸಿರುವ ಸಂವಿಧಾನವನ್ನು ಅಧ್ಯಯನ ಮಾಡಬೇಕು, ಸಂವಿಧಾನ ಅಧ್ಯಯನ ಮಾಡುವ ಬಹುಪಾಲು ವಿದ್ಯಾರ್ಥಿಗಳ ಜೀವನ ಸುಗಮವಾಗುತ್ತದೆ.

ವಿದಾರ್ಥಿಗಳು ಆದಷ್ಟು ಮೊಬೈಲ್ ಬಳಕೆಗೆ ಕಡಿವಾಣ ಹಾಕಿ ಓದಿನತ್ತ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ವಿಚಾರಮಂಡನೆ ಮಾಡಿದ ಚಾಮರಾಜನಗರ ಸರ್ಕಾರಿ ಮಹಿಳಾ ಪ್ರಥಮದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಸಿ. ಶೈಲೇಶ್ ಕುಮಾರ್' ಅಂಬೇಡ್ಕರ್ ರಚಿಸಿರುವ ಸಂವಿಧಾನದಲ್ಲಿ ಪ್ರತಿಯೊಬ್ಬರಿಗೂ ಸಮನ್ವಯತೆಯಿಂದ ಬದುಕುವ ಅವಕಾಶ ಕಲ್ಪಿಸಲಾಗಿದೆ, ಸಂವಿಧಾನಜಾತಿ, ಧರ್ಮಮೀರಿದ್ದು, ಇದರಲ್ಲಿ ಅಡಕವಾಗಿರುವ ಎಲ್ಲ ಅಂಶಗಳನ್ನು ಪಾಲನೆ ಮಾಡಬೇಕು, ಮನೆಋಣ, ಭೂಮಿಋಣ ತೀರಿಸಬೇಕಾದ ಹೊಣೆ ಪ್ರತಿಯೊಬ್ಬರ ಮೇಲಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಪಿ.ದೇವರಾಜು ಮಾತನಾಡಿ, ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನದ ಬಗ್ಗೆ ಶಾಲಾಕಾಲೇಜಿನ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವ ಕಾರ್ಯ ಮಾಡುತ್ತಿರುವ ಕಾರ್ಯ ಶ್ಲಾಘನೀಯ, ಅಂಬೇಡ್ಕರ್ ಅವರ ತತ್ವಾದರ್ಶಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.ಜನಹಿತಾಶಕ್ತಿ ಹೋರಾಟವೇದಿಕೆ ಜಿಲ್ಲಾಧ್ಯಕ್ಷ ರಾಮಸಮುದ್ರ ಸುರೇಶ್ ಮಾತನಾಡಿದರು. ಮುಖಂಡ ಇದಾಯತ್ ಷರೀಫ್, ರಾಮಸಮುದ್ರ ಗೋಪಾಲ್, ಉಪನ್ಯಾಸಕರು, ವಿದ್ಯಾರ್ಥಿಗಳು ಹಾಜರಿದ್ದರು.



# ಸಂಜೆ ಟಿಪ್ಸ್

## ವಿ ಮೂವೀಸ್‌ಮತ್ತು ಟಿ.ವಿ. ಆಪ್ ಚಂದಾದಾರಿಕೆ ಯೋಜನೆಗಳಿಗೆ 'ಸನ್ NXT' ಸೇರ್ಪಡೆ

ಪ್ರಮುಖ ಟೆಲಿಕಾಂ ಆಪರೇಟರ್ ವಿ, ಇಂದು ಮುಂಚೂಣಿ ಒಟಿಟಿ ವೇದಿಕೆಯಾದ ಸನ್ NXT' ಜೊತೆ ಹೊಸ ಪಾಲುದಾರಿಕೆಯನ್ನು ಘೋಷಿಸಿದೆ. ಈ ಪಾಲುದಾರಿಕೆಯು ತಮಿಳು, ತೆಲುಗು, ಮಲಯಾಳಂ, ಕನ್ನಡ, ಬಂಗಾಳಿ, ಮರಾಠಿ ಮತ್ತು ಹಿಂದಿ ಏಳು ಭಾಷೆಗಳಲ್ಲಿ ದಕ್ಷಿಣ ಭಾರತದ ಬ್ಲಾಕ್‌ಬಸ್ಟರ್ ಚಲನಚಿತ್ರಗಳು, ವಿಶೇಷ ಸರಣಿಗಳು, ಟಿವಿ ಕಾರ್ಯಕ್ರಮಗಳು, ಲೈವ್ ಟಿವಿ ಮತ್ತು ಹೆಚ್ಚಿನವುಗಳ ಶ್ರೀಮಂತ ಭಂಡಾರವನ್ನು ಗ್ರಾಹಕರಿಗೆ ಒದಗಿಸಲಿದೆ. ಸನ್ NXT' ಪ್ರೀಮಿಯಂ ಕಂಟೆಂಟ್ ಅನ್ನು ಈಗ ವಿ ಮೂವೀಸ್ ಮತ್ತು ಟಿ.ವಿ ಪ್ಲಸ್ ಮತ್ತು ಲೈಟ್ ಪ್ಯಾಕ್ನಲ್ಲಿ ಸೇರ್ಪಡೆ ಮಾಡಲಾಗಿದೆ. ಇದರ ಬೆಲೆ ಕ್ರಮವಾಗಿ ತಿಂಗಳಿಗೆ 248 ಮತ್ತು 154 ರೂ. ಈ ಸೇರ್ಪಡೆಯೊಂದಿಗೆ, ಬಳಕೆದಾರರು ಡಿಸ್ನಿ + ಹಾಟ್‌ಸ್ಟಾರ್, ಸೋನಿಲೈವ್, ಝೀ 5, ಮನೋರಮಾಮ್ಯಾಕ್ಸ್ ಸೇರಿದಂತೆ ಇತರ ಮುಂಚೂಣಿ ಒಟಿಟಿ ವೇದಿಕೆಗಳೊಂದಿಗೆ ಸನ್ NXT' ಅನ್ನು ಸಹ ಪ್ರವೇಶಿಸಬಹುದು. ವಿ ಮೂವೀಸ್ ಮತ್ತು ಟಿ.ವಿ ಪ್ಲಸ್ ಪ್ಯಾಕ್ ಗ್ರಾಹಕರಿಗೆ ಒಟಿಟಿ ಚಂದಾದಾರಿಕೆಗಳಲ್ಲಿ ಗಮನಾರ್ಹವಾಗಿ ಉಳಿತಾಯ ಮಾಡಲು ಇದು ಸಹಾಯ ಮಾಡುತ್ತದೆ. ಜೊತೆಗೆ ಪ್ರತಿ ಒಟಿಟಿ ವೇದಿಕೆಗೆ ವೈಯಕ್ತಿಕ ಚಂದಾದಾರಿಕೆಗಳು ಮತ್ತು ಪಾವತಿಗಳನ್ನು ನಿರ್ವಹಿಸುವ ತೊಂದರೆಯನ್ನು ತಪ್ಪಿಸುತ್ತದೆ. ಎಫ್‌ಐಸಿಸಿಐ-ಇವೈ ನಡೆಸಿದ ಇತ್ತೀಚಿನ ಅಧ್ಯಯನವು, 2023ರಲ್ಲಿ ಪ್ರಾದೇಶಿಕ ಒಟಿಟಿ ಕಂಟೆಂಟ್ ಪ್ರಮಾಣವು ಶೇಕಡಾ 52 ರಷ್ಟಿದ್ದರೆ, ಹಿಂದಿ ಭಾಷೆಯ ಕಂಟೆಂಟ್ ಶೇಕಡಾ 48 ರಷ್ಟಿದೆ ಎಂದು ವರದಿ ಮಾಡಿದೆ. ವಿಶಾಲ ಪ್ರೇಕ್ಷಕರನ್ನು ಆಕರ್ಷಿಸುವ ಗುರಿಯನ್ನು ಹೊಂದಿರುವ ರಾಷ್ಟ್ರೀಯ ಒಟಿಟಿ ವೇದಿಕೆಗಳಿಗೆ ಪ್ರಾದೇಶಿಕ ಭಾಷೆಯ ಕಂಟೆಂಟ್ ಮಹತ್ವವನ್ನು ಇದು ಎತ್ತಿ ತೋರಿಸುತ್ತದೆ. ವಿ ತನ್ನ ವ್ಯಾಪಕ ಮತ್ತು ವೈವಿಧ್ಯಮಯ ಗ್ರಾಹಕ ನೆಲೆಗೆ ಪ್ರೀಮಿಯಂ ಪ್ರಾದೇಶಿಕ ಒಟಿಟಿ ಕೊಡುಗೆಗಳನ್ನು ತಲುಪಿಸಲು ಬದ್ಧವಾಗಿದೆ, ಆ ಮೂಲಕ ಈ ಒಟಿಟಿ ವೇದಿಕೆಗಳನ್ನು ಹೆಚ್ಚಿನ ವೀಕ್ಷಕರೊಂದಿಗೆ ಸಂಪರ್ಕಿಸಲು ಅನುವು ಮಾಡಿಕೊಡುತ್ತದೆ. ವಿ ಮೂವೀಸ್ ಮತ್ತು ಟಿ.ವಿ ಪೋರ್ಟ್ಫೋಲಿಯೊವನ್ನು ಬಳಕೆದಾರರ ವೈವಿಧ್ಯಮಯ ಆದ್ಯತೆಗಳನ್ನು ಪೂರೈಸುವ ದೃಷ್ಟಿಯಿಂದ ವಿನ್ಯಾಸಗೊಳಿಸಲಾಗಿದೆ, ಮಲಯಾಳಂಗಾಗಿ ಮನೋರಮಾಮ್ಯಾಕ್ಸ್ ಮತ್ತು ಕನ್ನಡ ಕಂಟೆಂಟ್ಗಾಗಿ ನಮ್ಮಫ್ಲಿಕ್ಸ್ ಸೇರ್ಪಡೆಗೊಳಿಸಲಾಗಿದೆ. ವಿ ಬಳಕೆದಾರರು ರಜನಿಕಾಂತ್ ಅವರ ಅಣ್ಣಾತೆ, ವಿಜಯ್ ಅವರ ಬೀಸ್ಟ್, ಧನುಷ್ ಅವರ ತಿರುಚಾಂಬಲಂ, ಡಾಕ್ಟರ್, ರವಿ ತೇಜಾ ಅವರ ಈಗಲ್ ನಂತಹ ಪ್ರಾದೇಶಿಕ ಚಲನಚಿತ್ರಗಳು, ಟಿವಿ ಶೋಗಳು, ಮತ್ತು ಜನಪ್ರಿಯ ಶೀರ್ಷಿಕೆಗಳ ಶ್ರೀಮಂತ ಆಯ್ಕೆಯನ್ನು ಸನ್ NXT' ನಲ್ಲಿ ಪಡೆಯಬಹುದು.

## ರಾಗಿ ಉತ್ತಪ್ಪ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

1/2 ಕಪ್ ರಾಗಿ 1/3 ಕಪ್ ಅಕ್ಕಿ1/4 ಕಪ್ ಉದ್ದಿನ ಬೇಳೆ 1 ಟೊಮೆಟೊ3-4 ಹಸಿರು ಮೆಣಸಿನಕಾಯಿಗಳು1 ಈರುಳ್ಳಿ1/4 ಟೀಸ್ಪೂನ್ ಮೆಂತ್ಯದ ಕಾಳು2-3 ಚಮಚ ಕೊತ್ತಂಬರಿ ಸೊಪ್ಪು2-3 ಚಮಚ ಎಣ್ಣೆ, ರುಚಿಗೆ ತಕ್ಕಷ್ಟು ಉಪ್ಪು.

### ಮಾಡುವ ವಿಧಾನ

ರಾಗಿ ಉತ್ತಪ್ಪ ಮಾಡಲು ಮೊದಲು ರಾಗಿ ಮತ್ತು ಅಕ್ಕಿಯನ್ನು ಸ್ವಚ್ಛಗೊಳಿಸಿ. ಇದರೊಂದಿಗೆ ಉದ್ದಿನಬೇಳೆ ಮತ್ತು ಮೆಂತ್ಯವನ್ನು ಹಾಕಿ ಇವೆಲ್ಲವನ್ನೂ ಬೇರೆ ಬೇರೆ ಪಾತ್ರೆಗಳಲ್ಲಿ ಸುಮಾರು 5-6 ಗಂಟೆಗಳ ಕಾಲ ನೆನೆಸಿಡಿ. ನಂತರ ಮಿಕ್ಸರ್ ಜಾರ್ಗೆ ಉದ್ದಿನ ಬೇಳೆಯನ್ನು ಹಾಕಿ ನಯವಾದ ಪೇಸ್ಟ್ ಮಾಡಿ. ಅದನ್ನು ಬೇರೆ ಪಾತ್ರೆಗೆ ಸುರಿದಿಟ್ಟುಕೊಂಡು ರಾಗಿ ಮತ್ತು ಅಕ್ಕಿಯನ್ನು ನುಣ್ಣಗೆ ರುಬ್ಬಿಕೊಳ್ಳಿ. ಇದನ್ನು ಮೊದಲೇ ರುಬ್ಬಿಟ್ಟ ಉದ್ದಿನ ಬೇಳೆಗೆ ಸೇರಿಸಿ. ಸುಮಾರು 10-12 ಗಂಟೆಗಳ ಕಾಲ ಇದು ಫರ್ಮೆಂಟ್ ಆಗಲು ಬಿಡಿ. ಹಿಟ್ಟು ಚೆನ್ನಾಗಿ ಹುದುಗಿದ ಬಳಿಕ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಚೆನ್ನಾಗಿ ಕಲಸಿ. ಇದಕ್ಕೆ ಟೊಮೆಟೊ, ಈರುಳ್ಳಿ, ಹಸಿರು ಮೆಣಸಿನಕಾಯಿ ಮತ್ತು ಕೊತ್ತಂಬರಿ ಸೊಪ್ಪನ್ನು ಸಣ್ಣಗೆ ಹೆಚ್ಚಿ ಸೇರಿಸಿ. ನಾನ್ ಸ್ಟಿಕ್ ಪ್ಯಾನ್ ಬಿಸಿಗಿಟ್ಟು ಸ್ವಲ್ಪ ಎಣ್ಣೆ ಹಚ್ಚಿ, ಅದು ಕಾದ ಬಳಿಕ ದೋಸೆ ಹಿಟ್ಟನ್ನು ವೃತ್ತಾಕಾರದಲ್ಲಿ ಹುಯ್ಯಿರಿ. ಮಧ್ಯಮ ಉರಿಯಲ್ಲಿ ಅವುಗಳನ್ನು ಬೇಯಿಸಿ. ಮುಚ್ಚಳ ಮುಚ್ಚಿ ಎರಡೂ ಕಡೆಗಳಿಂದ ಬೇಯಿಸಿದರೆ ರಾಗಿ ಉತ್ತಪ್ಪ ಸವಿಯಲು ಸಿದ್ಧ. ಅದನ್ನು ಕಾಯಿ ಚಟ್ನಿ ಜೊತೆ ಬಿಸಿ ಬಿಸಿಯಾಗಿ ಸವಿಯಿರಿ.

# ಸೆಕೆಂಡ್ ಮ್ಯಾರೇಜ್ ಸಿಕ್ರೇಟ್ ಬಿಚ್ಚಿಟ್ಟ ಸಮಂತಾ!

ಹನಿಬನ್ನಿ ಸರಣಿಯು ನವೆಂಬರ್ 7 ರಂದು ಅಮೆಜಾನ್ ಪ್ರೈಮ್ನಲ್ಲಿ ಸ್ಟ್ರೀಮಿಂಗ್ ಪ್ರಾರಂಭಿಸಲಿದೆ. ಸಮಂತಾ ಜೊತೆಗೆ ನಿರ್ದೇಶಕ ಜೋಡಿ ರಾಜ್ ಮತ್ತು ಡಿಕೆ ಅವರ ಸಂದರ್ಶನವೂ ನಡೆಯುತ್ತಿದೆ. ಶೂಟಿಂಗ್ ವೇಳೆ ಸಮಂತಾ ಎದುರಿಸಿದ ಸಂಕಷ್ಟದ ಬಗ್ಗೆ ನಿರ್ದೇಶಕರು ಹೇಳಿಕೊಂಡಿದ್ದು, ಸರಣಿ ಯಶಸ್ವಿಯಾಗಲಿದೆ ಎಂಬ ವಿಶ್ವಾಸ ಅವರಲ್ಲಿದೆ.ಸಿರೀಸ್ನಲ್ಲಿ ವರುಣ್ ಧವನ್ ನಾಯಕನಾಗಿ ನಟಿಸಿದ್ದಾರೆ. ಸದ್ಯ ಸಂದರ್ಶನಗಳಲ್ಲಿ ಪತ್ರಕರ್ತರು ಕೇಳುವ ಪ್ರಶ್ನೆಗಳಿಗೆ ಸಮಂತಾ ತಾಳ್ಮೆಯಿಂದ ಮತ್ತು ಧೈರ್ಯದಿಂದ ಉತ್ತರಿಸಿದ್ದಾರೆ..

ಇದೇ ವೇಳೆ ಬಂದ ಎರಡನೇ ಮದುವೆಯ ಪ್ರಶ್ನೆಗೆ ಉತ್ತರಿಸಿದ ಸಮಂತಾ.. ತುಂಬಾ ಪ್ರೀತಿಸಿ ಪ್ರೀತಿಸಿದ ವ್ಯಕ್ತಿಯನ್ನು ಮದುವೆಯಾಗಿದ್ದು, ಈಗ ಬೇರೆಯಾಗಿದ್ದಾರೆ, ಎರಡನೇ ಮದುವೆ ಬಗ್ಗೆ ನನಗೆ ಗೊತ್ತಿಲ್ಲ.. ಆದರೆ ನನ್ನ ಜೀವನದಲ್ಲಿ ಯಾರೂ ಇರಬಾರದು ಎಂದು ನಿರ್ಧರಿಸಿದ್ದೇನೆ ಎಂದು ಹೇಳಿದ್ದಾರೆ..

ಇದರೊಂದಿಗೆ ಸಮಂತಾ ಅವರನ್ನು ಎಲ್ಲರೂ ಹೊಗಳುತ್ತಿದ್ದಾರೆ. ನಾಗ ಚೈತನ್ಯ ಅಗಲಿ ಕೆಲ ವರ್ಷಗಳ ನಂತರ ಸೋಭಿತಾ ಧೂಳಿಪಾಳ ಜೊತೆ ಮದುವೆಯಾಗುತ್ತಿದ್ದಾರೆ, ಆದರೆ ಪ್ರೀತಿ, ಮದುವೆ ಮರೆಯಲು ಸಾಧ್ಯವಾಗದೆ ಸಮಂತಾ ತೋರಿಸಿಕೊಳ್ಳದಿದ್ದರೂ ಮಾನಸಿಕವಾಗಿ ಕುಗ್ಗಿದ್ದಾರೆ ಎಂದು ನೆಟ್ಟಿಗರು ಕಮೆಂಟ್ ಮಾಡುತ್ತಿದ್ದಾರೆ..

ಫ್ಯಾಮಿಲಿಮ್ಯಾನ್ ವೆಬ್ ಸೀರೀಸ್ ಮಾಡಿದ್ದರಿಂದ ನಾಗ ಚೈತನ್ಯ-ಸಮಂತಾ ಬ್ರೇಕ್ ಅಪ್ ಆಗಲು ಕಾರಣ ಎಂಬ ಸುದ್ದಿಯೊಂದು ಬಂದಿತ್ತು.. ಆದರೆ ಈ ಬಗ್ಗೆ ಯಾವುದೇ ಅಧಿಕೃತ ಮಾಹಿತಿ ಇಲ್ಲ.. ಜೊತೆಗೆ ಸೋಭಿತಾ ಜೊತೆ ನಾಗ ಚೈತನ್ಯ ಅವರ ಆಪ್ತತೆ ಮತ್ತೊಂದು ಕಾರಣವಾಗಿತ್ತು ಎನ್ನಲಾಗಿದೆ.. ಆದರೆ ಇಬ್ಬರ ನಡುವಿನ ಕಲಹದಿಂದ ಬೇರೆಯಾಗುತ್ತಿದ್ದೇವೆ ಎಂದು ಸರಳವಾಗಿ ಹೇಳಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಅವರ ಕುರಿತಾದ ಸುದ್ದಿಗಳು ಆಗ್ಗಾಗೆ ವೈರಲ್ ಆಗುತ್ತಲೇ ಇರುತ್ತವೆ.. ಸಮಂತಾ ಮತ್ತು ನಾಗ ಚೈತನ್ಯ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಏನೇ ಸುದ್ದಿ ಬಂದರೂ ಅದು ವೈರಲ್ ಆಗುವುದು ಖಂಡಿತ.



## ಮೂತ್ರಪಿಂಡದ ಕಲ್ಲುಗಳಿಗೆ ಇಲ್ಲಿದೆ ಮನೆಮದ್ದು



### ಹೆಲ್ತ್ ಟಿಪ್ಸ್

ಮಳೆಗಾಲ ಬಂತೆಂದರೆ ನಾವು ನೀರು ಕುಡಿಯುವ ಪ್ರಮಾಣ ಕಡಿಮೆಯಾಗುತ್ತದೆ. ಆದ್ದರಿಂದ ಮೂತ್ರಪಿಂಡದಲ್ಲಿ ಕಲ್ಲುಗಳ ಸಮಸ್ಯೆ ಕಂಡುಬರುವ ಸಾಧ್ಯತೆಗಳಿವೆ. ಆ ಸಮಸ್ಯೆಗೆ ಮನೆಮದ್ದನ್ನು ಕಂಡುಕೊಳ್ಳೋಣ.ಈ ಪುಡಿಯನ್ನು ದಿನಕ್ಕೆ ಮೂರು ಬಾರಿ ಸೇವಿಸಿದರೆ ಮೂತ್ರಪಿಂಡದ ಕಲ್ಲುಗಳು ಕರಗುತ್ತವೆ. ಮೂತ್ರಪಿಂಡದ ಕಲ್ಲುಗಳು ವಯಸ್ಸು ಅಥವಾ ಗಾತ್ರವನ್ನು ಲೆಕ್ಕಿಸದೆ ಯಾರಲ್ಲಾದರೂ ಸಂಭವಿಸಬಹುದು. ಇದಕ್ಕೆ ಹಲವು ಕಾರಣಗಳಿವೆ. ಆದಾಗ್ಯೂ, ಮೂತ್ರಪಿಂಡದ ಕಲ್ಲುಗಳು ಒಮ್ಮೆ ಸಂಭವಿಸಿದರೆ ಜಾಗರೂಕರಾಗಿರುವುದು ಮತ್ತು ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವುದು ಮುಖ್ಯ. ಅವುಗಳನ್ನು ತಡೆಗಟ್ಟುವ ಯಾವುದೇ ವಿಧಾನವನ್ನು ಶ್ರದ್ಧೆಯಿಂದ ಅನುಸರಿಸಬೇಕ. ಏಕೆಂದರೆ ಅವು ಪುನರಾವರ್ತನೆಯಾಗಬಹುದು. ಮೂತ್ರಪಿಂಡದ ಕಲ್ಲುಗಳು ಮತ್ತೆ ರೂಪುಗೊಳ್ಳದಂತೆ ತಡೆಯಲು ಸಹಾಯ ಮಾಡುವ ಶಕ್ತಿಯುತ ಸಲಹೆಯನ್ನು ಕೆಳಗೆ ನೀಡಲಾಗಿದೆ. ಈ ಪರಿಹಾರವು ಪರಿಣಾಮಕಾರಿಯಾಗಿದೆ ಮತ್ತು ನಾವೆಲ್ಲರೂ ಈಗ ಅದರ ಬಗ್ಗೆ ತಿಳಿದಿರಬೇಕು. ಜನರು ಬಿಸಿ ವಾತಾವರಣದಲ್ಲಿ ಮಸಾಲೆಯುಕ್ತ ಹಸಿರು ಮೆಣಸಿನಕಾಯಿಗಳನ್ನು ತಿನ್ನುವುದನ್ನು ಆನಂದಿಸುತ್ತಿದ್ದಾರೆ. ಆದಾಗ್ಯೂ, ಹಸಿರು ಮೆಣಸಿನಕಾಯಿಗಳನ್ನು ಬೀಜಗಳೊಂದಿಗೆ ತಿನ್ನುವುದು ಸೂಕ್ತವಲ್ಲ, ಏಕೆಂದರೆ ಅವು ಮೂತ್ರಪಿಂಡದ ಕಲ್ಲುಗಳಿಗೆ ಕಾರಣವಾಗಬಹುದು. ಆದ್ದರಿಂದ ಜಾಗರೂಕರಾಗಿರಿ ಮತ್ತು ಈಗ ಅವುಗಳನ್ನು ತಿನ್ನುವುದನ್ನು ತಪ್ಪಿಸಿ. ನಾವು ಬೇರೆ ಏನು ಮಾಡಬಹುದು ಎಂದು ಕಂಡುಹಿಡಿಯೋಣ. ಹಸಿಮೆಣಸಿನಕಾಯಿ ಬೀಜಗಳನ್ನು ಸಂಗ್ರಹಿಸಿ, ಅವುಗಳನ್ನು ಒಣಗಿಸಿ ಪುಡಿ ಮಾಡಿ, ಈ ಪುಡಿಯನ್ನು ನೀರಿನಲ್ಲಿ ಬೆರೆಸಿ ಕೆಲವು ದಿನಗಳವರೆಗೆ ದಿನಕ್ಕೆ ಮೂರು ಬಾರಿ ಸೇವಿಸಿ. ಇದು ಮೂತ್ರಪಿಂಡದ ಕಲ್ಲುಗಳನ್ನು ತಡೆಗಟ್ಟಲು ಸಹಾಯ ಮಾಡುತ್ತದೆ ಎಂದು ಆಯುರ್ವೇದ ಸೂಚಿಸುತ್ತದೆ. ಹೆಚ್ಚುವರಿಯಾಗಿ, ಕಲ್ಲುಗಳು ಮರುಕಳಿಸಿದರೆ ಈ ಪುಡಿಯನ್ನು ಮತ್ತೆ ಸೇವಿಸಲು ಆಯುರ್ವೇದವು ಶಿಫಾರಸು ಮಾಡುತ್ತದೆ. ಆದ್ದರಿಂದ, ಹಸಿರು ಮೆಣಸಿನಕಾಯಿಗಳನ್ನು ತಿನ್ನುವಾಗ, ಬೀಜಗಳು ಮತ್ತು ಬಿಳಿ ವಸ್ತುಗಳ ಬಗ್ಗೆ ಜಾಗರೂಕರಾಗಿರಿ. ಈ ವಿಧಾನಗಳನ್ನು ಅನುಸರಿಸುವುದರಿಂದ ಮೇಲೆ ತಿಳಿಸಿದ ಸಮಸ್ಯೆಗಳನ್ನು ತಡೆಗಟ್ಟಲು ಸಹಾಯ ಮಾಡುತ್ತದೆ.

## ಕೈಬೆರಳಿಗಾಗಿ ಆಕರ್ಷಕ 'ನೈಲ್ ಪಾಲಿಶ್'

### ಬ್ಯೂಟಿ ಟಿಪ್ಸ್



ಕೈ ಬೆರಳುಗಳು ಅಂದವಾಗಿ ಕಾಣಬೇಕೆಂಬುದು ಎಲ್ಲರ ಬಯಕೆಯೂ ಹೌದು. ನೀಳವಾಗಿ ಇಳಿಬಿಟ್ಟ ಉಗುರುಗಳು ಲಲನೆಯರ ಕೈಗೊಂದು ಬೇರೆಯೇ ಅದ ಸೌಂದರ್ಯವನ್ನು ನೀಡುತ್ತವೆ. ಹಾಗಾಗಿ ಅವುಗಳ ರಕ್ಷಣೆಯೂ ಅಷ್ಟೇ ಮುಖ್ಯ. ಯಾವ ಯಾವ ಸಂದರ್ಭಗಳಲ್ಲಿ ಎಂತಹ ನೈಲ್ ಪಾಲಿಶ್ ಹಾಕಬೇಕು ಎಂಬುದನ್ನು ತಿಳಿದುಕೊಂಡಿರುವುದು ಅಷ್ಟೇ ಮುಖ್ಯ. ನೀವು ಅಚ್ಚ ಬಿಳುಪು ಬಣ್ಣದವರಾಗಿದ್ದರೆ ನಿಮಗೆ ಲೈಟ್ ಪಿಂಕ್ ಬಣ್ಣ ಹೆಚ್ಚಾಗಿ ಹೊಂದುತ್ತದೆ. ನೀವು ಮಧ್ಯಮ ಬಣ್ಣ ಹೊಂದಿದ್ದರೆ ಲ್ಯಾವೆಂಡರ್, ಪೀಚ್, ಆರೇಂಜ್ ಬಣ್ಣ ನಿಮಗೆ ಸೂಕ್ತವಾಗಿ ಹೊಂದಿಕೊಳ್ಳುತ್ತದೆ. ನಿಮ್ಮ ಬಣ್ಣ ಇನ್ನೂ ತುಸು ಡಾರ್ಕ್ ಇದ್ದರೆ ಮೆರೂನ್, ರೆಡ್, ಕಾಫಿ ಬಣ್ಣವನ್ನು ಆಯ್ದುಕೊಳ್ಳಿ. ಸಂಪೂರ್ಣ ಕಪ್ಪು ಬಣ್ಣದವರಿಗೆ ಮಿಂಟ್ ಬಣ್ಣ ಹೆಚ್ಚು ಹೊಂದುತ್ತದೆ. ಶೇಡ್ಗಳನ್ನು ಬಳಸಿ ನೈಲ್ ಪಾಲಿಶ್ ಹಚ್ಚುವುದರಿಂದ ನಿಮ್ಮ ಕೈಯ ಸೌಂದರ್ಯ ಮತ್ತಷ್ಟು ಹೆಚ್ಚುತ್ತದೆ. ಲೈಟ್ ನೀಲಿ ಬಣ್ಣವೂ ಬಹುತೇಕ ಎಲ್ಲಾ ವರ್ಗದವರಿಗೂ ಹೊಂದಿಕೆಯಾಗುವುದರಿಂದ ಅದನ್ನು ಪ್ರಯತ್ನಿಸಿ. ಅಚ್ಚರಿಯೆಂದರೆ ಇತ್ತೀಚಿನ ದಿನಗಳಲ್ಲಿ ಧರಿಸಿದ ಉಡುಪಿನ ಬಣ್ಣದ ನೈಲ್ ಪಾಲಿಶ್ ಹಾಕುವ ಬದಲು ಅದರ ವಿರುದ್ಧ ಬಣ್ಣವನ್ನು ಆಯ್ದುಕೊಳ್ಳುವ ಟ್ರೆಂಡ್ ಹೆಚ್ಚಾಗಿದೆ. ಹೀಗಾಗಿ ಅಯಾಕಾಲದ ಟ್ರೆಂಡ್ ನೊಂದಿಗೆ ಮುಂದುವರಿಯುವುದೇ ಜಾಣತನದ ಆಯ್ಕೆ.

# ಪಂಚವರ್ಣೆ ಮೊದಲ ಪ್ರಯೋಗ

## ಹೆಣ್ಣಿನ ಆಯ್ಕೆಗಳ ಅಂತರಂಗಬಹಿರಂಗ | ಮೀರಾ ಅವರ ಏಕವ್ಯಕ್ತಿ ರಂಗಪ್ರಸ್ತುತಿ

ಸ್ತ್ರೀ ಎಂದರೆ ಅಷ್ಟೇ ಸಾಕೆ? ನಿನಗೆ ಬೇರೆ ಹೆಸರು ಬೇಕೆ?
ಹೆಣ್ಣೆಂದರೆ ಬರಿ ಮೈಯ್ಯಲ್ಲ
ಮುಗಿಲೆತ್ತರದ ಮನಸು
ಶತಮಾನಗಳ ಕನಸು
ಉತ್ತರವಿಲ್ಲದ ಪ್ರಶ್ನೆಗಳು

ಹೆಣ್ಣೆಂದರೆ ಬಾಳ ಬೆಳಕು, ಚೈತನ್ಯ, ತ್ಯಾಗ, ತಾಳ್ಮೆ, ಸಹಿಷ್ಣುತೆ, ಹೊಂದಾಣಿಕೆ, ಶಕ್ತಿಗಳ ಸಮ್ಮಿಲನ! ಅಡುಗೆ ಮನೆಯಿಂದ ಅಂತರಿಕ್ಷದವರೆಗೂ ಆಕೆಯದು ದೃಢವಾದ ಹೆಜ್ಜೆಗಳಿದ್ದರೂ, ಈಗಲೂ ಆಕೆ ಅತಂತ್ರಳೇ!

ಪುರಾಣದ ರಾಜಕುಮಾರಿಯರು, ಅಪಾರ ಅಂತಃ ಶಕ್ತಿಯುಳ್ಳವರಾಗಿದ್ದರು. ಅವರಲ್ಲಿ ಅಹಲ್ಯೆ, ಸೀತಾ, ತಾರಾ, ಮಂಡೋದರಿ, ಸತ್ಯವತಿ, ಕುಂತಿ, ಮಾದ್ರಿ, ದ್ರೌಪದಿ, ಭಾನುಮತಿ, ಉತ್ತರೆ ಹೀಗೆ ಹಲವರು ಗಟ್ಟಿತನವುಳ್ಳವಾದರೂ ಅವರ ಜೀವನ ಅವರದಾಗಿತ್ತೆ ಎಂಬ ಪ್ರಶ್ನೆ ಕಾಡದಿರದು! ಸ್ವತಂತ್ರವಾಗಿ ಆಲೋಚಿಸುವ ಶಕ್ತಿಯಿದ್ದಾಗ್ಯೂ ವಿಧಿಬರಹಕ್ಕೆದಾಳವಾದವರಲ್ಲವೇ?ಇನ್ನು ದ್ರೌಪದಿ, ದ್ರುಪದ-ದ್ರೋಣರ ಸೇಡು ತೀರಿಸಿಕೊಳ್ಳಲು ದಾಳವಾದವಳು. ಮತ್ಸ್ಯ ಯಂತ್ರ ಬೇಧಿಸಿದ್ದು ಯಾರೇ ಆಗಿದ್ದರೂ ಅಗ್ನಿಪುತ್ರಿಯನ್ನು ಅವನಿಗೆ ಕೊಡಲು ಪಾಂಚಾಲ ರಾಜ ಸಿದ್ಧವಾಗಿದ್ದ. ಭುಜ ಬಲಿಯೊಬ್ಬ ಬೇಕಾಗಿದ್ದ, ಮಗಳ ಸೌಂದರ್ಯವನ್ನು ಒತ್ತೆಯಾಗಿಟ್ಟಿದ್ದ! ಅದೃಷ್ಟವೋ, ದುರಾದೃಷ್ಟವೋ ಪಾರ್ಥ ಜಯಿಸಿದ, ತಾಯಿಯ ಆದೇಶದಂತೆ ತನ್ನ ಜಯ ವಧುವನ್ನು ಸೋದರರೊಂದಿಗೆ ಹಂಚಿಕೊಳ್ಳುವಾಗ ದ್ರೌಪದಿಯ ಮನಃಸ್ಥಿತಿ ಎಂತಹುದಿತ್ತೆಂಬುದನ್ನು ಯಾರಾದರೂ ವಿಚಾರಿಸಿದರೇ...?



ಈ ಶತಶತಮಾನಗಳ ಹಾಗೂ ಪ್ರಸ್ತುತ ಪ್ರಶ್ನೆಗಳಿಗೆ ಉತ್ತರ ಹುಡುಕುವ ಸಣ್ಣ ಪ್ರಯತ್ನವೇ 'ಪಂಚವರ್ಣೆ'. ದ್ರೌಪದಿಯನ್ನು ರೂಪಕವಾಗಿಸಿ, ಅವಳ ಅಂತರಂಗ, ಐದು ಬಹು ಆಯಾಮದ ವೈವಿಧ್ಯಮಯ ವೀರರೊಂದಿಗಿನ ಸಂಸಾರ, ವನವಾಸದ ಪಡಿಪಾಟಲ ಚಿತ್ರಣವಿದೆ. ಆರ್ಯಾವರ್ತದ ಸೊಸೆಯ ಶೋಷಣೆ, ಬಲಾತ್ಕಾರಗಳ ಪ್ರಯತ್ನ, ಬೆಳೆವ ಮಕ್ಕಳನ್ನು ಮುದ್ದಿಸಿ ಬೆಳೆಸಲಾಗದ ಅಸಹಕಾಯತೆ, ಮಹಾರಾಣಿಯು ಸೇವಕಿಯಾದ ಸಂದರ್ಭದ ಭಾವ ತುಮುಲಗಳು ಎಲ್ಲಕ್ಕಿಂತ ಮಿಗಿಲಾಗಿ ಅವಳ ಬದುಕು ಅವಳದಾಗದೇ ಆಯ್ಕೆಗಳೇ ಇಲ್ಲದ ರಾಜಕುವರಿಯ ಮನೋಕಲಾಪ 'ಪಂಚವರ್ಣೆ'ಯ ಕೇಂದ್ರ ಬಿಂದುವಾಗಿದೆ.ಇದು ದ್ರೌಪದಿಯ ಬದುಕಿನ ಆಯ್ಕೆಗಳ ಅಂತರಂಗ-ಬಹಿರಂಗ ಅನಾವರಣ. ಇಂದಿನ ಎಲ್ಲ ಹೆಣ್ಣು ಮಕ್ಕಳಿಗೂ ಅನ್ವಯಿಸಬಹುದಾದ ಸಾರ್ವಕಾಲಿಕ ಸತ್ಯದ ಪ್ರಯೋಗ.'ಕಾಜಾಣ' ಪ್ರಸ್ತುತಿ.

ಈ ಏಕವ್ಯಕ್ತಿ ದೃಶ್ಯರೂಪಕದ ಸಾಹಿತ್ಯ ರಚನೆ, ವಿನ್ಯಾಸ ಹಾಗೂ ನಿರ್ದೇಶನವನ್ನು ಖ್ಯಾತ ಸಾಹಿತಿ ಹಾಗೂ ರಂಗ ನಿರ್ದೇಶಕ ಡಾ.ಬೇಲೂರು ರಘುನಂದನ್ ಅವರು ಮಾಡಿದ್ದಾರೆ. ಮುಖ್ಯಭೂಮಿಕೆಯಲ್ಲಿ ಡಾ. ಮೀರಾ ಎಚ್. ಎನ್. ಅವರು ಅಭಿನಯಿಸುತ್ತಿದ್ದಾರೆ. 'ಪಂಚವರ್ಣೆ' ಇವರ ಅಭಿನಯದ ಮೊದಲ ಏಕವ್ಯಕ್ತಿ ರಂಗಪ್ರಸ್ತುತಿ.

ಕಲಾವಿದೆ ಮೀರಾ ಅವರು ಮೂಲತಃ ತುಮಕೂರಿನವರು. ಇವರು ವೃತ್ತಿಯಲ್ಲಿ ಅಧ್ಯಾಪಕಿ. ಈ ಮುನ್ನ ಶೇಷಾದ್ರಿಪುರಂ ಕಾಲೇಜಿನ ಪ್ರಾಂಶುಪಾಲ್ ಆಗಿ ಕೆಲಸ ನಿರ್ವಹಿಸಿದ್ದರು. ಪ್ರಸ್ತುತ ಎಮ್ ಎಲ್ ಎ ಕಾಲೇಜಲ್ಲಿ ವಾಣಿಜ್ಯ ವಿಭಾಗದಲ್ಲಿ ಅಧ್ಯಾಪಕಿಯಾಗಿದ್ದಾರೆ.

ಇವರು ಪ್ರವೃತ್ತಿಯಿಂದ ಬಹು ಆಯಾಮದ ಕಲಾವಿದೆ. ತುಮಕೂರಿನಲ್ಲಿ ಹಲವಾರು ನಾಟಕ ತಂಡಗಳಲ್ಲಿ ನಟಿಸಿದ್ದರು. ಧಾರಾವಾಹಿಗಳಲ್ಲಿಯೂ ಅಭಿನಯಿಸಿದ್ದು 'ಮುಕ್ತ', 'ಮಂಥನ', 'ಮಗಳು ಜಾನಕಿ'ಗಳಲ್ಲಿ ನಟಿಸಿದ್ದಾರೆ. ಇವರು ಕೂಚುಪುಡಿ ನೃತ್ಯಗಾತಿಯೂ ಆಗಿದ್ದು ಹಲವಾರು ಪ್ರದರ್ಶನಗಳನ್ನು ಕೊಟ್ಟಿದ್ದಾರೆ.ಮಲ್ಲೇಶ್ವರಂ ಲೇಡೀಸ್ ಅಸೋಸಿಯೇಷನ್ ಪ್ರಾಯೋಜಿಸಿರುವ ಈ ಪ್ರಯೋಗಕ್ಕೆ ಶ್ರೀನಿವಾಸ್ ಪಿ ಎಚ್ ಅವರ ಹಿನ್ನೆಲೆ ಗಾಯನ ಹಾಗೂ ಸಂಗೀತವಿದೆ. ರವಿಶಂಕರ ಅವರ ಬೆಳಕಿನ ವಿನ್ಯಾಸ ಹಾಗೂ ಶ್ರೀನಿ ಸಂಪತ್ ಲಕ್ಷ್ಮೀ ಅವರ ಸಂಗೀತ ನಿರ್ವಹಣೆ ಇದೆ.

● ಅಕ್ಟೋಬರ್ 30, ಸಂಜೆ 5.30 ಕ್ಕೆ ● ಸ್ಥಳ: ಮಲ್ಲೇಶ್ವರದ ಎಮ್ ಎಲ್ ಎ ಕಾಲೇಜಿನ ಸಭಾಂಗಣ, ಸೇವಾ ಸದನದ ಎದುರು ಬೆಂಗಳೂರು.

# ಅಪ್ಪು ಅಗಲಿಕೆಗೆ 3 ವರ್ಷ, ರಾಜ್ಯಾದ್ಯಂತ ಪುಣ್ಯಸ್ಮರಣೆ ಕುಟುಂಬಸ್ಥರಿಂದ ಸಮಾಧಿಗೆ ವಿಶೇಷ ಪೂಜೆ

**ಬೆಂಗಳೂರು:** ನಗುವಿನ ಅರಸ ಪವರ್‌ಸ್ಟಾರ್ ಪುನೀತ್ ರಾಜ್‌ಕುಮಾರ್ ಅಗಲಿಕೆಗೆ ಭರ್ತಿ ಮೂರು ವರ್ಷ. 3 ವರ್ಷವಲ್ಲ, ಇನ್ನೂ ನೂರು ವರ್ಷ ಕಳೆದರೂ ಅಪ್ಪು ಮರೆಯಲಾಗದ ಮಾಣಿಕ್ಯ. 3ನೇ ವರ್ಷದ ಅಪ್ಪು ಪುಣ್ಯ ಸ್ಮರಣೆಯಲ್ಲಿ ರಾಜ್ಯದ ಮೂಲೆ ಮೂಲೆಗಳಿಂದ ಅಭಿಮಾನಿಗಳು ಭಾಗಿಯಾಗಿದ್ದಾರೆ.

ನಗುಮೊಗದ ಒಡೆಯ ಪುನೀತ್ ಸ್ಟಾರ್ ಬ್ಯಾಕ್ ಗ್ರೌಂಡ್‌ನಿಂದ ಬಂದಿದ್ದರೂ ಹಮ್ಮು ಬಿಮ್ಮಿಲ್ಲದೇ ಎಲ್ಲರನ್ನೂ ತನ್ನವರೆಂದು ಬಾಚಿ ತಬ್ಬಿಕೊಳ್ಳುತ್ತಿದ್ದರು. ಹೀಗಾಗಿಯೇ ಅವರನ್ನು ಎಲ್ಲರೂ ಪ್ರೀತಿಯಿಂದ ಅಪ್ಪು ಎಂದೇ ಕರೆಯುತ್ತಿದ್ದರು. ಅಪ್ಪು ಕಳೆದುಕೊಂಡು ಇಂದಿಗೆ ಭರ್ತಿ ಮೂರು ವರ್ಷಗಳು. ಇಂದಿಗೂ ಕೂಡಾ ಅವರನ್ನು ಕಳೆದುಕೊಂಡ ದುಃಖ ಮಾತ್ರ ಅವರ ಭಕ್ತಗಣದ ಎದೆಯಿಂದ ಮಾಸಿಲ್ಲ.

ಅಪ್ಪು 3ನೇ ವರ್ಷದ ಪುಣ್ಯಸ್ಮರಣೆಯಲ್ಲಿ ಪತ್ನಿ ಅಶ್ವಿನಿ, ರಾಘವೇಂದ್ರ ರಾಜ್‌ಕುಮಾರ್, ವಿನಯ್ ರಾಜ್ ಕುಮಾರ್, ಯುವರಾಜ್ ಕುಮಾರ್, ಅಪ್ಪು ಪುತ್ರಿಯರು ಭಾಗಿಯಾಗಿದ್ದಾರೆ. ಕಂಠೀರವ ಸ್ಟುಡಿಯೋದಲ್ಲಿ ಅಪ್ಪು ಸಮಾಧಿ ಬಳಿ ಇಷ್ಟದ ತಿನಿಸುಗಳನ್ನಿಟ್ಟು ಪೂಜೆ ಸಲ್ಲಿಸಿದ್ದಾರೆ. ಸಮಾಧಿಯನ್ನ ವಿಶೇಷವಾಗಿ ಹೂವುಗಳಿಂದ, ದೀಪಗಳಿಂದ ಅಲಂಕಾರ ಮಾಡಲಾಗಿದೆ. ರಾಜ್ಯದ ಮೂಲೆ ಮೂಲೆಗಳಿಂದ ಅಭಿಮಾನಿಗಳ ದಂಡು ಅಪ್ಪು ಸಮಾಧಿ ಬಳಿ ಜಮಾಯಿಸಿ ನೆಚ್ಚಿನ ನಟನಿಗೆ ನಮನ ಸಲ್ಲಿಸುತ್ತಿದ್ದಾರೆ.



ಅಪ್ಪು ಇಲ್ಲ ಎಂದು ಅವರ ಅಭಿಮಾನಿಗಳು ಸುಮ್ಮನೆ ಕುಳಿತಿಲ್ಲ. ಅವರ ಹೆಸರಿನಲ್ಲಿ ಸಾಕಷ್ಟು ಪುಣ್ಯದ ಕೆಲಸಗಳನ್ನು ವರ್ಷಪೂರ್ತಿ ಮಾಡುತ್ತಿದ್ದಾರೆ. ಇಂದು ಪುಣ್ಯ ಸ್ಮರಣೆ ವಿಶೇಷವಾಗಿ ಕಂಠೀರವ ಸ್ಟುಡಿಯೋದಲ್ಲಿ ಹಾಗೂ ರಾಜ್ಯದ ಮೂಲೆ ಮೂಲೆಗಳಲ್ಲೂ ಅನ್ನದಾನ, ರಕ್ತದಾನ ಶಿಬಿರಗಳು ನಡೆಯುತ್ತಿವೆ. ಅಷ್ಟೇ ಅಲ್ಲದೇ ಇತ್ತೀಚೆಗೆ ಅಪ್ಪು ಅಭಿಮಾನಿ ಯಲಗಚ್ಚಿನಲ್ಲಿ ಗುಡಿಯೊಂದನ್ನ ಕಟ್ಟಿ ಅಭಿಮಾನ ಮೆರೆದಿದ್ದಾನೆ. ಅಲ್ಲೂ ಕೂಡಾ ಇಂದು ವಿಶೇಷ ಪೂಜೆ ನಡೆಯಲಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವ್ಯವಹಾರದಲ್ಲಿ ಆಸಕ್ತಿ, ವಾಹನ ಯೋಗ, ಅಮೂಲ್ಯ ವಸ್ತುಗಳ ಖರೀದಿ, ರಾಜ ವಿರೋಧ, ಕೋರ್ಟ್ ತೊಂದರೆ.

**ವೃಷಭ:** ಚಂಚಲ ಮನಸ್ಸು, ಶತ್ರು ಭಾದೆ, ಸ್ತ್ರೀಯರಿಗೆ ವಸ್ತ್ರಾಭರಣ ಪ್ರಾಪ್ತಿ, ಮಿತ್ರರಲ್ಲಿ ದ್ವೇಷ, ಸುಖ ಭೋಜನ ಪ್ರಾಪ್ತಿ, ಮನೆಗೆ ಹಿರಿಯರ ಆಗಮನ.

**ಮಿಥುನ:** ಆತ್ಮೀಯರಲ್ಲಿ ವಿರೋಧ, ಋಣ ಭಾದೆ, ವ್ಯವಹಾರದಲ್ಲಿ ಏರುಪೇರು, ಇಲ್ಲಸಲ್ಲದ ಅಪವಾದ, ತಾಯಿಗೆ ಬಂಧುಗಳಿಂದ ಸಹಾಯ.

**ಕಟಕ:** ಹೊಸ ಉದ್ಯೋಗ ಪ್ರಾಪ್ತಿ, ಪರಸ್ತ್ರೀಯಿಂದ ತೊಂದರೆ, ಅನಿರೀಕ್ಷಿತ ದ್ರವ್ಯ ಲಾಭ, ನೀವಾಡುವ ಮಾತಿನಿಂದ ಅನರ್ಥ.

**ಸಿಂಹ:** ಮನಸ್ತಾಪ, ನೆಮ್ಮದಿ ಇಲ್ಲದ ಜೀವನ, ಸಾರ್ವಜನಿಕ ಕ್ಷೇತ್ರದಲ್ಲಿ ಮನ್ನಣೆ, ಆರೋಗ್ಯದಲ್ಲಿ ಏರುಪೇರು.

**ಕನ್ಯಾ:** ಬಾಕಿ ವಸೂಲಿ, ದೂರ ಪ್ರಯಾಣ, ಇಷ್ಟವಾದ ವಸ್ತುಗಳ ಖರೀದಿ, ವಾದ ವಿವಾದಗಳಲ್ಲಿ ಎಚ್ಚರ.

**ತುಲಾ:** ಪ್ರೀತಿ ಸಮಾಗಮ, ಆತ್ಮೀಯರಲ್ಲಿ ವಿಶ್ವಾಸ, ಮಾನಸಿಕ ಒತ್ತಡ, ಋಣವಿಮೋಚನೆ

**ವೃಶ್ಚಿಕ:** ಸ್ತ್ರೀಯಿಂದ ತೊಂದರೆ, ವ್ಯವಹಾರದಲ್ಲಿ ಅಲ್ಪ ಲಾಭ, ಪ್ರಯಾಣದಿಂದ ಆಯಾಸ, ಆದಾಯಕ್ಕಿಂತ ಹೆಚ್ಚು ಖರ್ಚು.

**ಧನಸ್ಸು:** ವಿಪರೀತ ವ್ಯಸನ, ಅನ್ಯರಲ್ಲಿ ವೈಮನಸ್ಸು, ದೂರ ಪ್ರಯಾಣ, ಆತ್ಮೀಯರನ್ನು ದ್ವೇಷಿಸುವಿರಿ, ಉತ್ತಮ ಬುದ್ಧಿ ಶಕ್ತಿ.

**ಮಕರ:** ಆಕಸ್ಮಿಕ ಧನ ಲಾಭ, ದಂಡ ಕಟ್ಟುವ ಸಾಧ್ಯತೆ, ಹಿತ ಶತ್ರುಗಳಿಂದ ತೊಂದರೆ, ಮಾನಹಾನಿ, ವ್ಯಾಪಾರದಲ್ಲಿ ಅಭಿವೃದ್ಧಿ.

**ಕುಂಭ:** ಕುಟುಂಬದಲ್ಲಿ ಅಹಿತಕರ ವಾತಾವರಣ, ಸ್ತ್ರೀಯರಿಗೆ ನೆಮ್ಮದಿ, ಪರರಿಂದ ಮೋಸ, ಸ್ಥಿರಾಸ್ತಿ ಮಾರಾಟ, ಶತ್ರು ಭಾದೆ.

**ಮೀನ:** ದಾನ ಧರ್ಮದಲ್ಲಿ ಆಸಕ್ತಿ, ಮಾನಸಿಕ ನೆಮ್ಮದಿ, ಮಾತಿನ ಚಕಮಕಿ, ಆರೋಗ್ಯದಲ್ಲಿ ಏರುಪೇರು, ದಾಂಪತ್ಯದಲ್ಲಿ ಅನ್ಯೂನ್ಯತೆ, ಗೆಳೆಯರಲ್ಲಿ ಮನಸ್ತಾಪ.

## ವಿಶ್ವ ಮಿತವ್ಯಯ ದಿನ




ಅಕ್ಟೋಬರ್ 31 ರಂದು ಆಚರಿಸಲಾಗುವ ವಿಶ್ವ ಮಿತವ್ಯಯ ದಿನವು ಹಣವನ್ನು ಉಳಿಸುವ ಮೌಲ್ಯವನ್ನು ಎತ್ತಿ ಹಿಡಿಯಲು ಮತ್ತು ಆರ್ಥಿಕತೆಯ ಸಂಸ್ಕೃತಿಯನ್ನು ಬೆಳೆಸಲು ಮೀಸಲಾಗಿರುವ ದಿನವಾಗಿದೆ. ಇದು ಇತರ ಕೆಲವು ಜಾಗತಿಕ ಆಚರಣೆಗಳಂತೆ ವ್ಯಾಪಕವಾಗಿ ಗುರುತಿಸಲ್ಪಡದಿದ್ದರೂ, ಅದರ ಪ್ರಾಮುಖ್ಯತೆಯು ಆರ್ಥಿಕ ಜವಾಬ್ದಾರಿ ಮತ್ತು ಮಿತವ್ಯಯವನ್ನು ಪ್ರೋತ್ಸಾಹಿಸುವುದರಲ್ಲಿದೆ. ಈ ಪ್ರಸ್ತುತ ಯುಗದಲ್ಲಿ, ಹಣವನ್ನು ಉಳಿಸುವುದು ಬಹಳ ಮುಖ್ಯ.

ಈ ದಿನದ ಪ್ರಾಥಮಿಕ ಗುರಿ ಹಣವನ್ನು ಉಳಿಸುವ ಮತ್ತು ಆರ್ಥಿಕ ಭದ್ರತೆಯನ್ನು ಸಾಧಿಸುವ ಮಹತ್ವವನ್ನು ಒತ್ತಿಹೇಳುವುದು. ಜನರಿಗೆ ತಮ್ಮ ಹಣವನ್ನು ಬ್ಯಾಂಕ್ಗಳಲ್ಲಿ ಠೇವಣಿ ಇಡುವ ಮಹತ್ವವನ್ನು ಕಲಿಸಲು ಇದನ್ನು ಸ್ಥಾಪಿಸಲಾಗಿದೆ ಇದರಿಂದ ಅಗತ್ಯ ಸಮಯದಲ್ಲಿ ಅದನ್ನು ಪ್ರವೇಶಿಸಬಹುದು.

ವಿಶ್ವ ಮಿತವ್ಯಯ ದಿನವು ಆಕರ್ಷಕ ಇತಿಹಾಸವನ್ನು ಹೊಂದಿದ್ದು ಅದು ವಿಶ್ವ ಸಮರ 1 ರ ನಂತರ ಅದರ ಮೂಲವನ್ನು ಗುರುತಿಸುತ್ತದೆ. ಅಕ್ಟೋಬರ್ 1924 ರಲ್ಲಿ ಇಟಲಿಯಲ್ಲಿ ನಡೆದ ಉದ್ಘಾಟನಾ ಅಂತರರಾಷ್ಟ್ರೀಯ ಮಿತವ್ಯಯ ಕಾಂಗ್ರೆಸ್ನಲ್ಲಿ ಇಟಾಲಿಯನ್ ಅರ್ಥಶಾಸ್ತ್ರಜ್ಞ ಫಿಲಿಪ್ಪೊ ರಾವಾ ಅವರು ವಿಶ್ವ ಮಿತವ್ಯಯ ದಿನದ ಕಲ್ಪನೆಯನ್ನು ಪರಿಚಯಿಸಿದರು. ವಿಶೇಷವಾಗಿ ಸವಾಲಿನ ಆರ್ಥಿಕ ಕಾಲದಲ್ಲಿ ಹಣವನ್ನು ಉಳಿಸುವ ಪ್ರಾಮುಖ್ಯತೆಯನ್ನು ಒತ್ತಿಹೇಳುವ ವಿಶ್ವಾದ್ಯಂತ ಈವೆಂಟ್ ಅನ್ನು ರಚಿಸಿ.

ಈ ಪರಿಕಲ್ಪನೆಯು ಗಮನಾರ್ಹ ಜನಪ್ರಿಯತೆ ಮತ್ತು ಬೆಂಬಲವನ್ನು ಗಳಿಸಿತು, ಇದು ಅಕ್ಟೋಬರ್ 31, 1925 ರಂದು ಉದ್ಘಾಟನಾ ವಿಶ್ವ ಮಿತವ್ಯಯ ದಿನಕ್ಕೆ ಕಾರಣವಾಯಿತು. ದಿನಾಂಕದ ಆಯ್ಕೆಯ ಬಗ್ಗೆ ಕುತೂಹಲ ಹೊಂದಿರುವವರಿಗೆ, ಮೊದಲ ಅಂತರರಾಷ್ಟ್ರೀಯ ಮಿತವ್ಯಯ ಕಾಂಗ್ರೆಸ್ನ ವಾರ್ಷಿಕೋತ್ಸವದ ಜೊತೆಗೆ ಇದನ್ನು ಆಯ್ಕೆ ಮಾಡಲಾಯಿತು. ಅಂದಿನಿಂದ, ಪ್ರಪಂಚದಾದ್ಯಂತ ಹಲವಾರು ದೇಶಗಳಲ್ಲಿ ವಿಶ್ವ ಮಿತವ್ಯಯ ದಿನವನ್ನು ಆಚರಿಸಲಾಗುತ್ತದೆ. ವಿಶ್ವ ಮಿತವ್ಯಯ ದಿನವು ಹೆಚ್ಚು ಅರ್ಥಪೂರ್ಣವಾಗಿದೆ ಏಕೆಂದರೆ ಇದು ಹಣವನ್ನು ಉಳಿಸುವ, ಸಂವೇದನಾಶೀಲ ಆರ್ಥಿಕ ಆಯ್ಕೆಗಳನ್ನು ಮಾಡುವ ಮತ್ತು ಆರ್ಥಿಕ ಸ್ಥಿರತೆಯನ್ನು ಸಾಧಿಸುವ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುತ್ತದೆ. ಇದು ನಮ್ಮ ವೈಯಕ್ತಿಕ ಜೀವನದಲ್ಲಿ ಮಿತವ್ಯಯ ಮತ್ತು ಹಣವನ್ನು ಉಳಿಸುವ ಕಲ್ಪನೆಯನ್ನು ಒತ್ತಿಹೇಳುತ್ತದೆ. ಇದಲ್ಲದೆ, ವಿವೇಕಯುತ ಆರ್ಥಿಕ ನಿರ್ಧಾರಗಳನ್ನು ತೆಗೆದುಕೊಳ್ಳಲು ವ್ಯಕ್ತಿಗಳನ್ನು ಪ್ರೇರೇಪಿಸುವುದು, ಅನಗತ್ಯ ವೆಚ್ಚಗಳನ್ನು ಕಡಿತಗೊಳಿಸುವುದು ಮತ್ತು ಆರ್ಥಿಕವಾಗಿ ಸುರಕ್ಷಿತ ಭವಿಷ್ಯಕ್ಕಾಗಿ ತಯಾರಿ ಮಾಡುವುದು ಇದರ ಪ್ರಾಥಮಿಕ ಗುರಿಯಾಗಿದೆ.

ಸಂಜೆ ಮುಗಿಲು
ಬುಧವಾರ
30.10.2024



# ಪಟಾಕಿ ಉದ್ಯಮದ ಹಿತದೃಷ್ಟಿಯಿಂದ ಹೆಚ್ಚು ಪಟಾಕಿ ಖರೀದಿಸಿ- ಅಣ್ಣಾಮಲೈ





**ತಮಿಳುನಾಡು:** ಕೇವಲ ಒಂದು ದಿನ ಪಟಾಕಿ ಸಿಡಿಸುವುದೇ ದೊಡ್ಡ ವಿಷಯವಾಗಿ ಚರ್ಚಿಸುವ ಬದಲು, ಪಟಾಕಿ ತಯಾರಿಸುವ ಕಾರ್ಮಿಕರ ಆರ್ಥಿಕ ಒಳಿತನ್ನು ಗಮನದಲ್ಲಿಟ್ಟು ಹೆಚ್ಚಿನ ಪ್ರಮಾಣದ ಪಟಾಕಿ ಖರೀದಿಸುವ ಮೂಲಕ ಸಿಡಿಸಿ ಸಂಭ್ರಮದಿಂದ ದೀಪಾವಳಿ ಆಚರಿಸಿ ಎಂದು ಬಿಜೆಪಿ ನಾಯಕ ಕೆ.ಅಣ್ಣಾಮಲೈ ಕರೆ ನೀಡಿದ್ದಾರೆ.

ಅಂದಾಜು 8 ಲಕ್ಷಕ್ಕೂ ಅಧಿಕ ಜನ ನೇರ ಪರೋಕ್ಷವಾಗಿ ಪಟಾಕಿ ಉದ್ಯಮದೊಂದಿಗೆ ನಂಟಿದೆ. ಅವರು ನಮ್ಮ ಸಂತೋಷಕ್ಕೆ ಪಟಾಕಿಗಳನ್ನು ತಯಾರಿಸುತ್ತಾರೆ. ನಾವು ಅವರ ಖುಷಿಗಾಗಿ ಪಟಾಕಿ ಖರೀದಿಸಿ ಸಿಡಿಸಿದರೆ ತಪ್ಪೇನೂ ಇಲ್ಲ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಅಮೆರಿಕ 16ನೇ , ಚೀನಾ 25ನೇ ಸ್ಥಾನದಲ್ಲಿ ವಾತಾವರಣಕ್ಕೆ ಇಂಗಾಲ ಹೊರಸೂಸುವಿಕೆಯಲ್ಲಿ ಇದ್ದರೆ, ಭಾರತ ಇಂಗಾಲ ಹೊರಸೂಸುವಿಕೆಯಲ್ಲಿ 125ನೇ ಸ್ಥಾನದಲ್ಲಿದೆ. ಪಟಾಕಿ ಸಿಡಿಸುವುದು ನಮ್ಮ ಸಂಸ್ಕೃತಿ, ನಮ್ಮ ಜನರ ಜೀವನಾಧಾರವಾಗಿದೆ. ಹೀಗಾಗಿ ತಲೆಕೆಡಿಸಿಕೊಳ್ಳದೇ ಪಟಾಕಿ ಖರೀದಿ ಮಾಡಿ ಸಿಡಿಸಿರಿ ಎಂದು ಸಮರ್ಥಿಸಿಕೊಂಡಿದ್ದಾರೆ. ಪಟಾಕಿ ಸಿಡಿಸುವುದರಿಂದ ಪರಿಸರ, ಪಕ್ಷಿಗಳಿಗೂ ತೊಂದರೆ ಆಗುತ್ತದೆ ಎಂದು ಕೆಲವರು ಖಂಡಿಸಿದರೆ, ಕೆಲ ನೆಟ್ಟಿಗರು ಅಣ್ಣಾಮಲೈ ನಿಲುವಿಗೆ ಬೆಂಬಲಿಸುತ್ತಿದ್ದಾರೆ.

# ಶ್ವೇತ ಭವನದಲ್ಲಿ ದೀಪಾವಳಿ ಆಚರಣೆ

**ಅಮೆರಿಕ:** ಅಮೆರಿಕ ಅಧ್ಯಕ್ಷ ಜೋ ಬೈಡನ್ ಶ್ವೇತಭವನದಲ್ಲಿ ಸೋಮವಾರ ದೀಪಾವಳಿ ಆಚರಣೆ ಆಯೋಜಿಸಿದ್ದರು. ಕಾರ್ಯಕ್ರಮದಲ್ಲಿ ದೇಶದಲ್ಲಿನ ಕಾಂಗ್ರೆಸಿಗರು, ಅಧಿಕಾರಿಗಳು ಮತ್ತು ಕಾರ್ಪೊರೇಟ್ ಅಧಿಕಾರಿಗಳು ಸೇರಿದಂತೆ 600ಕ್ಕೂ ಹೆಚ್ಚು ಅನಿವಾಸಿ ಭಾರತೀಯರು ಬೆಳಕಿನ ಹಬ್ಬದಲ್ಲಿ ಭಾಗಿಯಾಗಿ ಸಂಭ್ರಮಿಸಿದರು.

ಸಂಪ್ರದಾಯದಂತೆ ಬೈಡನ್ ಭಾಷಣಕ್ಕೂ ಮುನ್ನ ಬ್ಲೂ ರೂಮ್ನಲ್ಲಿ ದೀಪವನ್ನು ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಬೈಡನ್, 'ಶ್ವೇತ ಭವನದಲ್ಲಿ ಅತಿದೊಡ್ಡ ದೀಪಾವಳಿ ಆಚರಣೆ ಆಯೋಜಿಸಿರುವುದಕ್ಕೆ ಹೆಮ್ಮೆಯಿದೆ' ಎಂದರು. ಇದೇ ವೇಳೆ, ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಿಂದ ನಾಸಾ ಗಗನಯಾತ್ರಿ ಮತ್ತು ನಿವೃತ್ತ ನೌಕಾಪಡೆಯ ಕ್ಯಾಪ್ಟನ್ ಸುನಿತಾ ವಿಲಿಯಮ್ಸ್ ಅವರ ವೀಡಿಯೊ ಸಂದೇಶವನ್ನು ಪ್ರಸ್ತುತಪಡಿಸಲಾಯಿತು. ಚುನಾವಣಾ ಪ್ರಚಾರದಲ್ಲಿ ನಿರತರಾಗಿರುವ ಕಾರಣ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಮತ್ತು ಪ್ರಥಮ ಮಹಿಳೆ ಡಾ. ಜಿಲ್ ಬೈಡನ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗಲಿಲ್ಲ.





## ಗಾಜಾದ ಮೇಲೆ ಮುಂದುವರೆದ ಇಸ್ರೇಲ್ ದಾಳಿ

**ಗಾಜಾ:** ಉತ್ತರ ಗಾಜಾದಲ್ಲಿ ಸ್ಥಳಾಂತರಗೊಂಡ ಪ್ಯಾಲೆಸ್ಟೀನಿಯನ್ನರು ಆಶ್ರಯ ಪಡೆದಿದ್ದ 5 ಅಂತಸ್ತಿನ ಕಟ್ಟಡದ ಮೇಲೆ ಇಸ್ರೇಲ್ ದಾಳಿ ನಡೆಸಿದ ಪರಿಣಾಮ 93ಕ್ಕೂ ಅಧಿಕ ಮಂದಿ ಸಾವನ್ನಪ್ಪಿದ್ದಾರೆ. 17 ಮಂದಿ ನಾಪತ್ತೆಯಾಗಿದ್ದಾರೆ ಎಂದು ಗಾಜಾ ಆರೋಗ್ಯ ಸಚಿವಾಲಯ ತಿಳಿಸಿದೆ. ವರ್ಷಕ್ಕೂ ಅಧಿಕ ಸಮಯದಿಂದ ನಡೆಯುತ್ತಿರುವ ಇಸ್ರೇಲ್ ಹಾಗೂ ಗಾಜಾ ಸಂಘರ್ಷದಲ್ಲಿ ಇದುವರೆಗೆ 43,000 ಮಂದಿ ಸಾವನ್ನಪ್ಪಿದ್ದಾರೆ. ಅಕ್ಟೋಬರ್ 7, 2023 ರಿಂದ ಗಾಜಾದ ಮೇಲೆ ಇಸ್ರೇಲಿ ಮಿಲಿಟರಿ ದಾಳಿಯಲ್ಲಿ ಕನಿಷ್ಠ 43,061 ಜನರು ಸಾವನ್ನಪ್ಪಿದ್ದಾರೆ ಮತ್ತು 101,223 ಜನರು ಗಾಯಗೊಂಡಿದ್ದಾರೆ ಎಂದು ಎನ್ಕ್ಲೇವ್ನ ಆರೋಗ್ಯ ಸಚಿವಾಲಯ ತಿಳಿಸಿದೆ. ಅವರಲ್ಲಿ, ಇತ್ತೀಚಿನ 24 ಗಂಟೆಗಳ ವರದಿ ಅವಧಿಯಲ್ಲಿ 41 ಪ್ಯಾಲೆಸ್ಟೀನಿಯಾದವರು ಕೊಲ್ಲಲ್ಪಟ್ಟರು ಮತ್ತು 113 ಮಂದಿ ಗಾಯಗೊಂಡಿದ್ದಾರೆ ಎಂದು ಸಚಿವಾಲಯ ಸೇರಿಸಲಾಗಿದೆ. ಉತ್ತರ ಗಾಜಾದ ಬೀಟ್ ಲಾಹಿಯಾದಲ್ಲಿನ ವಸತಿ ಕಟ್ಟಡದ ಮೇಲೆ ಇಸ್ರೇಲಿ ನಡೆಸಿದ ದಾಳಿಯಲ್ಲಿ 93 ಜನರು ಕೊಲ್ಲಲ್ಪಟ್ಟರು ಮತ್ತು 12ಕ್ಕೂ ಅಧಿಕ ಮಂದಿ ಗಾಯಗೊಂಡರು.





# ಆರೋಗ್ಯ ರಕ್ಷಣೆ ಯೋಜನೆಗೆ ಚಾಲನೆ ನೀಡಿದ ನರೇಂದ್ರ ಮೋದಿ





**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಆಯುಷ್ಮಾನ್ ಭಾರತ್ ಪ್ರಧಾನ್ ಮಂತ್ರಿ ಜನ ಆರೋಗ್ಯ ಯೋಜನೆ ಅಡಿಯಲ್ಲಿ 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಎಲ್ಲಾ ಹಿರಿಯ ನಾಗರಿಕರಿಗೆ ಆರೋಗ್ಯ ರಕ್ಷಣೆ ಯೋಜನೆಯನ್ನು ಬಿಡುಗಡೆ ಮಾಡಿದ್ದಾರೆ. ಈ ಯೋಜನೆಯ ಅಡಿಯಲ್ಲಿ ಆಯುಷ್ಮಾನ್ ಕಾರ್ಡ್ ಅನ್ನು ಪಡೆದುಕೊಳ್ಳುವವರು ಅಕ್ಟೋಬರ್ 29 ರಿಂದ ಯಾವುದೇ ಎಬಿ ಪಿಎಂಜೆಎವೈ ಎಂಪನೆಲ್ ಆಸ್ಪತ್ರೆಗಳಲ್ಲಿ 5 ಲಕ್ಷ ರೂ. ವರೆಗಿನ ಉಚಿತ ಚಿಕಿತ್ಸೆಯನ್ನು ಪಡೆಯಬಹುದು.

ವ್ಯಕ್ತಿಯ ಆಧಾರ್ ಕಾರ್ಡ್ನ ಪ್ರಕಾರ 70 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಎಲ್ಲಾ ನಾಗರಿಕರು ಆದಾಯದ ಸ್ಥಿತಿ ಏನೇ ಇದ್ದರೂ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆ ಅಡಿಯಲ್ಲಿ ಆರೋಗ್ಯ ರಕ್ಷಣೆಗೆ ಅರ್ಹರಾಗಿರುತ್ತಾರೆ. ಈ ಯೋಜನೆಯು ಸುಮಾರು 4.5 ಕೋಟಿ ಕುಟುಂಬಗಳಲ್ಲಿನ ಅಂದಾಜು ಆರು ಕೋಟಿ ನಾಗರಿಕರಿಗೆ ಪ್ರಯೋಜನವನ್ನು ನೀಡಲಿದೆ.

ದೆಹಲಿ, ಒಡಿಶಾ ಮತ್ತು ಪಶ್ಚಿಮ ಬಂಗಾಳವನ್ನು ಹೊರತುಪಡಿಸಿ ಪ್ರಸ್ತುತ 33 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ.

ಆರೋಗ್ಯ ರಕ್ಷಣೆಯನ್ನು ಯೋಜನೆಯ ಉಪಯೋಗ ಪಡೆಯಲು ಜನರು ಪಿಎಂಜೆಎವೈ ಪೋರ್ಟಲ್ನಲ್ಲಿ ಅಥವಾ ಆಯುಷ್ಮಾನ್ ಅಪ್ಲಿಕೇಶನ್ನಲ್ಲಿ ನೋಂದಾಯಿಸಿಕೊಳ್ಳಬೇಕು. ಈಗಾಗಲೇ ಆಯುಷ್ಮಾನ್ ಕಾರ್ಡ್ ಹೊಂದಿರುವವರು ಪೋರ್ಟಲ್ ಅಥವಾ ಆಯಪ್ನಲ್ಲಿ ಮತ್ತೊಮ್ಮೆ ಅರ್ಜಿ ಸಲ್ಲಿಸಬೇಕು ಮತ್ತು ಹೊಸ ಕಾರ್ಡ್ಗಾಗಿ ತಮ್ಮ ಇಕೆವೈಸಿ ಅನ್ನು ಪೂರ್ಣಗೊಳಿಸಬೇಕು.

## ಅಯೋಧ್ಯೆಯಲ್ಲಿ ದೀಪಗಳ ದಾಖಲೆ!

**ಅಯೋಧ್ಯೆ:** ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣವಾದ ಬಳಿಕ ಇದೇ ಮೊದಲ ಬಾರಿಗೆ ದೀಪಾವಳಿ ಹಬ್ಬವನ್ನು ಆಚರಿಸಲಾಗಿದ್ದು, ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿಯೂ ಈ ಬಾರಿ ದೀಪಾವಳಿ ಸಂಭ್ರಮ ಕಳೆಗಟ್ಟಲಿದೆ. ಹಬ್ಬದ ಪ್ರಯುಕ್ತ ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಉತ್ತರ ಪ್ರದೇಶ ಸರ್ಕಾರ ಅಯೋಧ್ಯೆಯ ಸರಯೂ ನದಿಯ ತಟದಲ್ಲಿ ಬರೋಬ್ಬರಿ 28 ಲಕ್ಷ ಪರಿಸರ ಸ್ನೇಹಿ ಹಣತೆಗಳಲ್ಲಿ ದೀಪ ಹಚ್ಚುವ ಮೂಲಕ ಹೊಸ ದಾಖಲೆ ಬರೆಯುವ ಗುರಿಯನ್ನು ಹೊಂದಿದೆ. ವಿಶೇಷ ಎಂದರೆ, ರಾಮಮಂದಿರದಲ್ಲಿ ದೀಪದ ಎಣ್ಣೆಯ ಕಲೆ ಹಾಗೂ ಮಸಿ ಬೀಳದಂತೆ ಪರಿಸರ ಸ್ನೇಹಿ ಮೇಣದ ದೀಪಗಳನ್ನು ಬಳಸಲಾಗಿದೆ. ಜೊತೆಗೆ ದೇವಸ್ಥಾನಕ್ಕೆ ಹಲವರು ರೀತಿಯ ಹೂವುಗಳಿಂದ ಅಲಂಕಾರ ಮಾಡಲಾಗುತ್ತಿದೆ ಎಂದು ಯುಪಿ ಸರ್ಕಾರ ತಿಳಿಸಿದೆ. ವಿಶೇಷ ಮೇಣದ ದೀಪಗಳು ಇಂಗಾಲ ದ ಡೈ ಆಕ್ಸೈಡ್ ಅನ್ನು ಕಡಿಮೆ ಪ್ರಮಾಣದಲ್ಲಿ ಹೊರಸೂಸುವುದರಿಂದ ಅದನ್ನು ಬಳಸಲಾಗಿದ್ದು, ಈ ಬಾರಿ ಪರಿಸರ ಸ್ನೇಹಿ ದೀಪಾವಳಿಯನ್ನು ಆಚರಿಸಲು ಸಕಲ ಸಿದ್ಧತೆಯನ್ನು ಮಾಡಿಕೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು. ಇನ್ನು ದೀಪಾವಳಿಯ ಪ್ರಯುಕ್ತ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ದೇವಸ್ಥಾನಕ್ಕೆ ಆಗಮಿಸುವ ಹಿನ್ನಲೆ ಅ.29 ರಿಂದ ನ.1 ರ ವರೆಗೆ ಮಧ್ಯರಾತ್ರಿಯ ವರೆಗೆ ತೆರೆದಿರುತ್ತದೆ ಎಂದು ಆಡಳಿತ ಮಂಡಳಿ ತಿಳಿಸಿದೆ.

## ಮುಸ್ಲಿಮರ ಜನಸಂಖ್ಯೆ ಹೆಚ್ಚಳ - ಅಸ್ಸಾಂ ಸಿಎಂ ಆರೋಪ



**ಜಾರ್ಖಂಡ್:** ಜಾರ್ಖಂಡ್ ನಲ್ಲಿ ಮುಸ್ಲಿಂ ಜನಸಂಖ್ಯೆ ಹೆಚ್ಚಾಗಿದ್ದು, ಬುಡಕಟ್ಟು ಜನರ ಸಂಖ್ಯೆ ಕ್ಷೀಣಿಸುತ್ತಿದೆ ಎಂದು ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ. ಜಾರ್ಖಂಡ್ ವಿಧಾನಸಭಾ ಎಲೆಕ್ಷನ್ ನ ಇನ್ ಚಾರ್ಜ್ ಆಗಿರೋ ಬಿಸ್ವಾ ಶರ್ಮಾ, ಎಲೆಕ್ಷನ್ ಗೂ ಮುನ್ನ ಈ ರೀತಿಯ ಹೇಳಿಕೆ ನೀಡಿರೋದು ದೊಡ್ಡ ಸಂಚಲನ ಸೃಷ್ಟಿಸಿದೆ. ಜಾರ್ಖಂಡ್ ಮೂಲ ನಿವಾಸಿಗಳು ಕಡಿಮೆಯಾಗ್ತಿದ್ದಾರೆ.

ಮುಸ್ಲೀಂ ಸಮುದಾಯದ ಹೊರಗಿನ ಮಂದಿ ಜಾರ್ಖಂಡ್ ಗೆ ನುಸುಳುತ್ತಿದ್ದಾರೆ. ಪರಿಣಾಮ ಬುಡಕಟ್ಟು ನಿವಾಸಿಗಳು ಕಡಿಮೆಯಾಗ್ತಿದ್ದು, ಇಸ್ಲಾಂ ಧರ್ಮದ ಜನಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ಜಾರ್ಖಂಡ್ ರಾಜ್ಯದ ಒಳಗೆ ನುಸುಳುತ್ತಿರುವ ಜನರಿಗೆ ಕಡಿವಾಣ ಹಾಕಬೇಕು. ಜಾರ್ಖಂಡ್ ಸರ್ವತೋಮುಖ ಅಭಿವೃದ್ಧಿಗೆ ಎಲ್ಲರೂ ಕೈ ಜೋಡಿಸಬೇಕು ಎಂದಿದ್ದಾರೆ.

## ಕ್ರೀಡಾ ಸ್ಪರ್ಧೆಗಳಲ್ಲಿ ಹಿಜಾಬ್ ಧರಿಸಲು ನಿಷೇಧ

**ಜೀನೆವಾ:** ಹಿಜಾಬ್ ಧರಿಸುವ ಮಹಿಳೆಯರು ಹಾಗೂ ಬಾಲಕಿಯರನ್ನು ಕ್ರೀಡಾ ಸ್ಪರ್ಧೆಗಳಲ್ಲಿ ನಿಷೇಧಿಸುವ ಫ್ರಾನ್ಸ್ ಸರಕಾರದ ನಿರ್ಧಾರವನ್ನು ವಿಶ್ವಸಂಸ್ಥೆಯ ಹಕ್ಕುಗಳ ತಜ್ಞರು ಸೋಮವಾರ ಬಲವಾಗಿ ಖಂಡಿಸಿದ್ದಾರೆ. ಇದೊಂದು ತಾರತಮ್ಯವಾದಿ ನೀತಿಯಾಗಿದ್ದು, ಅದನ್ನು ಹಿಂಪಡೆಯಬೇಕೆಂದು ಅವರು ಆಗ್ರಹಿಸಿದ್ದಾರೆ. ಹಿಜಾಬ್ ಸೇರಿದಂತೆ ಧಾರ್ಮಿಕ ಸಂಕೇತಗಳನ್ನು ಅಥ್ಲೀಟ್ಗಳನ್ನು ಧರಿಸುವುದನ್ನು ನಿಷೇಧಿಸುವ ಕಾನೂನುಗಳನ್ನು ಫ್ರಾನ್ಸ್ ಸರಕಾರವು 2024ರ ಒಲಿಂಪಿಕ್ ಕ್ರೀಡಾಕೂಟದ ಸಂದರ್ಭ ಜಾರಿಗೊಳಿಸಿತ್ತು. ಫ್ರಾನ್ಸ್ ನ



ಫುಟ್ಬಾಲ್ ಹಾಗೂ ಬಾಸ್ಕೆಟ್ ಬಾಲ್ ಕ್ರೀಡಾ ಫೆಡರೇಶನ್ಗಳು ಕೂಡಾ ಅಮೆಚೂರ್ ಮಟ್ಟದ ಕ್ರೀಡಾಕೂಟಗಳಲ್ಲಿ ಹಿಜಾಬ್ ಧರಿಸುವವರನ್ನು ಹೊರಗಿಡಲು ನಿರ್ಧರಿಸಿರುವುದಕ್ಕೆ ವಿಶ್ವಸಂಸ್ಥೆ ತಜ್ಞರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಈ ನಿರ್ಧಾರಗಳು ಅಸಮಾನತೆ ಹಾಗೂ ತಾರತಮ್ಯದಿಂದ ಕೂಡಿವೆ. ತಮ್ಮ ಗುರುತನ್ನು ತಮ್ಮ ಧರ್ಮವನ್ನು ಅಥವಾ ನಂಬಿಕೆಯನ್ನು ಖಾಸಗಿಯಾಗಿ ಅಥವಾ ಸಾರ್ವಜನಿಕವಾಗಿ ಸ್ವತಂತ್ರವಾಗಿ ವ್ಯಕ್ತಪಡಿಸಲು ಮತ್ತು ಸಾಂಸ್ಕೃತಿಕ ಬದುಕಿನಲ್ಲಿ ಪಾಲ್ಗೊಳ್ಳಲು ಇರುವ ಅಥ್ಲೀಟ್ ಗಳ ಹಕ್ಕುಗಳನ್ನು ಕಸಿಯುತ್ತದೆ ಎಂದು ವಿಶ್ವಸಂಸ್ಥೆಯ ಎಂಟು ಮಂದಿ ಸ್ವತಂತ್ರ ತಜ್ಞರು ಸಹಿ ಹಾಕಿದ ಹೇಳಿಕೆಯು ತಿಳಿಸಿದೆ. ಹಿಜಾಬ್ ಧರಿಸುವ ಮುಸ್ಲಿಂ ಮಹಿಳೆಯರು ಹಾಗೂ ಬಾಲಕಿಯರಿಗೆ ಸಾಂಸ್ಕೃತಿಕ ಹಾಗೂ ಕ್ರೀಡಾ ಬದುಕಿನಲ್ಲಿ ಪಾಲ್ಗೊಳ್ಳಲು ಸಮಾನ ಹಕ್ಕುಗಳಿವೆ. ಸಾಂಸ್ಕೃತಿಕ ಹಾಗೂ ಅಲ್ಪಸಂಖ್ಯಾತ ವಿಷಯಗಳ ಕುರಿತ ವಿಶ್ವಸಂಸ್ಥೆಯ ವಿಶೇಷ ವರದಿಗಾರರು ಈ ಹೇಳಿಕೆಗೆ ಸಹಿಹಾಕಿದ್ದಾರೆ. ಮಹಿಳೆಯರು ಮತ್ತು ಬಾಲಕಿಯರ ವಿರುದ್ಧದ ತಾರತಮ್ಯ ತಡೆ ಕುರಿತ ವಿಶ್ವಸಂಸ್ಥೆಯ ಕಾರ್ಯಸಮಿತಿಯ ಸದಸ್ಯರೂ ಈ ಹೇಳಿಕೆಗೆ ಸಹಿ ಹಾಕಿದ್ದಾರೆ.

## ವಿಮಾನಯಾನ ಸಂಸ್ಥೆಗಳಿಗೆ ಬಾಂಬ್ ಬೆದರಿಕೆ: ಆರೋಪಿ ಸೆರೆ

**ಮುಂಬೈ:** ವಿಮಾನಯಾನ ಸಂಸ್ಥೆಗಳು ಮತ್ತು ಹೋಟೆಲ್‌ಗಳಿಗೆ ನಕಲಿ ಬಾಂಬ್ ಬೆದರಿಕೆಗಳ ಹಿಂದೆ ಇದ್ದ ಆರೋಪಿಯನ್ನು ನಾಗ್ಪುರ ಪೊಲೀಸರು ಬಂಧಿಸಿದ್ದಾರೆ.ಬಂಧಿತ ಆರೋಪಿಯನ್ನು ಮಹಾರಾಷ್ಟ್ರದ ಗೊಂಡಿಯಾ ಮೂಲದ ಜಗದೀಶ್ ಉಯ್ಕೆ (35) ಎಂದು ಗುರುತಿಸಲಾಗಿದೆ. ಆತ ವಿಮಾನಗಳಿಗೆ ಬಾಂಬ್ ಬೆದರಿಕೆ ಪ್ರಕರಣ ಹಿಂದೆ ಇದ್ದಾನೆ. ಆತ ಹಿಂದೆ ಭಯೋತ್ಪಾದನೆಯ ಬಗ್ಗೆ ಪುಸ್ತಕ ಬರೆದಿದ್ದ. ಅಲ್ಲದೇ 2021 ರಲ್ಲಿ ಪ್ರಕರಣ ಒಂದರಲ್ಲಿ ಬಂಧನಕ್ಕೊಳಗಾಗಿದ್ದ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ನಕಲಿ ಇಮೇಲ್‌ಗಳು ಪತ್ತೆಯಾದ ನಂತರ ಅವನನ್ನು ಗುರುತಿಸಲಾಗಿದೆ. ತನಿಖೆ ಬಳಿಕ ಇಮೇಲ್‌ಗಳಿಗೆ ಇಂಗ್ಲೆಂಡ್‌ನ ಲಿಂಕ್ ಮಾಡುವ ಮಾಹಿತಿ ಲಭ್ಯವಾಗಿತ್ತು. ಆತ ಪ್ರಧಾನ ಮಂತ್ರಿಗಳ ಕಚೇರಿ, ರೈಲ್ವೆ ಸಚಿವರು, ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ, ವಿಮಾನಯಾನ ಕಚೇರಿಗಳು, ಪೊಲೀಸ್ ಮಹಾನಿರ್ದೇಶಕರು ಮತ್ತು ರೈಲ್ವೆ ರಕ್ಷಣಾ ಪಡೆ ಸೇರಿದಂತೆ ವಿವಿಧ ಸರ್ಕಾರಿ ಸಂಸ್ಥೆಗಳಿಗೆ ಇಮೇಲ್ ಕಳುಹಿಸಿದ್ದಾನೆ ಎಂದು ತನಿಖೆ ವೇಳೆ ತಿಳಿದು ಬಂದಿದೆ. ಭಾರತದ ವಿಮಾನಯಾನ ಉದ್ಯಮಕ್ಕೆ ಪ್ರಕ್ಷುಬ್ಧತೆ ತರುವಂತೆ ಅ.13ರ ವರೆಗೆ ಭಾರತದಿಂದ ಕಾರ್ಯ ನಿರ್ವಹಿಸುವ 300 ಕ್ಕೂ ಹೆಚ್ಚು ವಿಮಾನಗಳಿಗೆ ಬೆದರಿಕೆಗಳು ಬಂದಿವೆ. ಅಕ್ಟೋಬರ್ 22 ರಂದು ಇಂಡಿಗೋ ಮತ್ತು ಏರ್ ಇಂಡಿಯಾದ ತಲಾ 13 ವಿಮಾನಗಳು ಸೇರಿದಂತೆ ಸುಮಾರು 50 ವಿಮಾನಗಳಿಗೆ ಬಾಂಬ್ ಬೆದರಿಕೆಗಳು ಬಂದಿದ್ದವು. ಅ.26 ರಂದು, ಕೇಂದ್ರ ಸರ್ಕಾರ ಎಲ್ಲಾ ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್‌ಗಳಿಗೆ ಮಾಹಿತಿ ತಂತ್ರಜ್ಞಾನ (ಐಟಿ) ನಿಯಮಗಳು ಮತ್ತು ಭಾರತೀಯ ನ್ಯಾಯ ಸಂಹಿತಾ (ಬಿಎನ್ ಎಸ್) ನಿಬಂಧನೆಗಳನ್ನು ಅನುಸರಿಸಲು ಸೂಚಿಸಿತ್ತು. ಬಾಂಬ್ ಬೆದರಿಕೆ ಪೋಸ್ಟ್‌ಗಳನ್ನು ತೆಗೆದುಹಾಕಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವಂತೆ ಆದೇಶಿಸಿತ್ತು.

# ಬಾಂಗ್ಲಾ ಮಾಜಿ ಅಧ್ಯಕ್ಷೆಯ ಮನೆ ಈಗ ಮ್ಯೂಸಿಯಂ



**ಬಾಂಗ್ಲಾದೇಶ:** ಬಾಂಗ್ಲಾದೇಶ ಮಾಜಿ ಪ್ರಧಾನಿ ಶೇಕ್ ಹಸೀನಾ ಮತ್ತೆ ಸುದ್ದಿಯಲಿದ್ದಾರೆ. ಅವರ ಭವ್ಯ ಬಂಗಲೆ ಇದೀಗ ಮ್ಯೂಸಿಯಂ ಆಗಿ ಮಾರ್ಪಾಡಾಗುತ್ತಿದೆ.

ಎರಡು ದಶಕಗಳ ಕಾಲ ಬಾಂಗ್ಲಾ ಮಾಜಿ ಪ್ರಧಾನಿ ಆಗಿದ್ದ ಶೇಕ್ ಹಸೀನಾ ಆಕರ್ಷಕ ಉದ್ಯಾನವನಗಳಿಂದ ಸುತ್ತುವರಿದ ವೈಭವೋಪೇತ ಬಂಗಲೆಯಲ್ಲಿ ವಾಸವಿದ್ದರು.

ಢಾಕಾ ನಗರದ ಹೃದಯ ಭಾಗದ 3600 ಚದರ ಮೀಟರ್ ವಿಶಾಲ ಬಂಗಲೆಯನ್ನು ರಾಣಿ ಎಲಿಜಬೆತ್-2 ಅವರ ವಾಸಕ್ಕಾಗಿ ಮೊದಲು ನಿರ್ಮಿಸಲಾಗಿತ್ತು. ಹಸೀನಾ ಇದೇ ಬಂಗಲೆಯಲ್ಲಿ ವರ್ಣರಂಜಿತ ಜೀವನ ನಡೆಸಿದ್ದರು. ಈಗ ಇದೇ ಬಂಗಲೆ ಮ್ಯೂಸಿಯಂ ಆಗಿ ನವೀಕರಣಗೊಳ್ಳುತ್ತಿದೆ.

ಆಗಸ್ಟ್ 5ರಂದು ವಿದ್ಯಾರ್ಥಿ ಪ್ರತಿಭಟನೆ ಹಿನ್ನೆಲೆಯಲ್ಲಿ ನಡೆದ ವ್ಯಾಪಕ ಹಿಂಸಾಚಾರದ ಸಂದರ್ಭದಲ್ಲಿ ಶೇಕ್ ಹಸೀನಾ ಅವರನ್ನು ಪದಚ್ಯುತಗೊಳಿಸಲಾಗಿತ್ತು ಹಾಗೂ ಭಾರತಕ್ಕೆ ಅವರು ಪಲಾಯನವಾಗಿದ್ದರು. ಉತ್ತರ ಪ್ರದೇಶದ ಹಿಂಡಾನ್ ವಾಯುನೆಲೆಯ ಬಳಿ ಸುರಕ್ಷಿತ ಸ್ಥಳದಲ್ಲಿ ಅವರನ್ನು ಇರಿಸಲಾಗಿತ್ತು.

# ಆಫ್ರಿಕಾದ ಚಾಡ್ ದೇಶದಲ್ಲಿ ಉಗ್ರರ ದಾಳಿ: 40 ಸೈನಿಕರು ಸಾವು



**ಆಫ್ರಿಕಾ:** ಆಫ್ರಿಕಾ ಖಂಡದ ಉತ್ತರ ಭಾಗದ ದೇಶವಾದ ಚಾಡ್ನಲ್ಲಿ ಬೋಕೊ ಹರಾಮ್ ಮೇಲೆ ಉಗ್ರರು ನಡೆಸಿದ ದಾಳಿಯಲ್ಲಿ ಚಾಡ್ ಸೇನೆಯ 40 ಸೈನಿಕರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ನ್ಯೂಗೌಬೋವಾ ಹೆಸರಿನ ಸೇನಾ ನೆಲೆಯ ಮೇಲೆ ಸೋಮವಾರ ನಸುಕಿನ ಜಾವ ಉಗ್ರರು ಏಕಾಏಕಿ ಮನಸೋ ಇಚ್ಛೆ ಗುಂಡಿನ ದಾಳಿ ನಡೆಸಿದ್ದಾರೆ.

ಘಟನೆಯಲ್ಲಿ ಯುನಿಟ್ ಕಮಾಂಡರ್ ಸೇರಿದಂತೆ ಸೈನಿಕರು ಮೃತಪಟ್ಟಿದ್ದಾರೆ ಎಂದು ಚಾಡ್ ಸೇನಾ ವಕ್ತಾರರು ತಿಳಿಸಿದ್ದಾರೆ. ಘಟನೆ ಬಗ್ಗೆ ಚಾಡ್ ಅಧ್ಯಕ್ಷ ಮಹಮತ್ ಇಡ್ರಿಸ್ ಡೆಬಿ ಇಟ್ನೊ ಆಘಾತ ವ್ಯಕ್ತಪಡಿಸಿದ್ದಾರೆ.

ನಮ್ಮ ಮೇಲೆ ದಾಳಿ ಮಾಡಿದ ಉಗ್ರರನ್ನು ಪ್ರತಿ ದಾಳಿ ಮಾಡಿ ಹತ್ಯೆ ಮಾಡಿದ್ದೇವೆ. ಸ್ಥಳದಲ್ಲಿ ಪರಿಸ್ಥಿತಿ ಸಹಜ ಸ್ಥಿತಿಗೆ ಬಂದಿದೆ' ಎಂದು ಅವರು ತಿಳಿಸಿದ್ದಾರೆ.

ಪಕ್ಕದ ನೈಜೀರಿಯಾ ಜೊತೆ ಗಡಿ ಸಂಘರ್ಷ ಹೊಂದಿರುವ ಚಾಡ್ ಮೇಲೆ ನೈಜಿರಿಯಾ ಮೂಲದ ಬೋಕೊ ಹರಾಮ್ ಉಗ್ರರೂ ಸಹ ಕೆಂಗೆಣ್ಣು ಬೀರಿದ್ದಾರೆ.

# ಬಿಹಾರ ಸರ್ಕಾರದಿಂದ ಹೂಡಿಕೆದಾರರ ಸಭೆ




**ಬೆಂಗಳೂರು:** ಬಿಹಾರ ಸರ್ಕಾರವು ಬೆಂಗಳೂರಿನಲ್ಲಿ ವಿಶೇಷ ವ್ಯಾಪಾರ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಿತ್ತು. ಇದು ಹೂಡಿಕೆಯನ್ನು ಆಕರ್ಷಿಸುವ ಮತ್ತು ಕೈಗಾರಿಕಾ ಬೆಳವಣಿಗೆಯನ್ನು ಉತ್ತೇಜಿಸುವ ಮಹತ್ವಾಕಾಂಕ್ಷೆಯ ಪ್ರಯತ್ನಗಳಲ್ಲಿ ಮಹತ್ವದ ಹೆಜ್ಜೆಯಾಗಿದೆ. ಐಟಿ, ಜವಳಿ, ಆಹಾರ ಸಂಸ್ಕರಣೆ ಮತ್ತು ಸಾಮಾನ್ಯ ಉತ್ಪಾದನೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಬಿಹಾರದ ವ್ಯಾಪಕ ಸಾಮರ್ಥ್ಯವನ್ನು ಪ್ರದರ್ಶಿಸುವ ಗುರಿಯನ್ನು ಹೊಂದಿದ ಬಹು ನಿರೀಕ್ಷಿತ ಬಿಹಾರ ಬಿಸಿನೆಸ್ ಕನೆಕ್ಟ್ 2024 - ಜಾಗತಿಕ ಹೂಡಿಕೆದಾರರ ಶೃಂಗಸಭೆಯ ಪೂರ್ವಭಾವಿಯಾಗಿ ಈ ಸಮಾವೇಶ ನಡೆಯಿತು.

'ಬಿಹಾರದ ಅವಕಾಶಗಳ ಅನಾವರಣ: ಹೂಡಿಕೆದಾರರ ಶೃಂಗಸಭೆ' ಎಂಬ ಶೀರ್ಷಿಕೆಯಡಿ ನಡೆದ ಹೂಡಿಕೆದಾರರ ಸಭೆಯು ಉದಯೋನ್ಮುಖ ಅವಕಾಶಗಳು, ಕಾರ್ಯತಂತ್ರದ ಮೂಲಸೌಕರ್ಯ ಯೋಜನೆಗಳು ಮತ್ತು ಹೂಡಿಕೆದಾರರಿಗೆ ಬಿಹಾರವನ್ನು ಪ್ರಮುಖ ತಾಣವನ್ನಾಗಿ ಮಾಡುವ ಆಕರ್ಷಕ ನೀತಿಗಳನ್ನು ಪ್ರಸ್ತುತಪಡಿಸುವ ಗುರಿಯನ್ನು ಹೊಂದಿದೆ. ಪ್ರಮುಖ ಸರ್ಕಾರಿ ಅಧಿಕಾರಿಗಳು ಹೂಡಿಕೆದಾರರೊಂದಿಗೆ ಬಿಹಾರದಲ್ಲಿ ಹೂಡಿಕೆ ಮಾಡುವುದರಿಂದ ಆಗುವ ಅಪಾರ ಪ್ರಯೋಜನಗಳ ಕುರಿತು ಚರ್ಚಿಸಿದರು.ಹೂಡಿಕೆದಾರರ ಸಭೆಯು ಬಿಹಾರವನ್ನು ಅದರ ಆಯಕಟ್ಟಿನ ಸ್ಥಳ, ವರ್ಧಿತ ಸಂಪರ್ಕ ಮತ್ತು ಬೆಳವಣಿಗೆಯ ಪರ ನೀತಿಗಳ ಮೂಲಕ ಕೈಗಾರಿಕಾ ಶಕ್ತಿ ಕೇಂದ್ರವಾಗಿ ಪರಿವರ್ತಿಸುವ ಸರ್ಕಾರದ ನಿರಂತರ ಪ್ರಯತ್ನಗಳ ಮೇಲೆ ಕೇಂದ್ರೀಕರಿಸಿದೆ. ದೆಹಲಿ-ಮುಂಬೈ ಕೈಗಾರಿಕಾ ಕಾರಿಡಾರ್ (ಡಿಎಂಐಸಿ) ಮತ್ತು ಅಮೃತಸರ-ಕೋಲ್ಕತ್ತಾ ಇಂಡಸ್ಟ್ರಿಯಲ್ ಕಾರಿಡಾರ್ (ಎಕೆಐಸಿ) ನಂತಹ ಕೈಗಾರಿಕಾ ಕಾರಿಡಾರ್ಗಳ ಅಭಿವೃದ್ಧಿಯೊಂದಿಗೆ, ಬಿಹಾರವು ಗಣನೀಯ ಹೂಡಿಕೆಗಳನ್ನು ಆಕರ್ಷಿಸಲು ಪ್ರಶಸ್ತ ಸ್ಥಾನದಲ್ಲಿದೆ.

ಕೈಗಾರಿಕೆಗಳ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ಬಂದಾನ ಪ್ರೇಯಸಿ ಮಾತನಾಡಿ, ಇತ್ತೀಚಿನ ವರ್ಷಗಳಲ್ಲಿ ಬಿಹಾರವು ಗಮನಾರ್ಹವಾದ ಪರಿವರ್ತನೆಗೆ ಒಳಗಾಗಿದೆ. ನಮ್ಮ ರಾಜ್ಯವು ವಿವಿಧ ಕೈಗಾರಿಕೆಗಳಲ್ಲಿ ಬೆಳವಣಿಗೆಗೆ ಅಪಾರ ಅವಕಾಶಗಳನ್ನು ನೀಡುತ್ತದೆ ಮತ್ತು ಹೂಡಿಕೆದಾರರಿಗೆ ಬಿಹಾರವನ್ನು ಆಕರ್ಷಕ ತಾಣವನ್ನಾಗಿ ಮಾಡಲು ನಾವು ಬದ್ಧವಾಗಿದೆ. ಮೂಲಸೌಕರ್ಯ ಅಭಿವೃದ್ಧಿಯಿಂದ ವ್ಯಾಪಾರ-ಸ್ನೇಹಿ ವಾತಾವರಣವನ್ನು ಬೆಳೆಸುವವರೆಗೆ, ಹೂಡಿಕೆ ಪ್ರಕ್ರಿಯೆಯ ಪ್ರತಿಯೊಂದು ಹಂತವನ್ನು ಸುಗಮಗೊಳಿಸಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದರು.ಬೆಂಗಳೂರಿನ ಸಮಾವೇಶವು ಹೂಡಿಕೆದಾರರು ಮತ್ತು ಉದ್ಯಮದ ಪ್ರಮುಖರಿಗೆ ಬಿಹಾರದ ವೈವಿಧ್ಯಮಯ ಆರ್ಥಿಕ ಸಾಮರ್ಥ್ಯವನ್ನು ಅನ್ವೇಷಿಸಲು ವೇದಿಕೆಯನ್ನು ಒದಗಿಸಿತು. ಐಟಿ, ಜವಳಿ; ಆಹಾರ ಸಂಸ್ಕರಣೆ; ಸಾಮಾನ್ಯ ಉತ್ಪಾದನೆ ವಿಸ್ತರಿಸಲು ಬಯಸುವ ಕಂಪನಿಗಳಿಗೆ ಸಾಕಷ್ಟು ಅವಕಾಶಗಳನ್ನು ಒದಗಿಸುವುದರೊಂದಿಗೆ ಪ್ರಸ್ತುತ ಬೆಂಗಳೂರು, ಹೈದರಾಬಾದ್ ಮತ್ತು ಚೆನ್ನೈನಲ್ಲಿ ಕೆಲಸ ಮಾಡುತ್ತಿರುವ ಬಿಹಾರದ ಅನೇಕ ಐಟಿ ವೃತ್ತಿಪರರು ತಮ್ಮ ಸ್ವಂತ ರಾಜ್ಯಕ್ಕೆ ಮರಳಲು ಬಯಸುತ್ತಿದ್ದೇವೆ ಎಂದರು.

# ಕಮಲಾಗೆ ಶಾಕ್: ಟ್ರಂಪ್ ಪರ ಅನಿವಾಸಿ ಭಾರತೀಯರ ಒಲವು ಏರಿಕೆ



**ವಾಷಿಂಗ್ಟನ್:** ಅಮೆರಿಕ ಚುನಾವಣೆಗೆ ದಿನಗಣನೆ ಆರಂಭವಾಗುತ್ತಿದ್ದಂತೆ ಕಮಲಾ ಹ್ಯಾರಿಸ್‌ಗೆ ಅನಿವಾಸಿ ಭಾರತೀಯರು ಶಾಕ್ ನೀಡುವ ಸಾಧ್ಯತೆ ಹೆಚ್ಚಿದೆ.

ಹೌದು. ಅನಿವಾಸಿ ಭಾರತೀಯರು ಹೆಚ್ಚಿನ ಸಂಖ್ಯೆಯಲ್ಲಿ ಡೆಮಾಕ್ರಟಿಕ್ ಪಕ್ಷವನ್ನು ಬೆಂಬಲಿಸುತ್ತಾ ಬಂದಿದ್ದಾರೆ. ಆದರೆ ಈ ಬಾರಿ ಅನಿವಾಸಿ ಭಾರತೀಯರ ಒಲವು ರಿಪಬ್ಲಿಕನ್ ಪಕ್ಷದ ಕಡೆಗೆ ವಾಲಿದೆ. ಹೀಗಿದ್ದರೂ ಒಟ್ಟಾರೆ ಡೆಮಾಕ್ರಟಿಕ್ ಪಕ್ಷದ ಕಮಲಾ ಹ್ಯಾರಿಸ್‌ಗೆ ಮತ ಹಾಕುವುದಾಗಿ ತಿಳಿಸಿದ್ದಾರೆ.

ಭಾರತೀಯ ಅಮೆರಿಕರನ್ನು ಗುರಿಯಾಗಿಸಿ ಕಾರ್ನೆಗೀ ಎಂಡೋಮೆಂಟ್ ಫಾರ್ ಇಂಟರ್‌ನ್ಯಾಷನಲ್ ಪೀಸ್' ಸಂಸ್ಥೆ ನಡೆಸಿದ ಆನ್‌ಲೈನ್ ಸಮೀಕ್ಷೆಯಲ್ಲಿ 61%ರಷ್ಟು ಮಂದಿ ಡೆಮಾಕ್ರಟಿಕ್ ಪಕ್ಷಕ್ಕೆ ಬೆಂಬಲ ನೀಡಿದರೆ 32% ಜನರು ರಿಪಬ್ಲಿಕನ್ ಪಕ್ಷದ ಪರ ಒಲವು ತೋರಿದ್ದಾರೆ.

2020ರ ಅಧ್ಯಕ್ಷೀಯ ಚುನಾವಣೆಯಲ್ಲಿ ಈ ಎರಡೂ ಪಕ್ಷಗಳ ಕಡೆಗೆ ಭಾರತೀಯರು ಚಲಾಯಿಸಿದ್ದ ಮತಗಳನ್ನು ಲೆಕ್ಕ ಹಾಕಿದಾಗ ಈ ಬಾರಿ ಕಮಲಾ ಹ್ಯಾರಿಸ್ ಪಕ್ಷದ ಪರ ಒಲವು ಸ್ವಲ್ಪ ಇಳಿದಿದ್ದು, ಟ್ರಂಪ್ ಪರ ಹೆಚ್ಚು ಮತಗಳು ಬೀಳಬಹುದು ಎಂದು ಸಮೀಕ್ಷೆ ತಿಳಿಸಿದೆ. ಸೆಪ್ಟೆಂಬರ್ 18ರಿಂದ ಅಕ್ಟೋಬರ್ 15ರ ನಡುವೆ 714 ಅನಿವಾಸಿ ಭಾರತೀಯರು ಆನ್‌ಲೈನ್ ಸಮೀಕ್ಷೆಯಲ್ಲಿ ಭಾಗಿಯಾಗಿದ್ದರು.ಅಮೆರಿಕದಲ್ಲಿ ಭಾರತ ಮೂಲದ 52 ಲಕ್ಷ ಜನ ವಾಸವಾಗಿದ್ದು, ಈ ಪೈಕಿ 39 ಲಕ್ಷ ಜನರು 18 ವರ್ಷಕ್ಕಿಂತ ಮೇಲ್ಪಟ್ಟವರಾಗಿದ್ದಾರೆ. ಅನಿವಾಸಿ ಭಾರತೀಯರು ಅಮೆರಿಕದಲ್ಲಿ ನೆಲೆಸಿರುವ ಎರಡನೇ ಅತಿ ದೊಡ್ಡ ವಲಸಿಗರ ಗುಂಪಿಗೆ ಸೇರಿದ್ದಾರೆ.

ನವೆಂಬರ್ 5 ರಂದು ನಡೆಯಲಿರುವ ಅಧ್ಯಕ್ಷೀಯ ಚುನಾವಣೆಯಲ್ಲಿ 96% ರಷ್ಟು ಅನಿವಾಸಿ ಭಾರತೀಯರು ಮತ ಚಲಾಯಿಸುವುದಾಗಿ ತಿಳಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಆಪ್ತರಲ್ಲೇ ಕಿತ್ತಾಟ

## ಬಿಗ್ ಬಾಸ್ ಮನೆಯಲ್ಲಿ ಮಂಜು – ಮೋಕ್ಷಿತಾ



ಉಗ್ರಂ ಮಂಜು ಅವರು ಬಿಗ್ ಬಾಸ್ ಮನೆಯಲ್ಲಿ ತಾವು ಹೇಳಿದ್ದೇ ರೂಲ್ಸ್ ಎಂಬ ರೀತಿಯಲ್ಲಿ ಆಡುತ್ತಿದ್ದಾರೆ. ಅವರ ಆಟಕ್ಕೆ ಎಲ್ಲ ಕಡೆಗಳಿಂದ ಟೀಕೆ ವ್ಯಕ್ತವಾಗಿದೆ. ಅಕ್ಟೋಬರ್ 29ರ ಎಪಿಸೋಡ್ ನಲ್ಲಿ ನಡೆದ ಕ್ಯಾಪ್ಟನ್ಸಿ ಟಾಸ್ಕ್ ನಲ್ಲೂ ಅವರು ಕೆಟ್ಟ ಆಟ ಆಡಿ ಔಟ್ ಆಗಿದ್ದಾರೆ. ನ್ಯಾಯಯುತವಾಗಿ ಆಡಿದ ಹನುಮಂತ ಅವರು ಕ್ಯಾಪ್ಟನ್ ಆಗಿದ್ದಾರೆ. ಅವರಿಗೆ ಎಲ್ಲ ಕಡೆಗಳಿಂದ ಮೆಚ್ಚುಗೆ ಸಿಗುತ್ತಿದೆ. ಈ ಮಧ್ಯೆ ಮಂಜು ಹಾಗೂ ಮೋಕ್ಷಿತಾ ಮಧ್ಯೆ ಕಿತ್ತಾಟ ಶುರುವಾಗಿದೆ.

ಕ್ಯಾಪ್ಟನ್ ಆಗಲು ಒಂದು ಟಾಸ್ಕ್ ನೀಡಲಾಗಿತ್ತು. ಇದರ ಅನುಸಾರ ಒಂದು ಬಲೆ ಆಕಾರದ ವೇದಿಕೆ ಸಿದ್ಧಪಡಿಸಲಾಗಿತ್ತು. ಒಳಗೆ ಬಾಕ್ಸ್ ನಲ್ಲಿ ವಿವಿಧ ಸ್ಪರ್ಧಿಯ ಫೋಟೋ ಇಡಲಾಗಿತ್ತು. ಪ್ರತಿ ಸ್ಪರ್ಧಿ ಬೇರೆಯವರ ಫೋಟೋನ ಹೊರಕ್ಕೆ ತರಬೇಕು. ಅಂತಿಮವಾಗಿ ಯಾರ ಫೋಟೋ ಇರುತ್ತದೆಯೋ ಅವರು ಆಟದಿಂದ ಹೊರಕ್ಕೆ ಇರುತ್ತಾರೆ.

ಈ ವೇಳೆ ಮಂಜು ಒಂದು ಪ್ಲ್ಯಾನ್ ಮಾಡಿದರು. ತಮ್ಮ ಗ್ಯಾಂಗ್ ನ ಎಲ್ಲರನ್ನೂ ಸೇರಿಸಿದರು. ಈ ವೇಳೆ ಗ್ಯಾಂಗ್ ನವರ ಬಳಿ ಒಪ್ಪಂದವನ್ನೂ ಮಾಡಿಕೊಂಡರು. ತಮ್ಮ ಗುಂಪಿನವರನ್ನು ಬಿಟ್ಟು ಬೇರೆಯವರನ್ನು ಆಯ್ಕೆ ಮಾಡಬೇಕು ಎಂದು ಅವರು ಡೀಲ್ ಮಾಡಿಕೊಂಡರು. ಆ ಬಳಿಕ ಆಟದಲ್ಲಿ ಎಲ್ಲರ ವಿರುದ್ಧ ಅವರು ತಿರುಗಿ ಬಿದ್ದರು. ಉಸ್ತುವಾರಿ ಹೇಳಿದ ಮಾತನ್ನು ಮೀರಿ ನಡೆದುಕೊಂಡರು. ಅವರು ಉದ್ದೇಶ ಪೂರ್ವಕವಾಗಿ ಪೌಲ್ ಕೂಡ ಮಾಡಿದರು. ಹೀಗಾಗಿ ಅವರನ್ನು ಆಟದಿಂದ ಹೊರಕ್ಕೆ ಇಡಲಾಯಿತು.

ಈ ವೇಳೆ ಮಂಜುಗೆ ಕ್ಲೋಸ್ ಎನಿಸಿಕೊಂಡಿರುವ ಮೋಕ್ಷಿತಾ ಅವರು ಬುದ್ಧಿವಾದ ಹೇಳಲು ಬಂದರು. ಇದರಿಂದ ಸಿಟ್ಟಿಗೆದ್ದ ಮಂಜು, 'ನಿಮಗೆ ಸಂಬಂಧವೇ ಇಲ್ಲ ಈ ವಿಚಾರ. ದಯವಿಟ್ಟು ಈ ವಿಚಾರಕ್ಕೆ ಬರಬೇಡ' ಎಂದು ಆವಾಜ್ ಹಾಕಿದರು. ಆ ಬಳಿಕ ಇಬ್ಬರ ಮಧ್ಯೆ ಮಾತಿನ ಚಕಮಕಿ ನಡೆದಿದೆ.

ಇತ್ತ ಹನುಮಂತ ಯಾವುದೇ ಒಪ್ಪಂದ ಮಾಡಿಕೊಳ್ಳದೆ ತಮ್ಮ ಪಾಡಿಗೆ ತಾವು ಆಡುತ್ತಾ ಬಂದರು. ಕೊನೆಯಲ್ಲಿ ಅವರು ಕ್ಯಾಪ್ಟನ್ ಆದರು. ಉಸ್ತುವಾರಿ ವಹಿಸಿಕೊಂಡಿದ್ದ ತ್ರಿವಿಕ್ರಂ ಕೂಡ ಇದೇ ಮಾತನ್ನು ಹೇಳಿದರು. 'ನ್ಯಾಯಯುತವಾಗಿ ಆಡಿದ ವ್ಯಕ್ತಿ ಅಲ್ಲಿದ್ದಾನೆ (ಕ್ಯಾಪ್ಟನ್ ರೂಂನಲ್ಲಿ)' ಎಂದರು.

# ಯಶ್ 'ಟಾಕ್ಸಿಕ್' ಸಿನಿಮಾಗಾಗಿ ಮರ ಕಡಿದ ಆರೋಪ





ಯಶ್ ನಟನೆಯ 'ಟಾಕ್ಸಿಕ್' ಸಿನಿಮಾ ಸೆಟ್‌ಗಾಗಿ ನೂರಾರು ಮರಗಳನ್ನು ನಾಶ ಮಾಡಿರುವ ಆರೋಪ ಕೇಳಿ ಬಂದಿದೆ. ಆರೋಪದ ಬೆನ್ನಲ್ಲೇ ಸ್ಥಳ ಪರಿಶೀಲನೆ ನಡೆಸಿರುವ ಅರಣ್ಯ ಸಚಿವ ಈಶ್ವರ್ ಖಂಡ್ರೆ



ಅವರು ನಿರ್ದಾಕ್ಷಿಣ್ಯ ಕ್ರಮದ ಎಚ್ಚರಿಕೆ ನೀಡಿದ್ದಾರೆ. ಈ ಬೆನ್ನಲ್ಲೇ ಚಿತ್ರತಂಡದ ವಿರುದ್ಧ ಅರಣ್ಯ ಅಪರಾಧ ಪ್ರಕರಣ ದಾಖಲಿಸುವ ಕುರಿತು ಚಿಂತನೆಯೂ ನಡೆದಿದೆ.

ಹೆಚ್.ಎಂ.ಟಿ. ವಶದಲ್ಲಿರುವ ಅರಣ್ಯ ಭೂಮಿಯಲ್ಲಿ 'ಟಾಕ್ಸಿಕ್' ಚಲನಚಿತ್ರದ ಚಿತ್ರೀಕರಣಕ್ಕಾಗಿ ನೂರಾರು ಮರಗಳನ್ನು ಅಕ್ರಮವಾಗಿ ಕಡಿದು ಹಾನಿಗೊಳಿಸಲಾಗಿದೆ ಎಂಬ ಆರೋಪವನ್ನು ಖುದ್ದು ಅರಣ್ಯ ಸಚಿವರೇ ಮಾಡಿದ್ದಾರೆ. ಈ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಈಶ್ವರ್ ಖಂಡ್ರೆ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್‌ವೊಂದನ್ನ ಹಂಚಿಕೊಂಡಿದ್ದಾರೆ. ಸ್ಯಾಟಲೈಟ್ ಫೋಟೋಗಳನ್ನ ಪಡೆದು ಪರಿಶೀಲಿಸುತ್ತಿರುವ ಸಚಿವರು, ಚಿತ್ರೀಕರಣ ಸೆಟ್ ಹಾಕಿದ್ದ ಸ್ಥಳಕ್ಕೂ



ಭೇಟಿ ನೀಡಿ ಪರಿಶೀಲಿಸಿದ್ದಾರೆ. ಸಚಿವರ ಆರೋಪಕ್ಕೆ ಚಿತ್ರತಂಡವೂ ಸ್ಪಷ್ಟನೆ ಕೊಟ್ಟಿದೆ. ಸೆಟ್ ಹಾಕಲು ಅನುಮತಿ ಕರಾರು ಪತ್ರಕ್ಕೆ ಸಹಿ ಹಾಕೋಕೂ ಮುನ್ನ ತೆಗೆದ ಸ್ಯಾಟಲೈಟ್ ಪಿಕ್ಚರ್ ನಮ್ಮ ಬಳಿಯೂ ಇದೆ. 2022ರಲ್ಲೇ ದಾಖಲಾದ ಸ್ಯಾಟಲೈಟ್ ಫೋಟೋ ಸಾಕ್ಷ್ಯ ಇದೆ ಎಂದು ಹೇಳಿದೆ ಎಂಬಂಥ ತನಿಖೆ ಮುಂದುವರಿದಿದೆ.

### ಅರಣ್ಯ ಭೂಮಿ ನಾಶ ಆರೋಪಕ್ಕೆ ಟಾಕ್ಸಿಕ್ ಟೀಮ್ ಹೇಳೋದೇನು?

- ಸೆಟ್ ಹಾಕಲು ಅನುಮತಿ ಕರಾರು ಪತ್ರಕ್ಕೆ ಸಹಿ ಹಾಕೋಕೂ ಮುನ್ನ ತೆಗೆದ ಸ್ಯಾಟಲೈಟ್ ಪಿಕ್ಚರ್ ನಮ್ಮ ಬಳಿಯೂ ಇದೆ
- 2022 ರಲ್ಲೇ ದಾಖಲಾದ ಸ್ಯಾಟಲೈಟ್ ಫೋಟೋ ಸಾಕ್ಷ್ಯ ಇದೆ
- ಯಾವುದೇ ಪರಿಸರ ನಾಶ ಮಾಡಿಲ್ಲ
- ಖಾಲಿ ಇದ್ದ ಜಾಗವನ್ನೇ ಬಳಸಿಕೊಂಡು ಸೆಟ್ ನಿರ್ಮಾಣ ಮಾಡಿದ್ದೇವೆ
- ಸೆಟ್ ಹಾಕೋದಕ್ಕೂ ಮುನ್ನ ಅಲ್ಲಿನ ಚಿತ್ರಣದ ದಾಖಲೆ ಇದೆ ಎಂದು ಹೇಳಿದೆ.

### ಟಾಕ್ಸಿಕ್ ತಂಡದ ಮೇಲೆ ಸಚಿವರ ಆರೋಪವೇನು?

- ಟಾಕ್ಸಿಕ್ ಚಿತ್ರೀಕರಣದ ಸೆಟ್ ಹಾಕಲು ಅರಣ್ಯ ಭೂಮಿ ನಾಶ ಮಾಡಲಾಗಿದೆ
- ಸೆಟ್ ಪೂರ್ವದ ಹಾಗೂ ಸೆಟ್ ಬಳಿಕ ಹಾಕಿರುವ ಸ್ಯಾಟಲೈಟ್ ಫೋಟೋ ಇದೆ
- ಚಿತ್ರೀಕರಣಕ್ಕಾಗಿ ಅಪಾರ ಪ್ರಮಾಣದಲ್ಲಿ ಅರಣ್ಯ ಪ್ರದೇಶ ಅಕ್ರಮವಾಗಿ ಬಳಕೆ ಮಾಡಿಕೊಳ್ಳಲಾಗಿದೆ
- 2023ರಲ್ಲಿ ಅಲ್ಲಿ ಪ್ರದೇಶ ಅರಣ್ಯ ಒಳಗೊಂಡಿತ್ತು
- 2024 ರಿಂದ ಟಾಕ್ಸಿಕ್ ಚಿತ್ರೀಕರಣಕ್ಕಾಗಿ ಸೆಟ್ ಕಾರ್ಯ ಪ್ರಾರಂಭವಾದ ಬಳಿಕ ಅರಣ್ಯ ಪ್ರದೇಶ ನಾಶವಾಗಿದೆ
- ಚಿತ್ರತಂಡದ ವಿರುದ್ಧ ಅರಣ್ಯ ಅಪರಾಧ ಪ್ರಕರಣ ದಾಖಲಿಸುವ ಕುರಿತು ಚಿಂತನೆ

# ಅರ್ಜುನ್ ಗುರೂಜಿ ಆಶೀರ್ವಾದ ಪಡೆದ ಅಭಿಮನ್ಯು!



ಅಭಿಮನ್ಯು ಕಾಶಿನಾಥ್ ಅಭಿನಯದ 'ಎಲ್ಲಿಗೆ ಪಯಣ ಯಾವುದೋ ದಾರಿ' ಪ್ರೇಕ್ಷಕರಿಂದ ಮೆಚ್ಚುಗೆ ಪಡೆದುಕೊಂಡಿದೆ. ಯಶಸ್ವಿ ಪ್ರದರ್ಶನ ಕಾಣುತ್ತಿರುವ ಖುಷಿ ಚಿತ್ರತಂಡದಲ್ಲಿದೆ. ಇದೇ ಹೊತ್ತಿನಲ್ಲಿ ಅಭಿಮನ್ಯು ಕಾಶಿನಾಥ್ ಚಿತ್ರತಂಡದೊಂದಿಗೆ ಮೈಸೂರಿನ ಅವಧೂತ ಅರ್ಜುನ್ ಗುರೂಜಿಯನ್ನು ಭೇಟಿಯಾಗಿದ್ದಾರೆ. ಅವರಿಂದ ಆಶೀರ್ವಾದ ಪಡೆದುಕೊಂಡಿದ್ದಾರೆ. ಅರ್ಜುನ್ ಗುರೂಜಿ ಅಭಿಮನ್ಯು ಸೇರಿದಂತೆ ಇಡೀ ಚಿತ್ರತಂಡಕ್ಕೆ ಒಳಿತಾಗಲಿ, ಈ ಸಿನಿಮಾ ಇನ್ನಷ್ಟು ಯಶಸ್ಸು ಕಾಣಲೆಂದು ಆಶೀರ್ವಾದ ಮಾಡಿದ್ದಾರೆ.

ಅವಧೂತ ಅರ್ಜುನ್ ಗುರೂಜಿ ಅವರ ನಿವಾಸಕ್ಕೆ ಚಿತ್ರತಂಡದೊಂದಿಗೆ ತೆರಳಿದ್ದ ಅಭಿಮನ್ಯು ಅವರು ತಮ್ಮ ತಂದೆ ಕಾಶಿನಾಥ್ ಅವರ ಹೆಸರು ಅಜರಾಮರವಾಗಲೆಂದು ಬೇಡಿಕೊಂಡಿದ್ದಾರೆ. ನಂತರ ಆಶೀರ್ವಾದ ನೀಡಿದ ಅವಧೂತ ಅರ್ಜುನ್ ಗುರೂಜಿ ಈ ಸಿನಿಮಾ ಸಂಪೂರ್ಣವಾಗಿ ಯಶಸ್ಸು ಗಳಿಸಲೆಂದು ಹಾರೈಸುತ್ತಲೇ, ಯುವ ನಟ ಅಭಿಮನ್ಯು ಕಾಶಿನಾಥ್ ತಮ್ಮ ಸಿನಿಮಾಗಳ ಮೂಲಕ ಯುವ ಜನತೆಗೆ ಉತ್ತಮ ಸಂದೇಶಗಳನ್ನು ದಾಟಿಸವಂತೆ ಆಗಲಿ ಎಂದು ಹರಸಿದ್ದಾರೆ. ಈ ಸಂದರ್ಭದಲ್ಲಿ ನಾಯಕ ನಟ ಅಭಿಮನ್ಯು ಅವರೊಂದಿಗೆ ನಾಯಕಿ ಸ್ಫೂರ್ತಿ ಉಡಿಮನೆ, ನಿರ್ದೇಶಕ ಕಿರಣ್ ಎಸ್ ಸೂರ್ಯ ಮತ್ತು ಚಿತ್ರತಂಡ ಭಾಗಿಯಾಗಿತ್ತು.

ಸೂಕ್ಷ್ಮ ಕಥೆ ಒಳಗೊಂಡಿರುವ 'ಎಲ್ಲಿಗೆ ಪಯಣ ಯಾವುದೋ ದಾರಿ' ಚಿತ್ರ ದಿನದಿಂದ ದಿನಕ್ಕೆ ಉತ್ತಮ ಪ್ರದರ್ಶನ ನೀಡುತ್ತಿದೆ. ನಾಯಕ ಅಭಿಮನ್ಯು ಕಾಶಿನಾಥ್ ಈ ಸಿನಿಮಾವನ್ನು ಮತ್ತಷ್ಟು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಚಿತ್ರತಂಡದೊಂದಿಗೆ ಸಕ್ರಿಯರಾಗಿದ್ದಾರೆ. ಇದರ ನಡುವಲ್ಲಿಯೇ ಅವಧೂತ ಅರ್ಜುನ್ ಗುರೂಜಿಯನ್ನು ಭೇಟಿಯಾಗುವ ಮೂಲಕ ಆಧ್ಯಾತ್ಮಿಕ ಅನುಭೂತಿಯೊಂದಿಗೆ ಮತ್ತಷ್ಟು ಹುರುಪು ತುಂಬಿಕೊಂಡಿದ್ದಾರೆ.

ಕಥೆ, ಚಿತ್ರಕಥೆ ಮತ್ತು ಸಂಭಾಷಣೆಯೊಂದಿಗೆ ಕಿರಣ್ ಎಸ್. ಸೂರ್ಯ ನಿರ್ದೇಶನ ಮಾಡಿದ್ದಾರೆ. ಅಭಿಮನ್ಯು ಕಾಶಿನಾಥ್ ಅವರಿಗೆ ಸ್ಫೂರ್ತಿ ಉಡಿಮನೆ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ವಿಜಯಶ್ರೀ ಕಲಬುರ್ಗಿ ಪ್ರಧಾನ ಪಾತ್ರದಲ್ಲಿ ನಟಿಸಿದ್ದಾರೆ. ಬಲ ರಾಜವಾಡಿ, ಶೋಭನ್, ಅಯಾಂಕ್, ರಿನಿ ಬೋಪಣ್ಣ, ಪ್ರದೀಪ್, ರವಿತೇಜ, ಕಿಶೋರ್, ಅಶ್ವಿನಿ ರಾವ್, ಪ್ರಿಯಾ ಮುಂತಾದವರ ತಾರಾಗಣವಿದೆ. ಪ್ರಣವ್ ರಾವ್ ಸಂಗೀತ ನಿರ್ದೇಶನ, ಸತ್ಯ ರಾಮ್ ಛಾಯಾಗ್ರಹಣವಿರುವ ಈ ಚಿತ್ರಕ್ಕೆ ಪ್ರಮೋದ್ ಮರವಂತೆ ಸಾಹಿತ್ಯವಿದೆ.

# ವಿಶ್ವ ಚಾಂಪಿಯನ್ ಕಿವೀಸ್‌ಗೆ ತಿರುಗೇಟು ನೀಡಿ ಏಕದಿನ ಸರಣಿ ಗೆದ್ದ ಭಾರತ



ಭಾರತ ಪುರುಷರ ತಂಡ ನ್ಯೂಜಿಲೆಂಡ್ ವಿರುದ್ಧ ಟೆಸ್ಟ್ ಸರಣಿಯನ್ನು ಕಳೆದುಕೊಂಡಿರಬಹುದು. ಆದರೆ ಭಾರತ ಮಹಿಳಾ ತಂಡ ಇದಕ್ಕೆ ಅವಕಾಶ ನೀಡಲಿಲ್ಲ. ನ್ಯೂಜಿಲೆಂಡ್ ವಿರುದ್ಧದ ಏಕದಿನ ಸರಣಿಯ ಮೂರನೇ ಹಾಗೂ ನಿರ್ಣಾಯಕ ಪಂದ್ಯದಲ್ಲಿ ಟೀಂ ಇಂಡಿಯಾ 6 ವಿಕೆಟ್ ಗಳಿಂದ ನ್ಯೂಜಿಲೆಂಡ್ ತಂಡವನ್ನು ಸೋಲಿಸಿದೆ. ಇದರೊಂದಿಗೆ ಭಾರತ ತಂಡ 3 ಪಂದ್ಯಗಳ ಸರಣಿಯನ್ನು 2-1 ಅಂತರದಲ್ಲಿ ಗೆದ್ದುಕೊಂಡಿದೆ. ತಂಡದ ಉಪನಾಯಕಿ ಮತ್ತು ಅನುಭವಿ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ ಅವರ ಶತಕದ ಜೊತೆಯಾಟ ತಂಡವನ್ನು ಗೆಲುವಿನ ದಡ ಮುಟ್ಟಿಸಿತು. ಇದರಲ್ಲಿ ಸ್ಮೃತಿ ಮಂಧಾನ ತಮ್ಮ ಏಕದಿನ ವೃತ್ತಿಜೀವನದ ದಾಖಲೆಯ 8 ನೇ ಶತಕ ಸಿಡಿಸಿದರೆ, ಅದೇ ಸಮಯದಲ್ಲಿ ನಾಯಕಿ ಹರ್ಮನ್‌ಪ್ರೀತ್ ಕೌರ್ ಕೂಡ ಅತ್ಯುತ್ತಮ ಅರ್ಧಶತಕ ಬಾರಿಸುವ ಮೂಲಕ ತಂಡವನ್ನು ಗೆಲುವಿನತ್ತ ಮುನ್ನಡೆಸಿದರು.

**ಕೈಕೊಟ್ಟ ಸೋಫಿ ಡಿವೈನ್:** ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆದ ಈ ಸರಣಿಯ ಕೊನೆಯ ಪಂದ್ಯದಲ್ಲಿ ನ್ಯೂಜಿಲೆಂಡ್ ಮೊದಲು ಬ್ಯಾಟ್ ಮಾಡಿ 49.5 ಓವರ್‌ಗಳಲ್ಲಿ ಕೇವಲ 232 ರನ್ ಗಳಿಸಲಷ್ಟೇ ಶಕ್ತವಾಯಿತು. ಕಿವೀಸ್ ಗೆ ಆರಂಭಿಕ ಆಘಾತ ಎದುರಾಗಿದ್ದೆ ಈ ಅಲ್ಪ ರನ್ ಕಲೆಹಾಕಲು ಕಾರಣವಾಯಿತು. ಒಂದು ಹಂತದಲ್ಲಿ ಕಿವೀಸ್ ತಂಡ 88 ರನ್‌ಗಳಿಗೆ ಪ್ರಮುಖ 5 ವಿಕೆಟ್ ಕಳೆದುಕೊಂಡಿದ್ದು, ಆರಂಭಿಕ ಹಿನ್ನಡೆಯನ್ನುಂಟು ಮಾಡಿತು. ಪ್ರಮುಖ ಬ್ಯಾಟರ್‌ಗಳಾ ಸುಜಿ ಬೇಟ್ಸ್ ಮತ್ತು ನಾಯಕಿ ಸೋಫಿ ಡಿವೈನ್ ಬೇಗನೆ ಔಟಾದರೆ, ಜಾರ್ಜಿಯಾ ಪ್ಲಿಮ್ಮರ್ (39) ಅವರ ಇನ್ನಿಂಗ್ಸ್ ಕೂಡ ತುಂಬಾ ದೊಡ್ಡದಾಗಿರಲಿಲ್ಲ.

**ಬೌಲಿಂಗ್‌ನಲ್ಲಿ ದೀಪ್ತಿ, ಪ್ರಿಯಾ ಕಮಾಲ್:** ಇಂತಹ ಪರಿಸ್ಥಿತಿಯಲ್ಲಿ ಬ್ರೂಕ್ ಹ್ಯಾಲಿಡೇ ಜವಾಬ್ದಾರಿ ವಹಿಸಿ ಭಾರತದ ಬೌಲರ್‌ಗಳನ್ನು ದಿಟ್ಟತನದಿಂದ ಎದುರಿಸಿದರು. ಆದಾಗ್ಯೂ ತಮ್ಮ ಶತಕದಿಂದ ವಂಚಿತರಾದ ಹ್ಯಾಲಿಡೆ 86 ರನ್ (96 ಎಸೆತ, 9 ಬೌಂಡರಿ, 3 ಸಿಕ್ಸರ್) ಗಳಿಸಿ ಔಟಾದರು. ನಂತರ ಅಲ್ಪ ಕಾಣಿಕೆ ನೀಡುವಲ್ಲಿ ಯಶಸ್ವಿಯಾದ ತಂಡದ ಕೆಳ ಕ್ರಮಾಂಕ ತಂಡವನ್ನು 232 ರನ್‌ಗಳಿಗೆ ಕೊಂಡೊಯ್ಯುವಲ್ಲಿ ಯಶಸ್ವಿಯಾಯಿತು. ಕಳೆದ ಪಂದ್ಯದಲ್ಲಿ ತನ್ನ ಕಳಪೆ ಫೀಲ್ಡಿಂಗ್‌ನಿಂದ ನ್ಯೂಜಿಲೆಂಡ್ ನ ಗೆಲುವಿನ ಹಾದಿಯನ್ನು ಸುಲಭಗೊಳಿಸಿದ್ದ ಭಾರತ ತಂಡವು ಈ ಪಂದ್ಯದಲ್ಲಿ ತನ್ನ ತಪ್ಪನ್ನು ತಿದ್ದಿಕೊಂಡಿದಲ್ಲದೆ ಪ್ರತಿಯೊಂದು ಕ್ಯಾಚ್‌ಗಳನ್ನು ಹಿಡಿಯುವಲ್ಲಿ ಯಶಸ್ವಿಯಾಯಿತು. ಜೊತೆಗೆ 2 ರನ್ ಔಟ್ ಮಾಡಿದ್ದು ಸಹ ವಿಶೇಷವಾಗಿತ್ತು. ತಂಡದ ಪರ ದೀಪ್ತಿ ಶರ್ಮಾ 3 ವಿಕೆಟ್ ಹಾಗೂ ಯುವ ಸ್ಪಿನ್ನರ್ ಪ್ರಿಯಾ ಮಿಶ್ರಾ 2 ವಿಕೆಟ್ ಪಡೆದರು.

**ಭಾರತಕ್ಕೆ ಮತ್ತೆ ಕಳಪೆ ಆರಂಭ:** ಈ ಗುರಿ ಬೆನ್ನಟ್ಟಿದ ಟೀಂ ಇಂಡಿಯಾ ಮತ್ತೊಮ್ಮೆ ಕೆಟ್ಟ ಆರಂಭವನ್ನು ಪಡೆದಿಕೊಂಡತು. ಶೆಫಾಲಿ ವರ್ಮಾ ನಾಲ್ಕನೇ ಓವರ್‌ನಲ್ಲಿಯೇ ಔಟಾದರು. ಟಿ20 ವಿಶ್ವಕಪ್ ಹಾಗೂ ಕೊನೆಯ ಎರಡು ಏಕದಿನ ಪಂದ್ಯಗಳಲ್ಲಿ ವೈಫಲ್ಯ ಕಂಡಿದ್ದ ಸ್ಮೃತಿ ಈ ಬಾರಿ ಎಚ್ಚರಿಕೆಯ ಆಟವಾಡಿ ಕ್ರೀಸ್?ನಲ್ಲಿ ಗಟ್ಟಿಯಾಗಿ ನೆಲೆಯೂರಿದರು ಅವರಿಗೆ ಯಾಸ್ತಿಕಾ ಭಾಟಿಯಾ ಅವರಿಂದ ಉತ್ತಮ ಬೆಂಬಲ ಸಿಕ್ಕಿತು. ಈ ಇಬ್ಬರೂ ಎರಡನೇ ವಿಕೆಟ್‌ಗೆ 76 ರನ್ ಗಳ ಬಲವಾದ ಜೊತೆಯಾಟವನ್ನು ಮಾಡುವ ಮೂಲಕ ಪರಿಸ್ಥಿತಿಯನ್ನು ನಿಭಾಯಿಸಿದರು. ಈ ಜೊತೆಯಾಟದಲ್ಲಿ ಸ್ಮೃತಿ ಅರ್ಧಶತಕವನ್ನೂ ಪೂರೈಸಿದರು.

**ಗೆಲುವಿನ ಶತಕ ಸಿಡಿಸಿದ ಸ್ಮೃತಿ:** ಇದಾದ ಬಳಿಕ ಕ್ರೀಸ್‌ಗೆ ಬಂದ ನಾಯಕಿ ಹರ್ಮನ್‌ಪ್ರೀತ್ ಕೌರ್, ಉಪನಾಯಕಿ ಮಂಧಾನ ಜತೆಗೂಡಿ ತಂಡದ ಗೆಲುವನ್ನು ಖಚಿತಪಡಿಸಿದರು. ಇವರಿಬ್ಬರ ನಡುವೆ ಮೂರನೇ ವಿಕೆಟ್‌ಗೆ 117 ರನ್‌ಗಳ ಜೊತೆಯಾಟವಿತ್ತು. ಇದು ಸ್ಮೃತಿ ಅವರ ಏಕದಿನ ವೃತ್ತಿಜೀವನದ 8ನೇ ಶತಕವಾಗಿದ್ದು, ಇದರೊಂದಿಗೆ ಅವರು ಭಾರತದ ಪರ ಹೆಚ್ಚು ಶತಕಗಳನ್ನು ಬಾರಿಸಿದ್ದ ಮಾಜಿ ನಾಯಕಿ ಮಿಥಾಲಿ ರಾಜ್ ಅವರ ದಾಖಲೆಯನ್ನು ಮುರಿದರು.

# ಟೋನಿ ಟನ್ ದಾಖಲೆ ಸೆಂಚುರಿ ಸಿಡಿಸಿದ ಝೋರ್ಝಿ



ಚಟ್ಟೋಗ್ರಾಮ್‌ನಲ್ಲಿ ನಡೆಯುತ್ತಿರುವ ಬಾಂಗ್ಲಾದೇಶ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಸೌತ್ ಆಫ್ರಿಕಾ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದೆ. ಈ ಪಂದ್ಯದಲ್ಲಿ ಆರಂಭಿಕರಾಗಿ ಕಣಕ್ಕಿಳಿದ ಟೋನಿ ಡಿ ಝೋರ್ಝಿ ಭರ್ಜರಿ ಶತಕ ಸಿಡಿಸುವ ಮೂಲಕ ವಿಶೇಷ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ಜಹುರ್ ಅಹ್ಮದ್ ಚೌಧರಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಈ ಪಂದ್ಯದಲ್ಲಿ ಟಾಸ್ ಗೆದ್ದ ಸೌತ್ ಆಫ್ರಿಕಾ ತಂಡವು ಬ್ಯಾಟಿಂಗ್ ಆಯ್ದುಕೊಂಡಿತು. ಅದರಂತೆ ಇನಿಂಗ್ಸ್ ಆರಂಭಿಸಿದ ಟೋನಿ ಡಿ ಝೋರ್ಝಿ ಹಾಗೂ ಏಡೆನ್ ಮಾರ್ಕ್ರಾಮ್ ಮೊದಲ ವಿಕೆಟ್‌ಗೆ 69 ರನ್ ಗಳ ಜೊತೆಯಾಟವಾಡಿದರು. ಈ ಹಂತದಲ್ಲಿ ಮಾರ್ಕ್ರಾಮ್ (33) ವಿಕೆಟ್ ಒಪ್ಪಿಸಿದರು.

ಇದಾಗ್ಯೂ ಆಕರ್ಷಕ ಬ್ಯಾಟಿಂಗ್ ಮುಂದುವರೆಸಿದ ಟೋನಿ ಡಿ ಝೋರ್ಝಿ ಬಾಂಗ್ಲಾ ಬೌಲರ್‌ಗಳನ್ನು ಮನಸೋ ಇಚ್ಛೆ ದಂಡಿಸಿದರು. ಈ ಮೂಲಕ ಕೇವಲ 146 ಎಸೆತಗಳಲ್ಲಿ ಶತಕ ಪೂರೈಸಿದರು. ಇದರೊಂದಿಗೆ ಬಾಂಗ್ಲಾದೇಶ್ ವಿರುದ್ಧ ಶತಕ ಬಾರಿಸಿದ ಸೌತ್ ಆಫ್ರಿಕಾದ ಮೂರನೇ ಆರಂಭಿಕ ಆಟಗಾರ ಎಂಬ ಹೆಗ್ಗಳಿಕೆ ಪಾತ್ರರಾದರು.

ಇದಕ್ಕೂ ಮುನ್ನ ಸೌತ್ ಆಫ್ರಿಕಾ ತಂಡದ ಮಾಜಿ ಆರಂಭಿಕರಾದ ಗ್ರೇಮ್ ಸ್ಮಿತ್ ಹಾಗೂ ನೀಲ್ ಮೆಕೆಂಝಿ ಮಾತ್ರ ಬಾಂಗ್ಲಾದೇಶ್ ವಿರುದ್ಧ ಸೆಂಚುರಿ ಸಿಡಿಸಿದ್ದರು. ಇದೀಗ ಬರೋಬ್ಬರಿ 16 ವರ್ಷಗಳ ಬಳಿಕ ಸೌತ್ ಆಫ್ರಿಕಾ ತಂಡದ ಆರಂಭಿಕರೊಬ್ಬರು ಬಾಂಗ್ಲಾದೇಶ್ ವಿರುದ್ಧ ಟೆಸ್ಟ್‌ನಲ್ಲಿ ಶತಕ ಸಿಡಿಸಿದ್ದಾರೆ. ಈ ಮೂಲಕ ಟೋನಿ ಝೋರ್ಝಿ ವಿಶೇಷ ಸಾಧನೆ ಮಾಡಿದ್ದಾರೆ.

ಇನ್ನು ಟೋನಿ ಡಿ ಝೋರ್ಝಿಗೆ ಉತ್ತಮ ಸಾಥ್ ನೀಡಿದ ಟ್ರಿಸ್ಟನ್ ಸ್ಟಬ್ಸ್ ಕೂಡ ಸೆಂಚುರಿ ಸಿಡಿಸಿದರು. 198 ಎಸೆತಗಳನ್ನು ಎದುರಿಸಿದ ಸ್ಟಬ್ಸ್ 106 ರನ್ ಬಾರಿಸಿ ಔಟಾದರು. ಮತ್ತೊಂದೆಡೆ ಕ್ರೀಸ್ ಕಚ್ಚಿ ನಿಂತ ಟೋನಿ ಡಿ ಝೋರ್ಝಿ 211 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 10 ಫೋರ್‌ಗಳೊಂದಿಗೆ ಅಜೇಯ 141 ರನ್ ಗಳಿಸಿದ್ದಾರೆ. ಈ ಅಜೇಯ ಶತಕದೊಂದಿಗೆ ಮೊದಲ ದಿನದಾಟದ ಮುಕ್ತಾಯದ ವೇಳೆಗೆ ಸೌತ್ ಆಫ್ರಿಕಾ ತಂಡವು 2 ವಿಕೆಟ್ ಕಳೆದುಕೊಂಡು 307 ರನ್ ಕಲೆಹಾಕಿದೆ.

## ದರ್ಶನ್‌ಗೆ ದೀಪಾವಳಿ ಉಡುಗೊರೆ

# ಷರತ್ತುಬದ್ಧ ಮಧ್ಯಂತರ ಜಾಮೀನು



**ಬೆಂಗಳೂರು:** ರೇಣುಕಾ ಸ್ವಾಮಿ ಕೊಲೆ ಆರೋಪದ ಮೇಲೆ ಕಳೆದ ಸುಮಾರು ಐದು ತಿಂಗಳಿಂದಲೂ ಜೈಲಿನಲ್ಲಿ ದಿನ ದೂಡುತ್ತಿದ್ದ ನಟ ದರ್ಶನ್‌ಗೆ ದೀಪಾವಳಿ ಶುಭ ತಂದಿದೆ. ದರ್ಶನ್ ಗೆ ಕರ್ನಾಟಕ ಹೈಕೋರ್ಟ್ ಮಧ್ಯಂತರ ಜಾಮೀನು ಮಂಜೂರು ಮಾಡಿದೆ. ದರ್ಶನ್ ರ ಆರೋಗ್ಯ ಸಮಸ್ಯೆಯನ್ನು ಪರಿಗಣನೆಗೆ ತೆಗೆದುಕೊಂಡು ಆರು ವಾರಗಳ ಅವಧಿಯ ಮಧ್ಯಂತರ ಜಾಮೀನು ನೀಡಲಾಗಿದ್ದು, ಮಧ್ಯಂತರ ಜಾಮೀನಿಗೆ ಸಾಕಷ್ಟು ಷರತ್ತುಗಳನ್ನು ಮಾನ್ಯ ನ್ಯಾಯಾಲಯ ವಿಧಿಸಿದೆ.

ಈ ಹಿಂದೆ ಕೆಳಹಂತದ ನ್ಯಾಯಾಲಯದಲ್ಲಿ ಸಲ್ಲಿಸಲಾಗಿದ್ದ ದರ್ಶನ್ ರ ಜಾಮೀನು ಅರ್ಜಿ ತಿರಸ್ಕೃತಗೊಂಡಿತ್ತು. ಬಳಿಕ ದರ್ಶನ್ ಪರ ವಕೀಲರಾದ ಸಿವಿ ನಾಗೇಶ್ ಹೈಕೋರ್ಟ್ ನಲ್ಲಿ ಅರ್ಜಿ ಹಾಕಿದ್ದರು. ಆದರೆ ಹೈಕೋರ್ಟ್ ನಲ್ಲಿ ದರ್ಶನ್ ಆರೋಗ್ಯ ಸಮಸ್ಯೆಯನ್ನು ಪ್ರಮುಖ ಕಾರಣವಾಗಿ ಪರಿಗಣಿಸಿ ಜಾಮೀನು ನೀಡುವಂತೆ ಮನವಿ ಮಾಡಲಾಗಿತ್ತು. ದರ್ಶನ್ ಗೆ ತೀವ್ರ ಬೆನ್ನುನೋವಿನ ಸಮಸ್ಯೆ ಇದ್ದು, ಅವರಿಗೆ ಶಸ್ತ್ರಚಿಕಿತ್ಸೆಯ ಅವಶ್ಯಕತೆ ಇದೆ. ಒಂದೊಮ್ಮೆ ಚಿಕಿತ್ಸೆ ತಡವಾದರೆ ಅವರು ಪಾರ್ಶ್ವವಾಯುವಿಗೆ ಈಡಾಗುವ ಆತಂಕ ಇದೆ ಎಂದು ವೈದ್ಯರು ನೀಡಿದ್ದ ವರದಿಯನ್ನು ದರ್ಶನ್ ಪರ ವಕೀಲರು ನ್ಯಾಯಾಲಯಕ್ಕೆ ಸಲ್ಲಿಸಿದ್ದರು.

ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಪ್ರಸನ್ನ ಕುಮಾರ್ ಅವರು, ದರ್ಶನ್ ರ ಆರೋಗ್ಯ ಸಮಸ್ಯೆಯ ಕುರಿತು ವರದಿ ನೀಡಲು ಮೆಡಿಕಲ್ ಬೋರ್ಡ್ ಸ್ಥಾಪನೆ ಮಾಡಬೇಕೆಂಬ ವಾದವನ್ನು ನ್ಯಾಯಾಲಯದ ಮುಂದೆ ಮಂಡಿಸಿದ್ದರು. ಅಲ್ಲದೆ ಈಗ ಸಲ್ಲಿಸಲಾಗಿರುವ ವೈದ್ಯ ವರದಿಯಲ್ಲಿ ದರ್ಶನ್ ಗೆ ಆಗಬೇಕಿರುವ ಶಸ್ತ್ರಚಿಕಿತ್ಸೆ, ಗುಣವಾಗಲು ತೆಗೆದುಕೊಳ್ಳುವ ಸಮಯ ನಿಖರವಾಗಿಲ್ಲವೆಂದು ವಾದಿಸಿದ್ದರು.

ಎರಡೂ ಕಡೆಯ ವಾದ ಆಲಿಸಿದ ನ್ಯಾಯಮೂರ್ತಿ ವಿಶ್ವೇಶ್ವರ ಭಟ್ ಅವರು, 'ವೈದ್ಯಕೀಯ ಚಿಕಿತ್ಸೆ ವಿಚಾರಣಾಧೀನ ಕೈದಿಯ ಹಕ್ಕು' ಎಂದು ಉಲ್ಲೇಖಿಸಿ ಇದೀಗ ಷರತ್ತುಬದ್ಧ ಮಧ್ಯಂತರ ಜಾಮೀನು ಮಂಜೂರು ಮಾಡಿದ್ದಾರೆ. ಆದರೆ ಆರು ವಾರಗಳ ಮಧ್ಯಂತರ ಜಾಮೀನು ಇದಾಗಿದ್ದು, ಚಿಕಿತ್ಸೆ ಕಾರಣಕ್ಕಾಗಿ ಜಾಮೀನು ನೀಡಲಾಗಿದೆ. ದರ್ಶನ್ ಗೆ ಹೆಚ್ಚಿನ ಷರತ್ತುಗಳನ್ನೇನೂ ನ್ಯಾಯಾಧೀಶರು ವಿಧಿಸಿಲ್ಲ. ಎಸ್ ಪಿಪಿ ಮನವಿ ಮೇರೆಗೆ ಪಾಸ್ ಪೋರ್ಟ್ ವಶಕ್ಕೆ ನೀಡುವಂತೆ ಸೂಚಿಸಲಾಗಿದೆ. ಇದರ ಜೊತೆಗೆ ದರ್ಶನ್ ಇಚ್ಛಿಸಿದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಬಹುದಾಗಿದೆ. ಒಂದು ವಾರದ ಒಳಗಾಗಿ ನ್ಯಾಯಾಲಯಕ್ಕೆ ಚಿಕಿತ್ಸೆಯ ವಿವರಗಳನ್ನು ಸಲ್ಲಿಸಬೇಕಿದೆ.

## ಬಿಜೆಪಿ ಶಾಸಕರಿರುವ ಜಯನಗರಕ್ಕೆ ಖಾಲಿ

# ಬೆಂಗಳೂರಿನ ಎಲ್ಲ ವಿಧಾನಸಭಾ ಕ್ಷೇತ್ರಗಳಿಗೆ 10 ಕೋಟಿ ಅನುದಾನ



**ಬೆಂಗಳೂರು:** ಬೆಂಗಳೂರು ವ್ಯಾಪ್ತಿಯ ಎಲ್ಲ ವಿಧಾನಸಭಾ ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ತಲಾ 10 ಕೋಟಿ ರೂ. ಮಂಜೂರು ಮಾಡಿ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ಅಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಇತ್ತೀಚೆಗೆ ಹೊರಡಿಸಿರುವ ಆದೇಶ ಇದೀಗ ವಿವಾದಕ್ಕೆ ಗ್ರಾಸವಾಗಿದೆ. ಬಿಜೆಪಿ ಶಾಸಕ ಸಿಕೆ ರಾಮಮೂರ್ತಿ ಅವರ ಕ್ಷೇತ್ರವೊಂದನ್ನು ಬಿಟ್ಟು ಉಳಿದೆಲ್ಲ ಕ್ಷೇತ್ರಗಳಿಗೆ ಅನುದಾನ ಬಿಡುಗಡೆಗೆ ಆದೇಶಿಸಿರುವುದು ದ್ವೇಷದ ರಾಜಕಾರಣವಲ್ಲದೆ ಮತ್ತಿನ್ನೇನೂ ಅಲ್ಲ ಎಂದು ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ.

ಸರ್ಕಾರದ ಕ್ರಮಗಳು ಸೇಡಿನ ರಾಜಕಾರಣದಿಂದ ಕೂಡಿವೆ. ಕಾಂಗ್ರೆಸ್‌ಗೆ ಮತ ಹಾಕದ ನಾಗರಿಕರನ್ನು ಶಿಕ್ಷಿಸಲಾಗುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

**'ಬ್ರ್ಯಾಂಡ್ ಬೆಂಗಳೂರಿನಲ್ಲಿ ಜಯನಗರ ಇಲ್ಲವೇ?':** ಡಿಸಿಎಂ ಡಿಕೆ ಶಿವಕುಮಾರ್ ಬ್ರ್ಯಾಂಡ್ ಬೆಂಗಳೂರಿನ ಬಗ್ಗೆ ಮಾತನಾಡುತ್ತಾರೆ. ಅವರ ಬ್ರ್ಯಾಂಡ್ ಬೆಂಗಳೂರು ಕನಸಿನಲ್ಲಿ ಜಯನಗರ ಇಲ್ಲವೇ ಎಂದು ಜಯನಗರ ಶಾಸಕ ಸಿಕೆ ರಾಮಮೂರ್ತಿ ಪ್ರಶ್ನಿಸಿದ್ದಾರೆ. ತಮ್ಮ ಕ್ಷೇತ್ರಕ್ಕೆ ಉದ್ಯಾನವನಗಳು, ರಸ್ತೆಗಳು ಮತ್ತು ಚರಂಡಿಗಳನ್ನು ನಿರ್ವಹಿಸಲು ಹಣದ ಅಗತ್ಯವಿದೆ ಎಂದು ಅವರು ಹೇಳಿದ್ದಾರೆ.

ಡಿಸಿಎಂ ತಮ್ಮ ವಿವೇಚನಾ ಅಧಿಕಾರ ಬಳಸಿ ಹೊರಡಿಸಿರುವ ಆದೇಶದ ಪ್ರಕಾರ ಬೆಂಗಳೂರಿನ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 10 ಕೋಟಿ ರೂ., ಬೆಂಗಳೂರು ನಗರ ಜಿಲ್ಲೆಯ ಭಾಗವಾಗಿರುವ ಆನೇಕಲ್‌ಗೆ 5 ಕೋಟಿ ರೂ. ಒಟ್ಟು 265 ಕೋಟಿ ರೂ. ಅನುದಾನ ಘೋಷಿಸಲಾಗಿದೆ.

**ಆರ್ ಅಶೋಕ್ ವಾಗ್ದಾಳಿ:** ಬೆಂಗಳೂರಿನ ಜಯನಗರ ಕ್ಷೇತ್ರಕ್ಕೆ ಅನುದಾನ ನೀಡದ ವಿಚಾರವಾಗಿ ಪ್ರತಿಪಕ್ಷ ನಾಯಕ ಆರ್ ಅಶೋಕ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದು, 17 ಮತದಿಂದ ರಾಮಮೂರ್ತಿ ಗೆದ್ದಿದ್ದಕ್ಕೆ ದ್ವೇಷದ ರಾಜಕೀಯ ಮಾಡಲಾಗುತ್ತಿದೆ ಎಂದಿದ್ದಾರೆ. ನಾವು ರಾಮಲಿಂಗಾರೆಡ್ಡಿ, ಕೆಜೆ ಜಾರ್ಜ್‌ಗೆ 80 ಕೋಟಿ ರೂ. ಅನುದಾನ ಕೊಟ್ಟಿದ್ದೆವು. ಅನುದಾನ ಸಂಬಂಧ ಡಿಸಿಎಂ ಡಿಕೆ ಶಿವಕುಮಾರ್‌ಗೆ ನಾನು ಪತ್ರ ಬರೆಯುತ್ತೇನೆ. ದ್ವೇಷದ ರಾಜಕಾರಣ ಮಾಡಬೇಡಿ ಎಂದು ಪತ್ರ ಬರೆಯುತ್ತೇನೆ ಎಂದು ವಿಧಾನಸೌಧದಲ್ಲಿ ಅಶೋಕ್ ಹೇಳಿದ್ದಾರೆ.

**ಬಿಬಿಎಂಪಿ ಅಧಿಕಾರಿಗಳು ಹೇಳಿದ್ದೇನು?:** ಅನುದಾನ ವಿಚಾರದಲ್ಲಿ ಕೆಲವು ಗೊಂದಲಗಳಿದ್ದು, ತಾರತಮ್ಯವಿಲ್ಲದೆ ಹಣ ಮಂಜೂರು ಮಾಡಲಾಗುವುದು ಎಂದು ಬಿಬಿಎಂಪಿಯ ಹಿರಿಯ ಅಧಿಕಾರಿಯೊಬ್ಬರು ಸ್ಪಷ್ಟನೆ ನೀಡಿದ್ದಾರೆ. ಆದೇಶದಲ್ಲಿ, ಯಲಹಂಕ ವಿಧಾನಸಭೆ ಕ್ಷೇತ್ರವನ್ನು ಎರಡು ಬಾರಿ ಉಲ್ಲೇಖಿಸಲಾಗಿದೆ. ಇದು ಕಣ್ತಪ್ಪಿ ನಿಂದ ಆಗಿದೆ ಎಂದು ಭಾವಿಸುತ್ತೇನೆ. ಡಿಸಿಎಂ ಬೆಂಗಳೂರಿನ ಅಭಿವೃದ್ಧಿ ಗುರಿ ಹೊಂದಿದ್ದು, ತಾರತಮ್ಯ ಮಾಡುವುದಿಲ್ಲ. ದೋಷಗಳಿಲ್ಲದ ಪರಿಷ್ಕೃತ ಆದೇಶವನ್ನು ಶೀಘ್ರದಲ್ಲೇ ಹೊರಡಿಸುವ ಸಾಧ್ಯತೆ ಯಿದೆ ಎಂದು ಬಿಬಿಎಂಪಿ ಅಧಿಕಾರಿ ಹೇಳಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com